VOLUME: 16 | 23 JUNE 2026 | ಮಂಗಳವಾರ | RS: 2 | PAGE: 06 ISSUE: 132 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ನಟಿ ಶ್ರೀಲೀಲಾ ಅಂತರರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಭಾಗವಹಿಸಿದ್ದರು. ಈ ವೇಳೆ ಮಹಾರಾಷ್ಟ್ರ ಸಿಎಂ ಪತ್ನಿ ಅಮೃತಾ ಫಡ್ನವೀಸ್ ಅವರು ಶ್ರೀಲೀಲಾ ಅವರಿಗೆ ಫೋಟೋ ಸೆಷನ್ ವೇಳೆ ಅಸಭ್ಯವಾಗಿ ಪಕ್ಕಕ್ಕೆ ಸರಿಯುವಂತೆ ಸನ್ನೆ ಮಾಡಿ ಅವಮಾನಿಸಿದ್ದಾರೆ. ಈ ವಿಡಿಯೋ ಸದ್ಯ ವೈರಲ್ ಆಗಿದ್ದು, ನೆಟ್ಟಿಗರು ಮತ್ತು ಅಭಿಮಾನಿಗಳು ಅಮೃತಾ ಅವರ ಅಹಂಕಾರದ ವರ್ತನೆಗೆ ತೀವ್ರ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
prabhavaa.com
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



ಇತ್ತೀಚೆಗೆ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರ ಹೇಳಿಕೆ ಪಾಕಿಸ್ತಾನದಲ್ಲಿ ಹೊಸ ಆತಂಕಕ್ಕೆ ಕಾರಣವಾಗಿದೆ. 2028ರ ಜೂನ್ ವೇಳೆಗೆ ಸಿಂಧೂ ನದಿ ವ್ಯವಸ್ಥೆಯ ನೀರಿನ ಹರಿವನ್ನು ಪಾಕಿಸ್ತಾನಕ್ಕೆ ಸಂಪೂರ್ಣವಾಗಿ ತಡೆಯುವ ಸಾಮರ್ಥ್ಯ ಭಾರತಕ್ಕೆ ದೊರೆಯಬಹುದು ಎಂಬ ಅರ್ಥದ ಹೇಳಿಕೆ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾಗಿತ್ತು. ಈ ಬೆಳವಣಿಗೆಯ ಬೆನ್ನಲ್ಲೇ ಪಾಕಿಸ್ತಾನದ ರಾಜಕೀಯ ಮತ್ತು ಆಡಳಿತ ವಲಯದಿಂದ ತೀವ್ರ ಪ್ರತಿಕ್ರಿಯೆಗಳು ವ್ಯಕ್ತವಾಗುತ್ತಿವೆ. 2025ರ ಏಪ್ರಿಲ್‌ನಲ್ಲಿ ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರ ದಾಳಿಯಲ್ಲಿ 26 ಮಂದಿ ಮೃತಪಟ್ಟಿದ್ದರು. ಈ ದಾಳಿಗೆ ಪಾಕಿಸ್ತಾನ ಬೆಂಬಲಿತ ಉಗ್ರ ಸಂಘಟನೆಗಳೇ ಕಾರಣ ಎಂದು ಆರೋಪಿಸಿದ ಭಾರತ, ವಿಶ್ವ ಬ್ಯಾಂಕ್ ಮಧ್ಯಸ್ಥಿಕೆಯಲ್ಲಿ 1960ರಲ್ಲಿ ಜಾರಿಗೆ ಬಂದಿದ್ದ ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸಿತ್ತು.

# ನೀರು ಬಿಡಿ... ಇಲ್ಲ ಯುದ್ಧ ಮಾಡುತ್ತೇವೆ...! ಪಾಕ್ ದುರ್ವರ್ತನೆ

ಇಸ್ಲಾಮಾಬಾದ್: ಸಿಂಧೂ ಜಲ ಒಪ್ಪಂದದ ವಿವಾದದ ನಡುವೆ ಭಾರತಕ್ಕೆ ಪಾಕಿಸ್ತಾನ ಮತ್ತೊಮ್ಮೆ ಯುದ್ಧದ ಬೆದರಿಕೆ ಹಾಕಿದೆ. ನೀರು ನಮ್ಮ ರಾಷ್ಟ್ರೀಯ ಭದ್ರತೆಯ ಭಾಗವಾಗಿದ್ದು, ಅದರ ಮೇಲೆ ಯಾವುದೇ ರೀತಿಯ ಅಪಾಯ ಎದುರಾದರೆ ಭಾರತ ವಿರುದ್ಧ ಯುದ್ಧಕ್ಕೂ ಹಿಂಜರಿಯುವುದಿಲ್ಲ ಎಂದು ಪಾಕಿಸ್ತಾನದ ರಕ್ಷಣಾ ಸಚಿವ ಖವಾಜಾ ಆಸಿಫ್ ಉದ್ಧಟತನ ಪ್ರದರ್ಶಿಸಿದ್ದಾರೆ.

ಪಾಕಿಸ್ತಾನದ ಎಆರ್‌ವೈ ನ್ಯೂಸ್ ವಾಹಿನಿಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ಆಸಿಫ್, ನೀರು ಪಾಕಿಸ್ತಾನದ ರಾಷ್ಟ್ರೀಯ ಭದ್ರತೆಯ ಪ್ರಮುಖ ಭಾಗವಾಗಿದ್ದು, ಅದರ ಮೇಲೆ ಯಾವುದೇ ರೀತಿಯ ಅಪಾಯ ಎದುರಾದರೆ ದೇಶ ಮೌನವಾಗಿ ಕುಳಿತುಕೊಳ್ಳುವುದಿಲ್ಲ ಎಂದು ಹೇಳಿದ್ದಾರೆ.

"ನಮ್ಮ ರಾಷ್ಟ್ರೀಯ ಭದ್ರತೆಗೆ ಬೆದರಿಕೆ ಎದುರಾದರೆ, ಅದರಲ್ಲೂ ನೀರು ನಮ್ಮ ಭದ್ರತೆಯ ಭಾಗವಾಗಿರುವುದರಿಂದ, ಭಾರತ ವಿರುದ್ಧ ಯುದ್ಧಕ್ಕೂ ಹೋಗುತ್ತೇವೆ" ಎಂದು ಎಚ್ಚರಿಕೆ ನೀಡಿದ್ದಾರೆ.

ಇತ್ತೀಚೆಗೆ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರ ಹೇಳಿಕೆ ಪಾಕಿಸ್ತಾನದಲ್ಲಿ ಹೊಸ ಆತಂಕಕ್ಕೆ ಕಾರಣವಾಗಿದೆ. 2028ರ ಜೂನ್ ವೇಳೆಗೆ ಸಿಂಧೂ ನದಿ ವ್ಯವಸ್ಥೆಯ ನೀರಿನ ಹರಿವನ್ನು ಪಾಕಿಸ್ತಾನಕ್ಕೆ ಸಂಪೂರ್ಣವಾಗಿ ತಡೆಯುವ ಸಾಮರ್ಥ್ಯ ಭಾರತಕ್ಕೆ ದೊರೆಯಬಹುದು ಎಂಬ ಅರ್ಥದ ಹೇಳಿಕೆ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾಗಿತ್ತು. ಈ ಬೆಳವಣಿಗೆಯ ಬೆನ್ನಲ್ಲೇ ಪಾಕಿಸ್ತಾನದ ರಾಜಕೀಯ ಮತ್ತು ಆಡಳಿತ ವಲಯದಿಂದ ತೀವ್ರ ಪ್ರತಿಕ್ರಿಯೆಗಳು



ವ್ಯಕ್ತವಾಗುತ್ತಿವೆ. 2025ರ ಏಪ್ರಿಲ್‌ನಲ್ಲಿ ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರ ದಾಳಿಯಲ್ಲಿ 26 ಮಂದಿ ಮೃತಪಟ್ಟಿದ್ದರು. ಈ ದಾಳಿಗೆ ಪಾಕಿಸ್ತಾನ ಬೆಂಬಲಿತ ಉಗ್ರ ಸಂಘಟನೆಗಳೇ ಕಾರಣ ಎಂದು ಆರೋಪಿಸಿದ ಭಾರತ, ವಿಶ್ವ ಬ್ಯಾಂಕ್ ಮಧ್ಯಸ್ಥಿಕೆಯಲ್ಲಿ 1960ರಲ್ಲಿ ಜಾರಿಗೆ ಬಂದಿದ್ದ ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸಿತ್ತು.

ಗಡಿ ದಾಟಿ ನಡೆಯುತ್ತಿರುವ ಭಯೋತ್ಪಾದನೆ ವಿರುದ್ಧ ಪಾಕಿಸ್ತಾನ ವಿಶ್ವಾಸಾರ್ಹ ಮತ್ತು ಶಾಶ್ವತ ಕ್ರಮ ಕೈಗೊಳ್ಳುವವರೆಗೆ ಒಪ್ಪಂದವನ್ನು ಮರುಜಾರಿಗೊಳಿಸುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿತ್ತು.

ಸಿಂಧೂ ಜಲ ಒಪ್ಪಂದವು ಭಾರತ ಮತ್ತು ಪಾಕಿಸ್ತಾನ ನಡುವಿನ ಅತ್ಯಂತ ಮಹತ್ವದ ಜಲ ಹಂಚಿಕೆ ಒಪ್ಪಂದಗಳಲ್ಲಿ ಒಂದಾಗಿದೆ. ಈ ಒಪ್ಪಂದದ ಪ್ರಕಾರ ಸಿಂಧೂ ನದಿ ವ್ಯವಸ್ಥೆಯ ಬಹುಪಾಲು ನೀರಿನ ಬಳಕೆಯ ಹಕ್ಕು ಪಾಕಿಸ್ತಾನಕ್ಕೆ ನೀಡಲಾಗಿದೆ.

ಪಾಕಿಸ್ತಾನದ ಕೃಷಿ, ನೀರಾವರಿ ವ್ಯವಸ್ಥೆ, ಕುಡಿಯುವ ನೀರಿನ ಪೂರೈಕೆ ಹಾಗೂ ಆರ್ಥಿಕತೆಯ ದೊಡ್ಡ ಭಾಗ ಈ ನದಿಗಳ ಮೇಲೆ ಅವಲಂಬಿತವಾಗಿದೆ. ಹೀಗಾಗಿ ನೀರಿನ ಹರಿವಿನಲ್ಲಿ ವ್ಯತ್ಯಯ ಉಂಟಾದರೆ ಅದು ದೇಶದ ಆಹಾರ ಭದ್ರತೆ ಮತ್ತು ಆರ್ಥಿಕ ವ್ಯವಸ್ಥೆಯ ಮೇಲೆಯೇ ನೇರ ಪರಿಣಾಮ ಬೀರುವ ಸಾಧ್ಯತೆ ಇದೆ.

ಭಾರತದ ಕ್ರಮಗಳ ವಿರುದ್ಧ ಪಾಕಿಸ್ತಾನ ಈಗಾಗಲೇ ಅಂತರರಾಷ್ಟ್ರೀಯ ವೇದಿಕೆಗಳ ಗಮನ ಸೆಳೆಯಲು ಪ್ರಯತ್ನಿಸುತ್ತಿದೆ.

ಪಾಕಿಸ್ತಾನದ ಉಪಪ್ರಧಾನಿ ಹಾಗೂ ವಿದೇಶಾಂಗ ಸಚಿವ ಇಶಾಕ್ ದಾರ್ ಇತ್ತೀಚೆಗೆ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಮಧ್ಯಸ್ಥಿಕೆ ಕೋರಿದ್ದು, ಭಾರತವು ಸಿಂಧೂ ಜಲ ಒಪ್ಪಂದದ ನಿಯಮಗಳನ್ನು ಉಲ್ಲಂಘಿಸುತ್ತಿದೆ ಎಂದು ಆರೋಪಿಸಿದ್ದಾರೆ. ಅಲ್ಲದೆ, ಚಿನಾಬ್ ನದಿಯ ನೀರನ್ನು ಬೇರೆ ಪ್ರದೇಶಗಳಿಗೆ ವರ್ಗಾಯಿಸುವ ಯೋಜನೆ ರೂಪಿಸುತ್ತಿದೆ ಎಂಬ ಆರೋಪವನ್ನೂ ಮಾಡಿದ್ದಾರೆ.

ಇದರ ನಡುವೆ ಹವಾಮಾನ ಬದಲಾವಣೆ, ನೀರಿನ ಕೊರತೆ ಹಾಗೂ ಹೆಚ್ಚುತ್ತಿರುವ ಜಲ ಬಿಕ್ಕಟ್ಟಿನಿಂದ ಪಾಕಿಸ್ತಾನ ಈಗಾಗಲೇ ಸಂಕಷ್ಟದ ಪರಿಸ್ಥಿತಿಯನ್ನು ಎದುರಿಸುತ್ತಿದೆ. ಈ ಹಿನ್ನೆಲೆಯಲ್ಲಿ ಸಿಂಧೂ ನದಿ ನೀರಿನ ವಿಷಯವು ಕೇವಲ ರಾಜತಾಂತ್ರಿಕ ಅಥವಾ ತಾಂತ್ರಿಕ ವಿಚಾರವಾಗಿರದೆ ರಾಷ್ಟ್ರೀಯ ಭದ್ರತೆಯ ಪ್ರಶ್ನೆಯಾಗಿ ಪರಿವರ್ತನೆಯಾಗಿದೆ.

ಖವಾಜಾ ಆಸಿಫ್ ಅವರ ಯುದ್ಧದ ಎಚ್ಚರಿಕೆ ರಾಜಕೀಯ ಒತ್ತಡದ ತಂತ್ರವೇ ಅಥವಾ ಮುಂದಿನ ದಿನಗಳಲ್ಲಿ ಉಭಯ ರಾಷ್ಟ್ರಗಳ ನಡುವಿನ ಸಂಬಂಧಗಳನ್ನು ಮತ್ತಷ್ಟು ಹದಗೆಡಿಸುವ ಸೂಚನೆಗಳನ್ನು ನೀಡುತ್ತಿವೆ.

ಭಾರತ ಮತ್ತು ಪಾಕಿಸ್ತಾನ ಎರಡೂ ಅಣ್ವಸ್ತ್ರ ಹೊಂದಿರುವ ರಾಷ್ಟ್ರಗಳಾಗಿರುವುದರಿಂದ, ಜಲ ವಿವಾದದಂತಹ ಸೂಕ್ಷ್ಮ ವಿಷಯಗಳಲ್ಲಿ ಇಂತಹ ಹೇಳಿಕೆಗಳು ಪ್ರಾದೇಶಿಕ ಸ್ಥಿರತೆಯ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ.



ಸಿಎಂ ಡಿ ಕೆ ಶಿವಕುಮಾರ್ ಅವರು ಬೆಂಗಳೂರಿನ ವಿಜಯನಗರದಲ್ಲಿರುವ ಆದಿ ಚುಂಚನಗಿರಿ ಶಾಖಾ ಮಠಕ್ಕೆ ಸೋಮವಾರ ರಾತ್ರಿ ಭೇಟಿ ನೀಡಿ, ಮಠಾಧೀಪತಿಗಳಾದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿಗಳ ಆಶೀರ್ವಾದ ಪಡೆದರು.

# 'ಜನಸಾಮಾನ್ಯರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಬೇಕು'

ಬೆಂಗಳೂರು: ಕಂದಾಯ ಇಲಾಖೆಯ ಕಾರ್ಯಕ್ಷಮತೆ ಹೆಚ್ಚಿಸಲು ಸಹಾಯಕ ಆಯುಕ್ತರಿಗೆ ಹೆಚ್ಚಿನ ಜವಾಬ್ದಾರಿ ನೀಡಬೇಕು ಉಪಮುಖ್ಯಮಂತ್ರಿಗಳಾದ ಡಾ.ಜಿ.ಪರಮೇಶ್ವರ ಅವರು ಹೇಳಿದರು.

ವಿಧಾನಸೌಧದಲ್ಲಿ ಇಂದು ಕಂದಾಯ ಇಲಾಖೆಯ ವಿವಿಧ ಯೋಜನೆಗಳು, ಆಡಳಿತಾತ್ಮಕ ಪ್ರಗತಿ ಹಾಗೂ ಸಾರ್ವಜನಿಕ ಸೇವೆಗಳ ಅನುಷ್ಠಾನದ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸಮಗ್ರ ಪರಿಶೀಲನೆ ನಡೆಸಿದ ಅವರು, ಬಾಕಿ ಉಳಿದಿರುವ ಕಡತಗಳನ್ನು ಶೀಘ್ರ ವಿಲೇವಾರಿ ಮಾಡುವಂತೆ ನಿರ್ದೇಶನ ನೀಡಿದರು.

ಪರವಾನಗಿ ಭೂಮಾಪಕರ ಸಮಸ್ಯೆಗಳ ಕುರಿತು ಗಮನ ಹರಿಸಬೇಕೆಂದು ಸೂಚಿಸಿದ ಅವರು, ಭೂಮಾಪಕರ ಸಭೆಯನ್ನು ಕರೆದು ಅವರ ಅಹವಾಲುಗಳು ಹಾಗೂ



ಬೇಡಿಕೆಗಳನ್ನು ಆಲಿಸಬೇಕು. ಭೂಮಾಪಕರ ಸೇವಾ ಹಾಗೂ ವೃತ್ತಿಪರ ಸಮಸ್ಯೆಗಳ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಂಡು, ತ್ವರಿತವಾಗಿ ಇತ್ಯರ್ಥಪಡಿಸಬೇಕು ಎಂದು ಹೇಳಿದರು. ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ವೇಗಗೊಳಿಸಬೇಕು ಎಂದು ಹೇಳಿದರು.

"ರೆಹಮಾನ್ ಅವರ ಪುತ್ರ ಮನ್ಸೂರ್ ಅಲಿ ಖಾನ್ ಅವರನ್ನು ಲೋಕಸಭೆಗೆ ಸ್ಪರ್ಧಿಸುವಂತೆ ಮಾಡಿದೆ. ಆಗ ಎಲ್ಲರೂ ನಗುತ್ತಿದ್ದರು. ಗೆಲುವು ಸೋಲು ಬೇರೆ ವಿಚಾರ, ನಿನಗೆ ಪಕ್ಷ ಗುರುತಿಸುತ್ತಿದೆ ಎಂದು ಭಾವಿಸಿ ಎಂದು ನಾನು ಹೇಳಿದೆ. ಈಗ ರಾಜ್ಯಸಭೆ ಸ್ಥಾನವನ್ನು ಸಿದ್ದರಾಮಯ್ಯ ಅವರಿಗೆ ಅವಕಾಶ ನೀಡಲಾಗಿತ್ತು. ಸಿದ್ದರಾಮಯ್ಯ ಅವರು ಬೇಡ ಎಂದಾಗ. ನಾನು ಸಿದ್ದರಾಮಯ್ಯ ಅವರು, ಹೈಕಮಾಂಡ್ ನಾಯಕರು ಚರ್ಚಿಸಿ ಮನ್ಸೂರ್ ಅಲಿ ಖಾನ್ ಅವರನ್ನು ಆಯ್ಕೆ ಮಾಡಿದೆವು. ಅವರು ಭವಿಷ್ಯದ ಭರವಸೆಯ ನಾಯಕರು. ಹೀಗೆ ನಾವು ಅಲ್ಪಸಂಖ್ಯಾತರಿಗೆ ಅವಕಾಶ ಕಲ್ಪಿಸಿದ್ದೇವೆ" ಎಂದು ತಿಳಿಸಿದರು.

# ಸಂಪುಟ ವಿಸ್ತರಣೆ: ಹೈಕಮಾಂಡ್ ನಿರ್ಧಾರ

ಬೆಂಗಳೂರು: "ಸಚಿವ ಸಂಪುಟ ವಿಸ್ತರಣೆ ಮಾಡುವುದು ಹೈಕಮಾಂಡ್. ಅವರು ಕೊಟ್ಟ ಪಟ್ಟಿಯನ್ನು ಅನುಷ್ಠಾನಗೊಳಿಸುವುದು ನನ್ನ ಕೆಲಸ. ನೀವು ಸಲೀಂ ಅಹ್ಮದ್ ಅವರಿಗೆ ಒಳ್ಳೆಯದಾಗಲಿ ಎಂದು ಮನವಿ ಮಾಡಿದ್ದೀರಿ, ನಿಮ್ಮ ಮನವಿಯನ್ನು ಹೈಕಮಾಂಡ್ ನಾಯಕರಿಗೆ ತಲುಪಿಸುತ್ತೇನೆ" ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಉತ್ತರ ಕರ್ನಾಟಕ ಭಾಗದ 14 ಜಿಲ್ಲೆಗಳ ವಿವಿಧ ದರ್ಗಾಗಳ ಮುಖಸ್ಥರು ಇಂದು ಶಿವಕುಮಾರ್ ಅವರನ್ನು ಭೇಟಿ ಮಾಡಿ ಎಂಎಲ್ ಸಿ ಸಲೀಂ ಅಹ್ಮದ್ ಅವರನ್ನು ಸಚಿವ ಸಂಪುಟದಲ್ಲಿ ಸೇರ್ಪಡೆ ಮಾಡಿಕೊಳ್ಳಬೇಕು ಎಂದು ಸೋಮವಾರ ಮನವಿ ಮಾಡಿದರು. ಈ ವೇಳೆ ಅವರನ್ನು ಉದ್ದೇಶಿಸಿ ಶಿವಕುಮಾರ್ ಅವರು ಮಾತನಾಡಿದರು.

"ಈ ನೆಲದ ಎಲ್ಲಾ ಜಾತಿ, ಧರ್ಮಗಳನ್ನು ಒಟ್ಟಾಗಿ ತೆಗೆದುಕೊಂಡು ಹೋಗುವುದೇ ನಮ್ಮ ಸಿದ್ಧಾಂತ. ಸಂವಿಧಾನವನ್ನು ನಂಬಿದ್ದೇವೆ. ಸಂವಿಧಾನದ ಮೇಲೆ ನಡೆಯುತ್ತಿದ್ದೇವೆ. ಅಲ್ಪಸಂಖ್ಯಾತ ಸಮುದಾಯ ಕಾಂಗ್ರೆಸ್ ಪಕ್ಷವನ್ನು ತಬ್ಬಿದ್ದಾರೆ. ನಾವು ನಿಮ್ಮ ಪರವಾಗಿ ಕೆಲಸ ಮಾಡಿದ್ದೇವೆ. ನಿಮ್ಮೆಲ್ಲರ ಆಶೀರ್ವಾದದಿಂದ ಕಾಂಗ್ರೆಸ್ ಪಕ್ಷ 136 ಸ್ಥಾನಗಳನ್ನು ಗೆದ್ದಿದೆ" ಎಂದರು.

"ಪಕ್ಷ ಅಧಿಕಾರಕ್ಕೆ ಬಂದಾಗ ವರಿಷ್ಠರು ನನ್ನನ್ನೇ ಮುಖ್ಯಮಂತ್ರಿ ಮಾಡುತ್ತಾರೆ ಎಂದುಕೊಂಡಿದ್ದೆ. ಆದರೆ ಸಿದ್ದರಾಮಯ್ಯ ಅವರು ಹಾಗೂ ನೀವು ಅಧಿಕಾರ ಹಂಚಿಕೆ ಮಾಡಿಕೊಳ್ಳಿ ಎಂದು ಸೂಚಿಸಿತು. ಈ ಗುಟ್ಟು ಕೆಲವರಿಗೆ ಬಿಟ್ಟು ಯಾರಿಗೂ ತಿಳಿದಿರಲಿಲ್ಲ. ನಂತರ ಪಕ್ಷದ ಈಗ ಈ ಸ್ಥಾನದಲ್ಲಿ ನನ್ನನ್ನು ಕೂರಿಸಿದೆ. ಸಲೀಂ ಅಹ್ಮದ್ ಅವರಿಗೆ ಒಳ್ಳೆಯದಾಗಲಿ ಎಂದು ಬೆಂಬಲಿಸಲು ನೀವು ಬಂದಿದ್ದೀರಿ. ನಾನು, ಸಲೀಂ, ವಿನಯ್ ಕುಮಾರ್ ಸೊರಕೆ ಎಲ್ಲರೂ ವಿದ್ಯಾರ್ಥಿ ನಾಯಕರಾಗಿದ್ದವರು. ನಾವು ಒಟ್ಟಿಗೆ ರಾಜಕಾರಣ ಮಾಡಿದ್ದೇವೆ. ಅವರಿಗೆ ಎಂಎಲ್ ಸಿ ಮಾಡಬಾರದು ಎಂದು ವಿರೋಧವಿತ್ತು. ನಾನೇ ಕರೆದುಕೊಂಡು ಹೋಗಿ ಸ್ಪರ್ಧಿಸುವಂತೆ ಮಾಡಿದೆ. ಅವರು ಬೆಂಗಳೂರಿನಲ್ಲಿ ನಿಂತಿದ್ದರೆ ಯಾವತ್ತೋ ಲೋಕಸಭೆಗೆ ಆಯ್ಕೆಯಾಗಿರುತ್ತಿದ್ದರು. ಕಾರಣಾಂತರದಿಂದ ಅದು ಸಾಧ್ಯವಾಗಲಿಲ್ಲ. ಅವರಿಗೆ ರಾಷ್ಟ್ರ ಮಟ್ಟದಲ್ಲೂ ಅವಕಾಶವಿತ್ತು" ಎಂದರು.

"ಕೃಷ್ಣ ಅವರ ಕಾಲದಲ್ಲಿ ಸಲೀಂ ಅವರನ್ನು ಚೀಫ್ ವಿಪ್ ಮಾಡಿದ್ದೆವು. ಈಗಲೂ ನಮ್ಮ ಸರ್ಕಾರದಲ್ಲಿ ಮುಖ್ಯ ಸಚೇತಕರಾಗಿದ್ದಾರೆ. ನಮಗೆ ಅವರು ಸಹಕಾರ ನೀಡಿದ್ದಾರೆ. ಇತ್ತೀಚಿಗೆ ಸಲೀಂ ಹಾಗೂ ರಿಜ್ವಾನ್ ಸೇರಿ ಉಪಚುನಾವಣೆಯಲ್ಲಿ ಕೆಲಸ ಮಾಡಿದ್ದಾರೆ" ಎಂದರು.



"ರೆಹಮಾನ್ ಅವರ ಪುತ್ರ ಮನ್ಸೂರ್ ಅಲಿ ಖಾನ್ ಅವರನ್ನು ಲೋಕಸಭೆಗೆ ಸ್ಪರ್ಧಿಸುವಂತೆ ಮಾಡಿದೆ. ಆಗ ಎಲ್ಲರೂ ನಗುತ್ತಿದ್ದರು. ಗೆಲುವು ಸೋಲು ಬೇರೆ ವಿಚಾರ, ನಿನಗೆ ಪಕ್ಷ ಗುರುತಿಸುತ್ತಿದೆ ಎಂದು ಭಾವಿಸಿ ಎಂದು ನಾನು ಹೇಳಿದೆ. ಈಗ ರಾಜ್ಯಸಭೆ ಸ್ಥಾನವನ್ನು ಸಿದ್ದರಾಮಯ್ಯ ಅವರಿಗೆ ಅವಕಾಶ ನೀಡಲಾಗಿತ್ತು. ಸಿದ್ದರಾಮಯ್ಯ ಅವರು ಬೇಡ ಎಂದಾಗ. ನಾನು ಸಿದ್ದರಾಮಯ್ಯ ಅವರು, ಹೈಕಮಾಂಡ್ ನಾಯಕರು ಚರ್ಚಿಸಿ ಮನ್ಸೂರ್ ಅಲಿ ಖಾನ್ ಅವರನ್ನು ಆಯ್ಕೆ ಮಾಡಿದೆವು. ಅವರು ಭವಿಷ್ಯದ ಭರವಸೆಯ ನಾಯಕರು. ಹೀಗೆ ನಾವು ಅಲ್ಪಸಂಖ್ಯಾತರಿಗೆ ಅವಕಾಶ ಕಲ್ಪಿಸಿದ್ದೇವೆ" ಎಂದು ತಿಳಿಸಿದರು.

"ನನಗೂ ಅಧಿಕಾರ ತಡವಾಗಿ ಸಿಕ್ಕಿತು. ನಾನು ಸುಮ್ಮನೆ ಇದ್ದೆ. ಧರಂ ಸಿಂಗ್ ಅವರ ಸರ್ಕಾರದಲ್ಲಿ ನನ್ನನ್ನು, ಪರಮೇಶ್ವರ್ ಅವರನ್ನು ಮಂತ್ರಿ ಮಾಡಲಿಲ್ಲ. ಆಗಲು ತಾಳ್ಮೆಯಿಂದ ಇದ್ದೆವು. ರಾಮನಗರದಲ್ಲಿ ಮಾಜಿ ಮುಖ್ಯಮಂತ್ರಿ ಮಗನ ವಿರುದ್ಧ ಇಕ್ಬಾಲ್ ಹುಸೇನ್ ನಿಲ್ಲಿಸಿ ಗೆಲ್ಲಿಸುವುದು ಸುಲಭದ ಮಾತಲ್ಲ. ಬೊಮ್ಮಾಯಿ ಅವರ ಮಗನ ವಿರುದ್ಧವೂ ಪಠಾಣ್ ಅವರನ್ನು ನಿಲ್ಲಿಸಿ ಗೆಲ್ಲಿಸುವುದು ಸುಲಭವಾಗಿ ಇರಲಿಲ್ಲ. ನಮ್ಮವರ ಅಭಿಪ್ರಾಯ ಬೇರೆ ಇತ್ತು. ಆದರೆ ನಾನು ಸಮೀಕ್ಷೆ ಮಾಡಿಸಿದೆ" ಎಂದು ಹೇಳಿದರು.

"ಯು. ಟಿ ಖಾದರ್ ಕಳೆದ ಬಾರಿಯೇ ಮಂತ್ರಿ ಆಗಬೇಕಿತ್ತು. ಆದರೆ ಅವರು ತ್ಯಾಗ ಮಾಡಿ, ಸ್ಪೀಕರ್ ಆದರು. ಅವರಿಗೆ ನಾವು ನೀವು ಬಯಸಿದ ಖಾತೆ ನೀಡುವುದಾಗಿ ಮಾತು ಕೊಟ್ಟಿದ್ದವು. ಈಗ ಆರೋಗ್ಯ ಇಲಾಖೆ ನೀಡಿದ್ದೇವೆ" ಎಂದರು.

"ಈ ಮಧ್ಯೆ ಅನೇಕ ಗೊಂದಲವಾಗಿದ್ದು, ಕೆಲವು ಸ್ವಾಮೀಜಿಗಳು ಸೇರಿದಂತೆ ಮತ್ತೊಬ್ಬರನ್ನು ಮಂತ್ರಿ ಮಾಡಿ ಎಂದು ಹೇಳುತ್ತಿದ್ದಾರೆ. ನೀವುಗಳು ಸಲೀಂ ಅಹ್ಮದ್ ಅವರನ್ನು ಮಾಡಿ ಎಂದು ಹೇಳುತ್ತಿದ್ದೀರಿ. "ರೆಹಮಾನ್ ಅವರ ಪುತ್ರ ಮನ್ಸೂರ್ ಅಲಿ ಖಾನ್ ಅವರನ್ನು ಲೋಕಸಭೆಗೆ ಸ್ಪರ್ಧಿಸುವಂತೆ ಮಾಡಿದೆ. ಆಗ ಎಲ್ಲರೂ ನಗುತ್ತಿದ್ದರು. ಗೆಲುವು ಸೋಲು ಬೇರೆ ವಿಚಾರ, ನಿನಗೆ ಪಕ್ಷ ಗುರುತಿಸುತ್ತಿದೆ ಎಂದು ಭಾವಿಸಿ ಎಂದು ನಾನು ಹೇಳಿದೆ. ಈಗ ರಾಜ್ಯಸಭೆ ಸ್ಥಾನವನ್ನು ಸಿದ್ದರಾಮಯ್ಯ ಅವರಿಗೆ ಅವಕಾಶ ನೀಡಲಾಗಿತ್ತು. ಸಿದ್ದರಾಮಯ್ಯ ಅವರು ಬೇಡ ಎಂದಾಗ. ನಾನು ಸಿದ್ದರಾಮಯ್ಯ ಅವರು, ಹೈಕಮಾಂಡ್ ನಾಯಕರು ಚರ್ಚಿಸಿ ಮನ್ಸೂರ್ ಅಲಿ ಖಾನ್ ಅವರನ್ನು ಆಯ್ಕೆ ಮಾಡಿದೆವು.

ಭವಿಷ್ಯದ ಭರವಸೆಯ ನಾಯಕರು. ಹೀಗೆ ನಾವು ಅಲ್ಪಸಂಖ್ಯಾತರಿಗೆ ಅವಕಾಶ ಕಲ್ಪಿಸಿದ್ದೇವೆ" ಎಂದು ತಿಳಿಸಿದರು.

ಹೀಗೆ ಒಕ್ಕಲಿಗರು, ಲಿಂಗಾಯತರು, ಕ್ರೈಸ್ತ ಸಮುದಾಯದವರು ಒಬ್ಬೊಬ್ಬರ ಹೆಸರು ಹೇಳುತ್ತಿದ್ದಾರೆ. ಈ ಪರಿಸ್ಥಿತಿಯಲ್ಲಿ ರಾಜಕೀಯವಾಗಿ ತೀರ್ಮಾನ ಮಾಡಲು ಕಷ್ಟವಾಗುತ್ತದೆ. ನಾನು ನಮ್ಮ ಕಷ್ಟವನ್ನು ನಿಮ್ಮ ಜೊತೆ ಹಂಚಿಕೊಳ್ಳುತ್ತಿರುವೆ. ಪಕ್ಷದ ಎಲ್ಲಾ ಅಲ್ಪಸಂಖ್ಯಾತ ಮುಖಂಡರು ಚೆನ್ನಾಗಿ ಕೆಲಸ ಮಾಡಿದ್ದಾರೆ. ನಾನು ವರಿಷ್ಠರ ಜೊತೆ ಚರ್ಚೆ ಮಾಡಿ ತೀರ್ಮಾನ ಮಾಡುತ್ತೇವೆ" ಎಂದರು.



ಭಾರತ ಸಾರಥಿ 23/06/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಉಪಶಮನ ಆರೈಕೆ ಸೇವೆ ಬಲವರ್ಧನೆಗೆ ಜಿಲ್ಲಾಡಳಿತ–ನಿರಾಮ್ ಸಹಯೋಗ

ತುಮಕೂರು

ಜಿಲ್ಲೆಯಲ್ಲಿನ ಉಪಶಮನ ಆರೈಕೆ (ಪ್ಯಾಲಿಯೇಟಿವ್ ಕೇರ್) ಸೇವೆಗಳನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ತುಮಕೂರು ಜಿಲ್ಲಾಡಳಿತ ಮತ್ತು ನಿರಾಮ್‌ಆರ್‌ಐಎಂಎಚ್ ಪ್ಯಾಲಿಯೇಟಿವ್ ಕೇರ್ ಸೆಂಟರ್ ನಡುವಿನ ತಿಳುವಳಿಕೆ ಪತ್ರಕ್ಕೆ (ಎಂಒಯು) ಸಹಿ ಹಾಕಲಾಗಿದೆ.

ತುಮಕೂರಿನ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಶ್ರೀಮತಿ ಶುಭ ಕಲ್ಯಾಣ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಚಂದ್ರಶೇಖರ್ ಜಿ. ಹಾಗೂ ಅಜಿತ್ ಐಸಾಕ್ ಫೌಂಡೇಶನ್ ಪ್ರತಿನಿಧಿಗಳ ಸಮ್ಮುಖದಲ್ಲಿ ಒಪ್ಪಂದಕ್ಕೆ ಸಹಿ ಹಾಕಲಾಯಿತು.

ಈ ಸಹಯೋಗದ ಮೂಲಕ ಜಿಲ್ಲೆಯಾದ್ಯಂತ ಉಪಶಮನ ಆರೈಕೆಯ ಕುರಿತು ಜಾಗೃತಿ ಮೂಡಿಸುವುದು, ಆರೋಗ್ಯ ಸಿಬ್ಬಂದಿಯ ಸಾಮರ್ಥ್ಯ ವೃದ್ಧಿಸುವುದು ಹಾಗೂ ಸೇವೆಗಳ ಪ್ರವೇಶವನ್ನು ವಿಸ್ತರಿಸುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತದೆ.

ತುಮಕೂರಿನ ಸಿರಾ ರಸ್ತೆಯಲ್ಲಿರುವ ಗ್ರಾಮೀಣ ಭಾರತ ಮಿಷನ್ ಆಸ್ಪತ್ರೆ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿರುವ ನಿರಾಮ್ ಆರ್‌ಐಎಂಎಚ್ ಪ್ಯಾಲಿಯೇಟಿವ್ ಕೇರ್ ಸೆಂಟರ್, ಅಜಿತ್ ಐಸಾಕ್ ಫೌಂಡೇಶನ್‌ನ ಮಹತ್ವಾಕಾಂಕ್ಷಿ ಯೋಜನೆಯಾಗಿದೆ. ಈ ಕೇಂದ್ರವು ಗೃಹ ಆರೈಕೆ, ಹೊರರೋಗಿ ಹಾಗೂ ಒಳರೋಗಿ ಸೇವೆಗಳ ಮೂಲಕ ಉಪಶಮನ ಆರೈಕೆಯನ್ನು ಒದಗಿಸುತ್ತಿದೆ. ಸಾರ್ವಜನಿಕ ಆರೋಗ್ಯ ಮತ್ತು ಉಪಶಮನ ಆರೈಕೆ ಕ್ಷೇತ್ರದಲ್ಲಿ ಜಾಗತಿಕ ಖ್ಯಾತಿ ಪಡೆದಿರುವ ಅಮೆರಿಕದ ಜಾನ್ಸ್ ಹಾಪ್ಕಿನ್ಸ್ ವಿಶ್ವವಿದ್ಯಾಲಯದೊಂದಿಗೆ ಈ ಕೇಂದ್ರವು ತಾಂತ್ರಿಕ ಸಹಭಾಗಿತ್ವ ಹೊಂದಿದೆ.

ಉಪಶಮನ ಆರೈಕೆ ಎಂದರೆ ಗಂಭೀರ, ದೀರ್ಘಕಾಲೀನ ಅಥವಾ ಮಾರಕ ಕಾಯಿಲೆಗಳಿಂದ ಬಳಲುತ್ತಿರುವ ರೋಗಿಗಳಿಗೆ ರೋಗಲಕ್ಷಣಗಳ ನಿವಾರಣೆ, ಸಾಂತ್ವನ ಮತ್ತು ಸಮಗ್ರ ಬೆಂಬಲ ಒದಗಿಸುವ ವಿಶೇಷ ವೈದ್ಯಕೀಯ ಸೇವೆಯಾಗಿದೆ. ಇದು ರೋಗಿಗಳು ಹಾಗೂ ಅವರ ಕುಟುಂಬಗಳ ದೈಹಿಕ, ಮಾನಸಿಕ, ಸಾಮಾಜಿಕ, ಆರ್ಥಿಕ ಮತ್ತು ಆಧ್ಯಾತ್ಮಿಕ ಅಗತ್ಯಗಳನ್ನು ಪೂರೈಸುವ ಮೂಲಕ ಘನತೆಯ ಬದುಕು ಮತ್ತು ಆರೈಕೆಗೆ ಒತ್ತು ನೀಡುತ್ತದೆ. ಕೇಂದ್ರದ ಒಳರೋಗಿ ಸೇವಾ ವಿಭಾಗವು ಈ ವರ್ಷದ ಏಪ್ರಿಲ್‌ನಿಂದ ಕಾರ್ಯಾರಂಭ ಮಾಡಿದ್ದು, ಕಳೆದ ವರ್ಷದ ಅಕ್ಟೋಬರ್ 25ರಿಂದಲೇ ಗೃಹ ಆರೈಕೆ ಸೇವೆಗಳನ್ನು ಯಶಸ್ವಿಯಾಗಿ ನೀಡುತ್ತಿದೆ.

ಕರ್ನಾಟಕ ಸೇರಿದಂತೆ ದೇಶದಾದ್ಯಂತ ಸಾರ್ವಜನಿಕ ಆರೋಗ್ಯ ವ್ಯವಸ್ಥೆಯಲ್ಲಿ ಉಪಶಮನ ಆರೈಕೆಗೆ ಹೆಚ್ಚಿನ ಮಹತ್ವ ದೊರೆಯುತ್ತಿರುವ ಸಂದರ್ಭದಲ್ಲಿ ಈ ಸಹಯೋಗ ಮಹತ್ವ ಪಡೆದಿದೆ. ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸುವ ಮೂಲಕ ಜಿಲ್ಲೆಯ ಪ್ರತಿಯೊಬ್ಬ ಅಗತ್ಯವಿರುವ ವ್ಯಕ್ತಿಗೂ ಗುಣಮಟ್ಟದ ಉಪಶಮನ ಆರೈಕೆ ಸೇವೆ ತಲುಪಿಸಲು ನಿರಾಮ್ ಬದ್ಧವಾಗಿದೆ ಎಂದು ಸಂಸ್ಥೆಯ ಪ್ರತಿನಿಧಿಗಳು ತಿಳಿಸಿದ್ದಾರೆ.

## ಮಾಜಿ ಶಾಸಕ ಕೆ.ಆರ್ ಶ್ರೀನಿವಾಸಯ್ಯ ನಿಧನ ಕೋಲಾರಕ್ಕೆ ತುಂಬಲಾರದ ನಷ್ಟ

ಕೋಲಾರ

ಹಿರಿಯ ವಕೀಲರು ಹಾಗೂ ಮಾಜಿ ಶಾಸಕ ಕೆ.ಆರ್.ಶ್ರೀನಿವಾಸಯ್ಯ ಅವರು ನಿಧನದ ಹಿನ್ನೆಲೆಯಲ್ಲಿ ಪಾರ್ಥಿವ ಶರೀರದ ಅಂತಿಮ ದರ್ಶನವನ್ನು ಶಾಸಕ ಕೊತ್ತೂರು ಮಂಜುನಾಥ್ ಶನಿವಾರ ಅಂತಿಮ ನಮನಗಳನ್ನು ಸಲ್ಲಿಸಿದರು.

ಕೆ.ಆರ್. ಶ್ರೀನಿವಾಸಯ್ಯ ಅವರ ನಿಧನಕ್ಕೆ ತೀವ್ರ ಕಳವಳ ವ್ಯಕ್ತಪಡಿಸಿದ ಕೊತ್ತೂರು ಮಂಜುನಾಥ್, ಹಿರಿಯ ವಕೀಲರಾಗಿ ಹಾಗೂ ರಾಜಕೀಯ ಧುರೀಣರಾಗಿ ಸೇವೆ ಸಲ್ಲಿಸಿದ್ದರು ಅವರ ನಿಧನವು ಕೋಲಾರ ಜಿಲ್ಲೆಗೆ ಹಾಗೂ ಸಾರ್ವಜನಿಕ ಜೀವನಕ್ಕೆ ತುಂಬಲಾರದ ನಷ್ಟವಾಗಿದೆ. ಸಾರ್ವಜನಿಕ ಸೇವೆಗೆ ಅವರ ಸಮರ್ಪಣೆ, ಜನರ ಕಲ್ಯಾಣಕ್ಕೆ ಅವರು ತೋರಿದ ಬದ್ಧತೆ ಮತ್ತು ಅವರ ಅನುಕರಣೀಯ ನಾಯಕತ್ವವು ಮುಂದಿನ ಪೀಳಿಗೆಗೆ ಎಂದಿಗೂ ಸ್ಫೂರ್ತಿ ನೀಡುತ್ತದೆ ಎಂದು ಸ್ಮರಿಸಿದರು.

ಕಾನೂನು ಕ್ಷೇತ್ರದಲ್ಲೂ ಅಪಾರ ಗೌರವ ಗಳಿಸಿದ್ದ ಅವರು, ಸಮಾಜಕ್ಕೆ ಸೇವೆ ಸಲ್ಲಿಸುವಲ್ಲಿ ನಮಗೆ ತೋರಿಸಿಕೊಟ್ಟ ಮೌಲ್ಯಗಳು ಮತ್ತು ಮಾರ್ಗವನ್ನು ನಾವು ಯಾವಾಗಲೂ ಪಾಲಿಸುತ್ತೇವೆ. ಭಗವಂತನು ಅವರ ಆತ್ಮಕ್ಕೆ ಚಿರಶಾಂತಿಯನ್ನು ನೀಡಲಿ ಎಂದು ಶಾಸಕ ಕೊತ್ತೂರು ಮಂಜುನಾಥ್ ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಎಂಎಲ್ಸಿ ಎಂ.ಎಲ್ ಅನಿಲ್ ಕುಮಾರ್, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೈಲಾಂಡಹಳ್ಳಿ ಮುರಳಿ ಸೇರಿದಂತೆ ಇತರರು ಶ್ರೀನಿವಾಸಯ್ಯ ಅವರ ಅಂತಿಮ ದರ್ಶನ ಪ್ರಡೆದು ಶ್ರದ್ಧಾಂಜಲಿ ಸಲ್ಲಿಸಿದರು.

## 26 ರಂದು ಕು.ಅನನ್ಯ ಜಯತೀರ್ಥ ದೇಸಾಯಿ ಅವರ ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮ

ಬೆಂಗಳೂರು

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ (ರಿ) ವತಿಯಿಂದ ಪ್ರತಿ ತಿಂಗಳು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಿದ್ದು ಈ ಬಾರಿ ಜೂ.26ರಂದು ಸಂಜೆ 6:30 ರಿಂದ 7:30ರವರೆಗೆ ಕೊಪಪ್ಪಳದ ಕುಮಾರಿ ಅನನ್ಯ ಜಯತೀರ್ಥ ದೇಸಾಯಿ ಅವರ ತಂಡದವರು ಈ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಡಲಿದ್ದಾರೆ.

ಬನಶಂಕರಿ 2ನೇ ಹಂತದ ಗಾಯತ್ರಿ ಭವನದಲ್ಲಿ ಕುಮಾರಿ ಅನನ್ಯ ಜಯತೀರ್ಥ ದೇಸಾಯಿ ಇವರ ತಂಡದವರಿಂದ ಸಂಗೀತ ಕಾರ್ಯಕ್ರಮವಿದ್ದು, ಪ್ರಭಾಕರ್ ವಸಂತರಾವ್ ಪಠವಾರಿ ಹಾರ್ಮೋನಿಯಂ, ಬಾಗಲಕೋಟೆಯ ಮಧುಸೂದನ್ ಕೊಪ್ಪ ಇವರಿಂದ ತಬಲ, ಗುರುರಾಜ್ ಎನ್. ಜೋಷಿ ಅವರ ತಾಳವಾದ್ಯ ಇರಲಿದೆ.

ಶಿಕ್ಷಣ ಕ್ಷೇತ್ರದ ಸಾಧನೆಗಾಗಿ ಜಿ.ಎಸ್. ಮಂಜುನಾಥ್(ಜಿ.ಕೆ. ಮಾಸ್ಟರ್), ಹಾಸನ. ವಿದ್ವಾನ್ ಎಸ್.ಆರ್. ಮಾರುತಿ ಪ್ರಸಾದ್ (ಸಂಗೀತ) ಬೆಂಗಳೂರು, ಎಸ್. ಬಾಲಸುಬ್ರಹ್ಮಣ್ಯ (ಸ್ನೇಕ್ ಶ್ಯಾಮ್) ಮೈಸೂರು ಇವರಿಗೆ ಸನ್ಮಾನ ಕಾರ್ಯಕ್ರಮ ಜರುಗಲಿದೆ.

# ಕ್ರಿಪ್ಟೋ ಹೂಡಿಕೆದಾರರು ದೇಶದಲ್ಲೇ ಅತ್ಯಂತ ಶಿಸ್ತುಬದ್ಧರು

ಬೆಂಗಳೂರು

ಭಾರತದ ಕ್ರಿಪ್ಟೋ ಹೂಡಿಕೆ ವಲಯದಲ್ಲಿ ಕರ್ನಾಟಕದ ಹೂಡಿಕೆದಾರರು ಅತ್ಯಂತ ಶಿಸ್ತುಬದ್ಧ ಮತ್ತು ಪ್ರಬುದ್ಧ ಹೂಡಿಕೆದಾರರಾಗಿ ಹೊರಹೊಮ್ಮಿದ್ದಾರೆ. ದೇಶದ ಪ್ರಮುಖ ಕ್ರಿಪ್ಟೋ ವಿನಿಮಯ ವೇದಿಕೆಯಾದ ಮಡ್ರೆಕ್ಸ್ ಬಿಡುಗಡೆ ಮಾಡಿರುವ "ಹೌ ಇಂಡಿಯಾ ಟ್ರೇಡ್ಸ್ ಕ್ರಿಪ್ಟೋ 2026" ವರದಿಯ ಪ್ರಕಾರ, ಮಾರುಕಟ್ಟೆಯಲ್ಲಿ ತೀವ್ರ ಏರಿಳಿತ ಉಂಟಾದ ಸಂದರ್ಭದಲ್ಲಿಯೂ ಕರ್ನಾಟಕದ ಕೇವಲ 3.2 ಶೇಕಡ ಮಂದಿ ಮಾತ್ರ ಆತಂಕದಿಂದ ನಿರ್ಧಾರ ಕೈಗೊಳ್ಳುತ್ತಾರೆ. ಇದು ರಾಷ್ಟ್ರೀಯ ಸರಾಸರಿ 9 ಶೇಕಡಕ್ಕಿಂತ ಗಮನಾರ್ಹವಾಗಿ ಕಡಿಮೆ ಪ್ರಮಾಣವಾಗಿದೆ.

ದೇಶದ 22 ರಾಜ್ಯಗಳ 6,120ಕ್ಕೂ ಹೆಚ್ಚು ಸಕ್ರಿಯ ಕ್ರಿಪ್ಟೋ ಹೂಡಿಕೆದಾರರು ಮತ್ತು ವಹಿವಾಟುದಾರರನ್ನು ಒಳಗೊಂಡ ಸಮೀಕ್ಷೆಯ ಆಧಾರದ ಮೇಲೆ ಈ ವರದಿ ಸಿದ್ಧಗೊಂಡಿದ್ದು, ಕರ್ನಾಟಕವು ದೀರ್ಘಕಾಲಿಕ ಹೂಡಿಕೆ ಹಾಗೂ ಎಚ್ಚರಿಕೆಯ ಬಂಡವಾಳ ನಿರ್ವಹಣೆಯಲ್ಲಿ ದೇಶದ ಮುಂಚೂಣಿ ರಾಜ್ಯಗಳಲ್ಲಿ ಒಂದಾಗಿದೆ ಎಂಬುದನ್ನು ಬಹಿರಂಗಪಡಿಸಿದೆ.

ವರದಿ ಪ್ರಕಾರ, ಕರ್ನಾಟಕದ 51 ಶೇಕಡ ಕ್ರಿಪ್ಟೋ ಹೂಡಿಕೆದಾರರು ತಮ್ಮನ್ನು ದೀರ್ಘಕಾಲಿಕ ಹೂಡಿಕೆದಾರರು ಎಂದು ಗುರುತಿಸಿಕೊಂಡಿದ್ದಾರೆ. ರಾಷ್ಟ್ರೀಯ ಮಟ್ಟದಲ್ಲಿ ಈ ಪ್ರಮಾಣ 41.2 ಶೇಕಡ ಮಾತ್ರವಾಗಿದ್ದು, ರಾಜ್ಯದ ಹೂಡಿಕೆದಾರರು ಕ್ಷಣಿಕ ಲಾಭಕ್ಕಿಂತ ದೀರ್ಘಕಾಲಿಕ ಬೆಳವಣಿಗೆಯತ್ತ ಹೆಚ್ಚು ಗಮನ ಹರಿಸುತ್ತಿರುವುದು ಸ್ಪಷ್ಟವಾಗಿದೆ.

ರಾಷ್ಟ್ರೀಯ ಸರಾಸರಿ 48.4 ಶೇಕಡವಾಗಿದ್ದು, ಕರ್ನಾಟಕದ ಹೂಡಿಕೆದಾರರು ಅಪಾಯ ನಿರ್ವಹಣೆಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದಾರೆ ಎಂಬುದನ್ನು ಇದು ತೋರಿಸುತ್ತದೆ. ದೇಶಾದ್ಯಂತ ಮಾರುಕಟ್ಟೆಯ ಏರಿಳಿತದ ಸಮಯದಲ್ಲಿ 10ರಲ್ಲಿ 9 ಮಂದಿ ಹೂಡಿಕೆದಾರರು ಆತಂಕದಿಂದ ವಹಿವಾಟು ನಡೆಸುವುದನ್ನು ತಪ್ಪಿಸುತ್ತಿದ್ದಾರೆ ಎಂಬುದನ್ನೂ ವರದಿ ಉಲ್ಲೇಖಿಸಿದೆ. ಇದೇ ವೇಳೆ ಕ್ರಮಬದ್ಧ ಹೂಡಿಕೆ ಪದ್ಧತಿಗೆ ಹೆಚ್ಚುತ್ತಿರುವ ಒಲವಿನಿಂದ ಕ್ರಿಪ್ಟೋ ಎಸ್‌ಐಪಿ ಆರಂಭಗಳು 220 ಶೇಕಡಕ್ಕಿಂತ ಹೆಚ್ಚು ಏರಿಕೆ ಕಂಡಿವೆ.

# ಉತ್ಪಾದನಾ ಸಾಮರ್ಥ್ಯ ವಿಸ್ತರಣೆ

ಸೂರತ್

ಪಾಲಿಯೆಸ್ಟರ್ ಚಿಪ್ಸ್, ಪಾರ್ಷಿಯಲಿ ಓರಿಯೆಂಟೆಡ್ ನೂಲು, ಫುಲ್ಲಿ ಡ್ರಾನ್ ನೂಲು ಹಾಗೂ ಪಾಲಿಯೆಸ್ಟರ್ ಟೆಕ್ಸ್ಚರೈಸ್ಡ್ ನೂಲು ಉತ್ಪಾದನೆಯಲ್ಲಿ ತೊಡಗಿರುವ ಸುಮೀತ್ ಇಂಡಸ್ಟ್ರೀಸ್ ಲಿಮಿಟೆಡ್ ಸಂಸ್ಥೆಯು ತನ್ನ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸುವುದು ಹಾಗೂ ದೀರ್ಘಕಾಲಿಕ ಬೆಳವಣಿಗೆಗೆ ಬಲ ತುಂಬುವ ಉದ್ದೇಶದಿಂದ ರೂ.199.75 ಕೋಟಿ ಮೊತ್ತದ ಹಕ್ಕು ಷೇರು ಬಿಡುಗಡೆ ಮಾಡಿದೆ.

ಕಂಪನಿಯು ರೂ.11.86 ಪ್ರತಿ ಷೇರಿನ ದರದಲ್ಲಿ 16.84 ಕೋಟಿ ಈಕ್ವಿಟಿ ಷೇರುಗಳನ್ನು ಬಿಡುಗಡೆ ಮಾಡಲಿದ್ದು, ಅರ್ಹ ಷೇರುದಾರರಿಗೆ ಪ್ರತಿ 25 ಷೇರುಗಳಿಗೆ 8 ಹಕ್ಕು ಷೇರುಗಳ ಅನುಪಾತದಲ್ಲಿ ಹಂಚಿಕೆ ಮಾಡಲಿದೆ. ಹಕ್ಕು ಷೇರುಗಳಿಗೆ ದಾಖಲಾತಿ ದಿನಾಂಕ ಜೂನ್ 12, 2026 ಆಗಿದ್ದು, ಜೂನ್ 22ರಂದು ಆರಂಭವಾದ ಇಶ್ಯೂ ಜುಲೈ 20, 2026ರಂದು ಮುಕ್ತಾಯಗೊಳ್ಳಲಿದೆ.

ಹಕ್ಕು ಷೇರುಗಳ ಮೂಲಕ ಸಂಗ್ರಹವಾಗುವ ನಿಧಿಯ ಪ್ರಮುಖ ಭಾಗವನ್ನು ನಕೋಡಾ ಲಿಮಿಟೆಡ್‌ನಿಂದ ಸ್ವಾಧೀನಪಡಿಸಿಕೊಂಡಿರುವ ಹೆಚ್ಚುವರಿ 1.40 ಲಕ್ಷ ಟನ್ ವಾರ್ಷಿಕ ಸಾಮರ್ಥ್ಯದ ಪಾಲಿಯೆಸ್ಟರ್ ಚಿಪ್ಸ್ ಉತ್ಪಾದನಾ ಘಟಕದ ಪುನಶ್ಚೇತನ ಮತ್ತು ಕಾರ್ಯಾಚರಣೆಗೆ ಬಳಸಲಾಗುತ್ತದೆ.

ಈ ಯೋಜನೆಯ ಒಟ್ಟು ಹೂಡಿಕೆ ರೂ.90 ಕೋಟಿ ಆಗಿದ್ದು, ಅದರಲ್ಲಿ ರೂ.49 ಕೋಟಿ ಹಕ್ಕು ಷೇರುಗಳ ಮೂಲಕ ಹಾಗೂ ಉಳಿದ ಮೊತ್ತವನ್ನು ಆಂತರಿಕ ಸಂಪನ್ಮೂಲಗಳಿಂದ ಭರಿಸಲಾಗುತ್ತದೆ. ಘಟಕವು 2027–28ನೇ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಕಾರ್ಯಾರಂಭ ಮಾಡುವ ನಿರೀಕ್ಷೆಯಿದೆ.

ಹಕ್ಕು ಷೇರುಗಳಿಂದ ಲಭಿಸುವ ಸುಮಾರು ರೂ.194.90 ಕೋಟಿ ನಿವ್ವಳ ಆದಾಯದಲ್ಲಿ ರೂ.100 ಕೋಟಿಯನ್ನು ಕಾರ್ಯನಿರ್ವಹಣಾ ಬಂಡವಾಳಕ್ಕೆ, ರೂ.49.90 ಕೋಟಿಯನ್ನು ನಕೋಡಾ ಆಸ್ತಿಗಳ ಏಕೀಕರಣಕ್ಕೆ, ರೂ.23 ಕೋಟಿಯನ್ನು ಸಾಲ ಮರುಪಾವತಿಗೆ ಹಾಗೂ ರೂ.22 ಕೋಟಿಯನ್ನು 6.5 ಮೆಗಾವ್ಯಾಟ್ ಸಾಮರ್ಥ್ಯದ ಸೌರ ವಿದ್ಯುತ್ ಘಟಕ ಸ್ಥಾಪನೆಗೆ ಬಳಸಲು ಕಂಪನಿ ಉದ್ದೇಶಿಸಿದೆ.

## ಕಿತ್ತಗನೂರು ಕೆರೆ ಪುನರುಜ್ಜೀವನ: 24 ಸಾವಿರಕ್ಕೂ ಹೆಚ್ಚು ನಿವಾಸಿಗಳಿಗೆ ಲಾಭ

ಬೆಂಗಳೂರು



ಡೈಮ್ಲರ್ ಟ್ರಕ್ ಇನೋವೇಷನ್ ಸೆಂಟರ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಹಾಗೂ ಯುನೈಟೆಡ್ ವೇ ಬೆಂಗಳೂರು ಸಂಸ್ಥೆಗಳ ಸಹಭಾಗಿತ್ವದಲ್ಲಿ ಪೂರ್ವ ಬೆಂಗಳೂರಿನ 25 ಏಕರೆ ವಿಸ್ತೀರ್ಣದ ಕಿತ್ತಗನೂರು ಕೆರೆಯನ್ನು ಯಶಸ್ವಿಯಾಗಿ ಪುನರುಜ್ಜೀವನಗೊಳಿಸಲಾಗಿದ್ದು, ಇದರ ಪ್ರಯೋಜನವನ್ನು 24,000ಕ್ಕೂ ಹೆಚ್ಚು ನಿವಾಸಿಗಳು ಪಡೆಯಲಿದ್ದಾರೆ. ಯುನೈಟೆಡ್ ವೇ ಬೆಂಗಳೂರಿನ 'ವೇಕ್ ದ ಲೇಕ್' ಅಭಿಯಾನದಡಿ ಕೈಗೊಂಡ ಈ ಯೋಜನೆಯ ಮೂಲಕ ಕೆರೆಯ ಪುನಶ್ಚೇತನ ಕಾರ್ಯಗಳನ್ನು ಪೂರ್ಣಗೊಳಿಸಿ, ಜೂನ್ 5ರಂದು ವಿಶ್ವ ಪರಿಸರ ದಿನಾಚರಣೆಯ ಸಂದರ್ಭದಲ್ಲಿ ಗ್ರಾಮ ಪಂಚಾಯತಿಗೆ ಅಧಿಕೃತವಾಗಿ ಹಸ್ತಾಂತರಿಸಲಾಯಿತು.

ಈ ಯೋಜನೆಯು ಬೆಂಗಳೂರಿನ ಜಲ ಸಂಪನ್ಮೂಲಗಳ ಸಂರಕ್ಷಣೆ ಹಾಗೂ ಪರಿಸರ ಪುನರುತ್ಥಾನದತ್ತ ಮಹತ್ವದ ಹೆಜ್ಜೆಯಾಗಿ ಪರಿಗಣಿಸಲಾಗಿದೆ. ಹಸ್ತಾಂತರ ಸಮಾರಂಭದಲ್ಲಿ ಮಾತನಾಡಿದ ಮಹದೇವಪುರ ವಿಧಾನಸಭಾ ಕ್ಷೇತ್ರದ ಶಾಸಕಿ ಮಂಜುಳಾ ಅರವಿಂದ ಲಿಂಬಾವಳಿ ಅವರು, ಕಿತ್ತಗನೂರು ಕೆರೆಯನ್ನು ಮರುಜೀವಂತಗೊಳಿಸಿದ ಎಲ್ಲ ಸಂಸ್ಥೆಗಳು ಹಾಗೂ ಸಮುದಾಯದ ಪ್ರಯತ್ನಗಳನ್ನು ಶ್ಲಾಘಿಸಿದರು.

ಕೆರೆ ಪುನರುಜ್ಜೀವನವು ಪರಿಸರ ಸಂರಕ್ಷಣೆಯ ದೀರ್ಘ ಪಯಣದ ಮೊದಲ ಹೆಜ್ಜೆಯಷ್ಟೇ ಆಗಿದ್ದು, ಮುಂದಿನ ಹಂತಗಳಲ್ಲಿ ಘನ ತ್ಯಾಜ್ಯ ನಿರ್ವಹಣೆ ಸೇರಿದಂತೆ ವಿವಿಧ ಕ್ರಮಗಳ ಮೂಲಕ ಕೆರೆಯ ಆರೋಗ್ಯಕರ ಸ್ಥಿತಿಯನ್ನು ಕಾಪಾಡಿಕೊಳ್ಳಬೇಕಾಗಿದೆ ಎಂದು ಹೇಳಿದರು. "ಕೆರೆಯು ಮತ್ತೆ ಹಿಂದಿನ ದುಸ್ಥಿತಿಗೆ ತಲುಪದಂತೆ ಸಮುದಾಯ, ಸ್ಥಳೀಯ ಆಡಳಿತ ಮತ್ತು ಎಲ್ಲ ಹಿತಾಸಕ್ತಿಪಕ್ಷಗಳು ಒಟ್ಟಾಗಿ ಜವಾಬ್ದಾರಿ ವಹಿಸಬೇಕು. ಭವಿಷ್ಯದ ಪೀಳಿಗೆಗಳಿಗಾಗಿ ಈ ಅಮೂಲ್ಯ ಜಲ ಸಂಪತ್ತನ್ನು ಉಳಿಸಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯವಾಗಿದೆ," ಎಂದು ಅವರು ತಿಳಿಸಿದರು.

ಡೈಮ್ಲರ್ ಟ್ರಕ್ ಇನೋವೇಷನ್ ಸೆಂಟರ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಧಾಕೃಷ್ಣ ಕೊಡಕ್ಕಲ್ ಮಾತನಾಡಿ, "ಕಿತ್ತಗನೂರು ಕೆರೆಯ ಪುನರುಜ್ಜೀವನವು ಸಹಭಾಗಿತ್ವದ ಮೂಲಕ ಅರ್ಥಪೂರ್ಣ ಬದಲಾವಣೆ ತರಬಹುದೆಂಬುದಕ್ಕೆ ಉತ್ತಮ ಉದಾಹರಣೆಯಾಗಿದೆ.

ಯುನೈಟೆಡ್ ವೇ ಬೆಂಗಳೂರು, ಶಿಶು ಮಂದಿರ ಹಾಗೂ ಪಂಚಾಯತ್‌ಗಳೊಂದಿಗೆ ಕೈಜೋಡಿಸುವ ಮೂಲಕ ಸುಸ್ಥಿರ ನಗರಾಭಿವೃದ್ಧಿಗೆ ಕೊಡುಗೆ ನೀಡುತ್ತಿರುವುದು ಸಂತಸದ ವಿಷಯವಾಗಿದೆ," ಎಂದರು.

ಈ ಯೋಜನೆಯ ಪರಿಣಾಮವಾಗಿ ಕೆರೆಯ ನೀರು ಸಂಗ್ರಹ ಸಾಮರ್ಥ್ಯವು ಶೇ.22ರಷ್ಟು ಹೆಚ್ಚಳ ಕಂಡಿದ್ದು, ಸುಮಾರು 65 ಜಾತಿಯ ಸಸ್ಯ ಹಾಗೂ ಪ್ರಾಣಿ ಸಂಕುಲಗಳಿಗೆ ಆಶ್ರಯ ತಾಣವಾಗಿ ರೂಪುಗೊಂಡಿದೆ. ಅಲ್ಲದೆ, ವರ್ಷಕ್ಕೆ ಸುಮಾರು 9 ಟನ್ ಕಾರ್ಬನ್ ಶೇಖರಣೆಗೆ ಸಹಕಾರಿಯಾಗಲಿದೆ ಎಂದು ಅಂದಾಜಿಸಲಾಗಿದೆ.

# ಆಂಬ್ಯುಲೆನ್ಸ್ ಜಾಗೃತಿ ರ್‍ಯಾಲಿ

ಮೈಸೂರು: ತುರ್ತು ವೈದ್ಯಕೀಯ ಚಿಕಿತ್ಸೆಯ ಮಹತ್ವ ಹಾಗೂ ತುರ್ತು ಸಂದರ್ಭಗಳಲ್ಲಿ ಸಾರ್ವಜನಿಕರ ಸಹಕಾರದ ಅಗತ್ಯತೆಯನ್ನು ತಿಳಿಸುವ ಉದ್ದೇಶದಿಂದ ಮಣಿಪಾಲ್ ಆಸ್ಪತ್ರೆ ಮೈಸೂರು ವತಿಯಿಂದ ವಿಶ್ವ ತುರ್ತು ಚಿಕಿತ್ಸಾ ದಿನದ ಅಂಗವಾಗಿ ಆಂಬ್ಯುಲೆನ್ಸ್ ಜಾಗೃತಿ ರ್‍ಯಾಲಿಯನ್ನು ಆಯೋಜಿಸಲಾಯಿತು.



'ಮಣಿಪಾಲ್ ಆಂಬ್ಯುಲೆನ್ಸ್ ರೆಸ್ಪಾನ್ಸ್ ಸರ್ವಿಸ್' (ಮಾರ್ಸ್) ಅಡಿಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ತುರ್ತು ಚಿಕಿತ್ಸಾ ತಜ್ಞರು, ಆಂಬ್ಯುಲೆನ್ಸ್ ಸಿಬ್ಬಂದಿ, ಆಸ್ಪತ್ರೆಯ ಅಧಿಕಾರಿಗಳು ಹಾಗೂ ಸಂಚಾರಿ ಪೊಲೀಸ್ ಇಲಾಖೆ ಸಿಬ್ಬಂದಿ ಭಾಗವಹಿಸಿ, ಜೀವ ಉಳಿಸುವಲ್ಲಿ ತುರ್ತು ವೈದ್ಯಕೀಯ ಸೇವೆಗಳ ಪಾತ್ರದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಹತ್ತು ಮಾರ್ಸ್ ಆಂಬ್ಯುಲೆನ್ಸ್‌ಗಳನ್ನು ಒಳಗೊಂಡಿದ್ದ ರ್‍ಯಾಲಿಗೆ ಮೈಸೂರು ಅಪರಾಧ ಮತ್ತು ಸಂಚಾರ ವಿಭಾಗದ ಉಪ ಪೊಲೀಸ್ ಆಯುಕ್ತ ಕೆ.ಎಸ್. ಸುಂದರ್ ರಾಜ್ ಹಾಗೂ ಎನ್.ಆರ್. ಉಪವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಕೆ.ಟಿ. ಮ್ಯಾಥ್ಯೂಸ್ ಥಾಮಸ್ ಹಸಿರು ನಿಶಾನೆ ತೋರಿದರು.

ಈ ಸಂದರ್ಭದಲ್ಲಿ ಕೆಎಂಸಿ, ಎಸಿ ಮತ್ತು ಮಣಿಪಾಲ್ ಆಸ್ಪತ್ರೆಗಳ ಕ್ಲಸ್ಟರ್ ನಿರ್ದೇಶಕ ಪ್ರಮೋದ್ ಕುಂದರ್, ಮಣಿಪಾಲ್ ಆಸ್ಪತ್ರೆ ನಿರ್ದೇಶಕ ಸಂದೀಪ್ ಪಟೇಲ್ ಬಿ.ಜೆ., ಹಿರಿಯ ನರಶಸ್ತ್ರ ಚಿಕಿತ್ಸಾ ತಜ್ಞ ಡಾ. ಮಕ್ಸೂದ್ ಅಹ್ಮದ್ ಎ.ಆರ್., ಹಿರಿಯ ಹೃದ್ರೋಗ ತಜ್ಞ ಡಾ. ಸಿ.ಬಿ. ಕೇಶವಮೂರ್ತಿ ಸೇರಿದಂತೆ ಹಲವು ವೈದ್ಯರು ಉಪಸ್ಥಿತರಿದ್ದರು.

ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿದ ರ್‍ಯಾಲಿಯು "ವೈದ್ಯಕೀಯ ತುರ್ತು ಸಂದರ್ಭದಲ್ಲಿ ಪ್ರತಿಯೊಂದು ಕ್ಷಣವೂ ಅಮೂಲ್ಯ" ಎಂಬ ಸಂದೇಶವನ್ನು ಜನರಿಗೆ ತಲುಪಿಸಿತು. ರ್‍ಯಾಲಿಯ ವೇಳೆ ಆಂಬ್ಯುಲೆನ್ಸ್‌ಗಳಿಗೆ ದಾರಿ ಬಿಡುವ ಮಹತ್ವ ಹಾಗೂ ತುರ್ತು ಪರಿಸ್ಥಿತಿಯಲ್ಲಿ ತಕ್ಷಣ ವೈದ್ಯಕೀಯ ನೆರವು ಪಡೆಯುವ ಅಗತ್ಯವನ್ನು ಸಾರ್ವಜನಿಕರಿಗೆ ಮನವರಿಕೆ ಮಾಡಲಾಯಿತು.

## 'ಹಿರಿಯ ನಾಗರಿಕರ ಸಂರಕ್ಷಣೆ ಮತ್ತು ಗೌರವ ಸಮಾಜದ ಕರ್ತವ್ಯ'

ಕೋಲಾರ

"ಹಿರಿಯ ನಾಗರಿಕರು ನಮ್ಮ ದೇಶದ ಅಮೂಲ್ಯ ಆಸ್ತಿ. ಅವರು ಅಪಾರವಾದ ಅನುಭವವನ್ನು ಹೊಂದಿದ್ದು, ಅವರ ಮಾರ್ಗದರ್ಶನ ಇಂದಿನ ಯುವ ಪೀಳಿಗೆ ಹಾಗೂ ಸಮಾಜಕ್ಕೆ ಅತ್ಯಂತ ಅಗತ್ಯವಾಗಿದೆ. ಹಿರಿಯರನ್ನು ಕಡೆಗಣಿಸದೆ ಅವರಿಗೆ ಪ್ರಥಮ ಆದ್ಯತೆ ನೀಡಿ ಗೌರವಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ" ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಪ್ರಭು ಎನ್. ಬಡಿಗೇರ್ ತಿಳಿಸಿದರು.



ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ, "ವಿಶ್ವ ಹಿರಿಯ ನಾಗರಿಕರ ಮೇಲಿನ ದೌರ್ಜನ್ಯ ತಡೆ ಜಾಗೃತಿ ದಿನಾಚರಣೆ" ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಹಿರಿಯ ನಾಗರಿಕರ ಹಕ್ಕುಗಳ ರಕ್ಷಣೆಗೆ ಕಾನೂನಿನಲ್ಲಿರುವ ಅವಕಾಶಗಳನ್ನು ಒತ್ತಿ ಹೇಳಿದರು.ಹಿರಿಯ ನಾಗರಿಕರಿಗೆ ಸಂಬಂಧಿಸಿದ ನ್ಯಾಯಾಲಯದ ಪ್ರಕರಣಗಳನ್ನು ಕೇವಲ ಎರಡು ತಿಂಗಳ ಅವಧಿಯಲ್ಲಿ ಇತ್ಯರ್ಥಪಡಿಸಲು ಸಹಾಯಕ ಆಯುಕ್ತರಿಗೆ ಕಾನೂನಿನಲ್ಲಿ ಅವಕಾಶವಿದೆ.

ಯಾವುದೇ ಕಚೇರಿ ಅಥವಾ ನ್ಯಾಯಾಲಯಗಳಲ್ಲಿ ಹಿರಿಯ ನಾಗರಿಕರ ಅರ್ಜಿಗಳಿಗೆ ಮೊದಲ ಆದ್ಯತೆ ನೀಡಿ ಇತ್ಯರ್ಥಪಡಿಸಬೇಕು.

ತಂದೆ–ತಾಯಿಯ ಆಸ್ತಿಯನ್ನು ತಮ್ಮ ಹೆಸರಿಗೆ ಮಾಡಿಸಿಕೊಂಡು ನಂತರ ಅವರನ್ನು ಸಾಲಹದೆ ಬೀದಿಗೆ ತಳ್ಳುವ ಮಕ್ಕಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಹಿರಿಯ ನಾಗರಿಕರ ಸಂರಕ್ಷಣಾ ಕಾಯ್ದೆ 2007 ರಲ್ಲಿ ಅವಕಾಶವಿದ್ದು, ಆಸ್ತಿಯನ್ನು ಮರಳಿ ಪೋಷಕರ ಹೆಸರಿಗೆ ವರ್ಗಾಯಿಸಬಹುದಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಅಪರ ಜಿಲ್ಲಾಧಿಕಾರಿಗಳಾದ ಎಸ್.ಎಂ. ಮಂಗಳಾ ಮಾತನಾಡಿ,"ವಯಸ್ಸಾದಂತೆ ಹಿರಿಯರು ಸಣ್ಣ ಮಕ್ಕಳಂತಾಗುತ್ತಾರೆ. ಬಾಲ್ಯದಲ್ಲಿ ಪೋಷಕರು ನಮ್ಮನ್ನು ಹೇಗೆ ಪ್ರೀತಿಯಿಂದ ಸಲಹುತ್ತಾರೋ, ಹಾಗೆಯೇ ವೃದ್ಧಾಪ್ಯದಲ್ಲಿ ಅವರಿಗೆ ಆರೋಗ್ಯ ಸಮಸ್ಯೆಗಳು ಎದುರಾದಾಗ ಮಕ್ಕಳು ಪ್ರೀತಿಯಿಂದ 'ನರ್ಸಿಂಗ್ ಕೇರ್' ನೀಡಬೇಕು. ಕೇವಲ ಹಣ ನೀಡುವುದಕ್ಕಿಂತ ಅವರೊಂದಿಗೆ ಪ್ರೀತಿಯಿಂದ ಮಾತನಾಡಿ ಧೈರ್ಯ ತುಂಬುವುದು ಮುಖ್ಯ" ಎಂದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಲ್ ಶ್ರೀನಿವಾಸ್ ಮಾತನಾಡಿ, "ಪೋಷಕರು ಮಕ್ಕಳ ಏಳಿಗೆಗಾಗಿ ತಮ್ಮ ಜೀವನವನ್ನೇ ಸವೆಯುತ್ತಾರೆ. ಆದರೆ ಇಂದು ವೃದ್ಧಾಶ್ರಮಗಳ ಸಂಖ್ಯೆ ಹೆಚ್ಚುತ್ತಿರುವುದು ಖೇದಕರ. ತಂದೆ–ತಾಯಿಯನ್ನು ಗೌರವಿಸದ ಜೀವನ ಸಾರ್ಥಕವಲ್ಲ" ಎಂದು ಮಾರ್ಮಿಕವಾಗಿ ನುಡಿದರು.

ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧಿಕಾರಿಗಳಾದ ಶ್ರೀಮತಿ ಆರ್. ಮಂಜುಳಾ ಅವರು ಇಲಾಖೆಯ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಹಿರಿಯ ನಾಗರಿಕರ ನೆರವಿಗಾಗಿ '1090' ಸಹಾಯವಾಣಿ ಕೇಂದ್ರ ಕಾರ್ಯನಿರ್ವಹಿಸುತ್ತಿದ್ದು, ಈ ವರ್ಷ ಬಂದ 24 ದೂರುಗಳಲ್ಲಿ 20 ಪ್ರಕರಣಗಳನ್ನು ಯಶಸ್ವಿಯಾಗಿ ಇತ್ಯರ್ಥಪಡಿಸಲಾಗಿದೆ ಎಂದರು.

ಜಿಲ್ಲಾ ಆಸ್ಪತ್ರೆಯಲ್ಲಿ ಹಿರಿಯ ನಾಗರಿಕರಿಗಾಗಿ 10 ಹಾಸಿಗೆಗಳ ಉಚಿತ ವಾರ್ಡ್ ಕಾಯ್ದಿರಿಸಲಾಗಿದ್ದು, ಉಚಿತ ಔಷಧೋಪಚಾರ ನೀಡಲಾಗುತ್ತಿದೆ. ಕೀಲ್ಕೋಟೆ ಕ್ರೀಡಾಂಗಣದ ಬಳಿ 'ಅಗಲು ಯೋಗಕ್ಷೇಮ ಕೇಂದ್ರ' ನಡೆಸಲಾಗುತ್ತಿದ್ದು, ಪ್ರತಿದಿನ 50ಕ್ಕೂ ಹೆಚ್ಚು ಹಿರಿಯರು ಇದರ ಸೌಲಭ್ಯ ಪಡೆಯುತ್ತಿದ್ದಾರೆ. ಈ ವರ್ಷ ಅಲಿಂಕೋ ಸಂಸ್ಥೆಯ ವತಿಯಿಂದ 680 ವೃದ್ಧರಿಗೆ ಸಾಧನ ಸಲಕರಣೆಗಳನ್ನು ವಿತರಿಸಲಾಗಿದೆ ಎಂದರು ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಶ್ರೀ ಟಿ.ಎಂ. ರಾಮಕೃಷ್ಣೇಗೌಡ, ಸಿಡಿಪಿಓ ನಾಗರತ್ನಮ್ಮ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು, ಹಿರಿಯ ನಾಗರಿಕರು ಮತ್ತು ಮಹಿಳೆಯರು ಉಪಸ್ಥಿತರಿದ್ದರು.

## ನ್ಯೂಯಾರ್ಕ್‌ನಿಂದ ಶಾಂಘೈವರೆಗೆ ಯೋಗ ದಿನಾಚರಣೆ ಸಂಭ್ರಮ

ಬೆಂಗಳೂರು

12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯನ್ನು ಜೂನ್ 21ರಂದು ವಿಶ್ವದಾದ್ಯಂತ ಅಭೂತಪೂರ್ವ ಉತ್ಸಾಹ ಮತ್ತು ಸಂಭ್ರಮದೊಂದಿಗೆ ಆಚರಿಸಲಾಯಿತು. ಈ ವರ್ಷದ ಯೋಗ ದಿನದ ವಿಷಯ "ಆರೋಗ್ಯಕರ ವೃದ್ಧಾಪ್ಯಕ್ಕೆ ಯೋಗ" ಆಗಿದ್ದು, ಎಲ್ಲ ವಯೋಮಾನದ ಜನರು ಆರೋಗ್ಯಕರ, ಸಕ್ರಿಯ ಮತ್ತು ರೋಗಮುಕ್ತ ಜೀವನ ನಡೆಸಲು ಯೋಗದ ಮಹತ್ವವನ್ನು ಸಾರಿತು.



ಭಾರತದಲ್ಲಿ ಮುಖ್ಯ ಕಾರ್ಯಕ್ರಮ ಪಶ್ಚಿಮ ಬಂಗಾಳದಲ್ಲಿ ನಡೆದಿದ್ದರೆ, ವಿಶ್ವದ ವಿವಿಧ ದೇಶಗಳಲ್ಲಿಯೂ ಯೋಗದ ಮಹತ್ವವನ್ನು ಸಾರುವ ಸಾವಿರಾರು ಕಾರ್ಯಕ್ರಮಗಳು ಆಯೋಜಿಸಲ್ಪಟ್ಟವು. ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹಾಗೂ ಭಾರತೀಯ ಸಾಂಸ್ಕೃತಿಕ ಸಂಬಂಧಗಳ ಮಂಡಳಿಯ (ಐಸಿಸಿಆರ್) ಸಹಯೋಗದಲ್ಲಿ ವಿಶ್ವದ 210ಕ್ಕೂ ಹೆಚ್ಚು ಭಾರತೀಯ ರಾಯಭಾರ ಕಚೇರಿಗಳು ಮತ್ತು ಪ್ರತಿನಿಧಿ ಕಚೇರಿಗಳು 2,500ಕ್ಕೂ ಅಧಿಕ ಐತಿಹಾಸಿಕ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಯೋಗ ಕಾರ್ಯಕ್ರಮಗಳನ್ನು ನಡೆಸಿದವು.

ಅಮೆರಿಕದ ರಾಜಧಾನಿ ವಾಷಿಂಗ್ಟನ್ ಡಿ.ಸಿ.ಯಲ್ಲಿರುವ ಪ್ರಸಿದ್ಧ ಲಿಂಕನ್ ಸ್ಮಾರಕದ ಆವರಣದಲ್ಲಿ ನಡೆದ ಯೋಗ ಕಾರ್ಯಕ್ರಮದಲ್ಲಿ ನೂರಾರು ಯೋಗಾಸಕ್ತರು ಭಾಗವಹಿಸಿದರು. ಅಮೆರಿಕಾದಲ್ಲಿನ ಭಾರತದ ರಾಯಭಾರಿ ವಿನಯ್ ಕ್ವಾತ್ರಾ ಉಪಸ್ಥಿತರಿದ್ದು, ಯೋಗದೊಂದಿಗೆ ಆಯುರ್ವೇದದ ಮಹತ್ವವನ್ನೂ ಪರಿಚಯಿಸಲಾಯಿತು. ವಿಶೇಷವಾಗಿ "ಆಯುರ್ವೇದ ಕಾರ್ನರ್"ಗಳನ್ನು ಸ್ಥಾಪಿಸಿ, ಭಾರತೀಯ ಸಾಂಪ್ರದಾಯಿಕ ಆರೋಗ್ಯ ಪದ್ಧತಿಗಳ ಕುರಿತು ಜನರಿಗೆ ಮಾಹಿತಿ ನೀಡಲಾಯಿತು.

ಇನ್ನೊಂದೆಡೆ, ನ್ಯೂಯಾರ್ಕ್‌ನ ವಿಶ್ವಪ್ರಸಿದ್ಧ ಟೈಮ್ಸ್ ಸ್ಕ್ವಯರ್‌ನಲ್ಲಿ ಬೃಹತ್ ಯೋಗ ಕಾರ್ಯಕ್ರಮ ಆಯೋಜಿಸಲಾಗಿದ್ದು, ಸಾವಿರಾರು ಮಂದಿ ಪಾಲ್ಗೊಂಡರು. ಈ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಯೋಗ ಶಿಕ್ಷಕರಾಗಿದ್ದ ಎಚ್.ಆರ್. ನಾಗೇಂದ್ರ ಕೂಡ ಭಾಗವಹಿಸಿ ಯೋಗಾಭ್ಯಾಸ ನಡೆಸಿದರು.

ಬ್ರಿಟನ್‌ನ ಬರ್ಮಿಂಗ್‌ಹ್ಯಾಮ್ ನಗರದ ವಿಕ್ಟೋರಿಯಾ ಸ್ಕ್ವೇರ್‌ನಲ್ಲಿ ನಡೆದ ಯೋಗ ಕಾರ್ಯಕ್ರಮವು ವಿಶೇಷ ಆಕರ್ಷಣೆಯಾಗಿತ್ತು. ಇದೇ ರೀತಿಯಾಗಿ ಯುರೋಪಿನ ಹಲವು ದೇಶಗಳಲ್ಲಿ ಭಾರತೀಯ ರಾಯಭಾರ ಕಚೇರಿಗಳ ನೇತೃತ್ವದಲ್ಲಿ ಸಾರ್ವಜನಿಕ ಯೋಗ ಕಾರ್ಯಕ್ರಮಗಳು ನಡೆದವು.

## ಯೋಗದಿನ: ಇತಿಹಾಸ ಬರೆದ ಅಕ್ಷರ್ ಯೋಗ ಕೇಂದ್ರ

ಬೆಂಗಳೂರು

ಅಂತರರಾಷ್ಟ್ರೀಯ ಯೋಗ ದಿನ 2026ರ ಅಂಗವಾಗಿ ಅಕ್ಷರ್ ಯೋಗ ಕೇಂದ್ರವು 21 ಗಿನ್ನೆಸ್ ವಿಶ್ವ ದಾಖಲೆಗಳನ್ನು ನಿರ್ಮಿಸುವ ಮೂಲಕ ಜಾಗತಿಕ ಮಟ್ಟದಲ್ಲಿ ಹೊಸ ಇತಿಹಾಸ ಸೃಷ್ಟಿಸಿದೆ. ಈ ಮೂಲಕ ಯೋಗ ಕ್ಷೇತ್ರದಲ್ಲಿ ಭಾರತದ ಪ್ರಭಾವ ಮತ್ತು ನಾಯಕತ್ವವನ್ನು ಮತ್ತೊಮ್ಮೆ ಜಗತ್ತಿಗೆ ಪರಿಚಯಿಸಿದೆ.

ಪ್ರಸಿದ್ಧ ಯೋಗಗುರು ಹಾಗೂ ಆಧ್ಯಾತ್ಮಿಕ ನಾಯಕ ಹಿಮಾಲಯನ್ ಸಿದ್ಧ ಅಕ್ಷರ್ ಅವರ ನೇತೃತ್ವದಲ್ಲಿ ನಡೆದ ಈ ಮಹತ್ವಾಕಾಂಕ್ಷಿ ಕಾರ್ಯಕ್ರಮದಲ್ಲಿ ವಿಶ್ವದ 100ಕ್ಕೂ ಹೆಚ್ಚು ದೇಶಗಳಿಂದ 10,000ಕ್ಕೂ ಅಧಿಕ ಯೋಗಾಸಕ್ತರು ಭಾಗವಹಿಸಿದ್ದರು. ಇದರೊಂದಿಗೆ ಬೆಂಗಳೂರು ಜಾಗತಿಕ ಯೋಗ ಕೇಂದ್ರವಾಗಿ ಗಮನ ಸೆಳೆಯಿತು.




ಅಮೆರಿಕಾ, ಯುನೈಟೆಡ್ ಕಿಂಗ್‌ಡಮ್, ಇಟಲಿ, ತೈವಾನ್, ಮಲೇಶಿಯಾ, ಹಾಂಗ್‌ಕಾಂಗ್, ಸಿಂಗಾಪುರ್, ದುಬೈ ಹಾಗೂ ಸೈಪ್ರಸ್ ಸೇರಿದಂತೆ ಹಲವು ರಾಷ್ಟ್ರಗಳ ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯೋಗದ ವಿಶ್ವವ್ಯಾಪಿ ಪ್ರಭಾವವನ್ನು ಪ್ರದರ್ಶಿಸಿದರು.

ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ 7,000ಕ್ಕೂ ಹೆಚ್ಚು ಮಂದಿ ತ್ರಾಟಕ ಧ್ಯಾನದಲ್ಲಿ ಭಾಗವಹಿಸಿ ಯಶಸ್ವಿಯಾಗಿ ಪೂರ್ಣಗೊಳಿಸಿದರು. ಬಳಿಕ ಆಯ್ಕೆಯಾದ ಸ್ಪರ್ಧಿಗಳು ವಿವಿಧ ಯೋಗಾಸನಗಳ ಮೂಲಕ ಗಿನ್ನೆಸ್ ವಿಶ್ವ ದಾಖಲೆಗಳಿಗಾಗಿ ನಡೆದ ಅಂತಿಮ ಸವಾಲುಗಳಲ್ಲಿ ಪಾಲ್ಗೊಂಡು 20 ದಾಖಲೆಗಳನ್ನು ನಿರ್ಮಿಸಿದರು. ತ್ರಾಟಕ ಧ್ಯಾನ ಸೇರಿದಂತೆ ಒಟ್ಟು 21 ಗಿನ್ನೆಸ್ ವಿಶ್ವ ದಾಖಲೆಗಳು ಈ ಕಾರ್ಯಕ್ರಮದಲ್ಲಿ ದಾಖಲಾಗಿವೆ. ಈ ಐತಿಹಾಸಿಕ ಸಾಧನೆಯಲ್ಲಿ ಗಡಿ ಭದ್ರತಾ ಪಡೆ, ಕೇಂದ್ರ ಕೈಗಾರಿಕಾ ಭದ್ರತಾ ಪಡೆ, ಕೇಂದ್ರ ಮೀಸಲು ಪೊಲೀಸ್ ಪಡೆ, ಭಾರತೀಯ ಸೇನೆ, ಭಾರತೀಯ ವಾಯುಪಡೆ, ಕರ್ನಾಟಕ ರಾಜ್ಯ ಪೊಲೀಸ್, ರಾಷ್ಟ್ರೀಯ ವಿದ್ಯಾರ್ಥಿ ಪಡೆ ಕೆಡೆಟ್‌ಗಳು, ವಿಶೇಷ ಸಾಮರ್ಥ್ಯ ಹೊಂದಿರುವ ವ್ಯಕ್ತಿಗಳು, ಅನಾಥಾಶ್ರಮದ ಮಕ್ಕಳು, ಉದ್ಯಮಿಗಳು, ಕಾರ್ಪೊರೇಟ್ ವಲಯದ ಮುಖಂಡರು, ವಿದ್ಯಾರ್ಥಿಗಳು ಹಾಗೂ ವಿವಿಧ ದೇಶಗಳ ಯೋಗಾಭ್ಯಾಸಿಗಳು ಭಾಗವಹಿಸಿದ್ದರು.

# ಭೂಮಿ ಸ್ವಾಧೀನ ಕೈಬಿಡಲು ಆಗ್ರಹ

ಚಿಕ್ಕಬಳ್ಳಾಪುರ

ಬಿಡದಿ ಟೌನ್‌ಶಿಪ್ ಯೋಜನೆಗಾಗಿ ಫಲವತ್ತಾದ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಕ್ರಮವನ್ನು ಕೈಬಿಡಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಇದೇ ಜೂನ್ 22ರಂದು ಬೈರಮಂಗಲ ಚಲೋ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ ಎಂದು ಸಂಘದ ಬೆಂಗಳೂರು ವಿಭಾಗ ಉಪಾಧ್ಯಕ್ಷ ಲಕ್ಷ್ಮೀನಾರಾಯಣರೆಡ್ಡಿ ತಿಳಿಸಿದ್ದಾರೆ.

ಜಿಲ್ಲಾ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೊಸ ಆರ್ಥಿಕ ನೀತಿಗಳು ಹಾಗೂ ನಗರ ಕೇಂದ್ರಿತ ಅಭಿವೃದ್ಧಿ ಮಾದರಿಗಳ ಹೆಸರಿನಲ್ಲಿ ನಗರಗಳ ಸುತ್ತಮುತ್ತಲಿನ ಫಲವತ್ತಾದ ಕೃಷಿ ಭೂಮಿಯನ್ನು ಸರ್ಕಾರಗಳು ಅತಿಯಾಗಿ ಕಬಳಿಸುತ್ತಿವೆ ಎಂದು ಆರೋಪಿಸಿದರು. ಇದರಿಂದ ರೈತರ ಬದುಕು ಸಂಕಷ್ಟಕ್ಕೆ ಸಿಲುಕುತ್ತಿದೆ ಎಂದು ಅವರು ಹೇಳಿದರು.

2013ರ ಭೂಸ್ವಾಧೀನ ಕಾಯ್ದೆಯ ವಿವಿಧ ಹಂತಗಳಲ್ಲಿ ಉಲ್ಲಂಘನೆ ನಡೆಯುತ್ತಿದೆ ಎಂದು ಆರೋಪಿಸಿದ ಅವರು, ಬಿಡದಿ ಟೌನ್‌ಶಿಪ್ ಅಭಿವೃದ್ಧಿಗಾಗಿ ರಾಮನಗರ ತಾಲೂಕಿನ ಬಿಡದಿ ಹೋಬಳಿಯ ಬೈರಮಂಗಲ ಮತ್ತು ಕಂಚುಗಾರನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ 26 ಗ್ರಾಮಗಳ ಸುಮಾರು 9,640 ಎಕರೆ ನೀರಾವರಿ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಈಗಾಗಲೇ ಕ್ಯಾಬಿನೆಟ್ ಅನುಮೋದನೆ ಪಡೆದು ನೋಟಿಫಿಕೇಶನ್ ಹೊರಡಿಸಲಾಗಿದೆ ಎಂದು ಹೇಳಿದರು.

ಈ ಕ್ರಮದ ವಿರುದ್ಧ 2025ರ ಮಾರ್ಚ್‌ನಿಂದ ನಿರಂತರವಾಗಿ ಅಹೋರಾತ್ರಿ ಧರಣಿ ನಡೆಯುತ್ತಿದ್ದು, ವಿವಿಧ ಜನಪರ ಸಂಘಟನೆಗಳು ಹಾಗೂ ಸಂಯುಕ್ತ ಹೋರಾಟ ಕರ್ನಾಟಕ ಈ ಚಳುವಳಿಗೆ ಬೆಂಬಲ ನೀಡಿವೆ ಎಂದು ಅವರು ತಿಳಿಸಿದರು. ಸರ್ಕಾರ ಜನರ ಮನವಿಗೆ ಸ್ಪಂದಿಸದೆ ವಾಮಮಾರ್ಗದ ಮೂಲಕ ಭೂಸ್ವಾಧೀನ ಮುಂದುವರಿಸಲು ಯತ್ನಿಸುತ್ತಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾ ಸಂಚಾಲಕ ಪೆದ್ದಪ್ಪಯ್ಯ ಮಾತನಾಡಿ, ಈ ಪ್ರದೇಶದ ಭೂಮಿಯನ್ನು ಸ್ವಾಧೀನಪಡಿಸಿಕೊಂಡರೆ ರೈತ ಕುಟುಂಬಗಳು ಹಾಗೂ ಕೃಷಿ ಕಾರ್ಮಿಕ ಕುಟುಂಬಗಳು ಬೀದಿಪಾಲಾಗುವ ಪರಿಸ್ಥಿತಿ ಉಂಟಾಗುತ್ತದೆ ಎಂದು ಎಚ್ಚರಿಸಿದರು. ಜೊತೆಗೆ ಬೆಂಗಳೂರಿಗೆ ಸರಬರಾಜಾಗುವ ತರಕಾರಿ, ಹಾಲು, ಮೊಸರು, ಬೆಣ್ಣೆ ಸೇರಿದಂತೆ ವಿವಿಧ ಕೃಷಿ ಉತ್ಪನ್ನಗಳ ಪೂರೈಕೆಯೂ ತೀವ್ರವಾಗಿ ಪರಿಣಾಮಗೊಳ್ಳಲಿದೆ ಎಂದು ಹೇಳಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮಾಂಜಿ ಮಾತನಾಡಿ, ರೈತ ಸಂಘದ ನೇತೃತ್ವದಲ್ಲಿ ನಡೆಯುತ್ತಿರುವ ಭೂಸ್ವಾಧೀನ ವಿರೋಧಿ ಹೋರಾಟಕ್ಕೆ ಬೆಂಬಲವಾಗಿ ಜೂನ್ 22ರಂದು ಬೈರಮಂಗಲ ಚಲೋ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಬೆಂಗಳೂರು ದಕ್ಷಿಣ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ ಸೇರಿದಂತೆ ಮಂಡ್ಯ, ಮೈಸೂರು, ಚಾಮರಾಜನಗರ ಜಿಲ್ಲೆಗಳ ರೈತರು ಸಹಸ್ರಾರು ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಅವರು ಹೇಳಿದರು. ಚಿಕ್ಕಬಳ್ಳಾಪುರ ಜಿಲ್ಲೆಯಿಂದಲೇ ಸುಮಾರು 200ಕ್ಕೂ ಹೆಚ್ಚು ರೈತರು ಈ ಚಲೋದಲ್ಲಿ ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಸಂಚಾಲಕರಾದ ಈಶ್ವರರೆಡ್ಡಿ, ಬಾಗೇಪಲ್ಲಿ ತಾಲೂಕು ಅಧ್ಯಕ್ಷ ಕೆ.ಪಿ. ಈಶ್ವರರೆಡ್ಡಿ, ಗುಡಿಬಂಡೆ ತಾಲೂಕು ಅಧ್ಯಕ್ಷ ನಾರಾಯಣಸ್ವಾಮಿ, ಶಿಡ್ಲಘಟ್ಟ ತಾಲೂಕು ಅಧ್ಯಕ್ಷ ರವಿಪ್ರಕಾಶ್, ಚಿಕ್ಕಬಳ್ಳಾಪುರ ತಾಲೂಕು ಅಧ್ಯಕ್ಷ ಎನ್.ಸಿ. ಯರ್ರಪ್ಪ ಸೇರಿದಂತೆ ಹಲವು ರೈತ ಸಂಘದ ಮುಖಂಡರು ಉಪಸ್ಥಿತರಿದ್ದರು.

# ತೋಟಗಾರಿಕಾ ಬೆಳೆಗಳಿಗೆ ವಿಮಾ ಸೌಲಭ್ಯ

ತುಮಕೂರು

ಮರುವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆವಿಮೆ ಯೋಜನೆಯಡಿ 2026–27ನೇ ಸಾಲಿಗೆ ಅಧಿಸೂಚನೆ ಹೊರಡಿಸಿರುವ ಬೆಳೆಗಳನ್ನು ವಿಮಾ ಸೌಲಭ್ಯಕ್ಕೊಳಪಡಿಸಬೇಕೆಂದು ಗುಬ್ಬಿ ತಾಲ್ಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ರೈತರಲ್ಲಿ ಮನವಿ ಮಾಡಿದ್ದಾರೆ.

ವಿಮಾ ಸೌಲಭ್ಯವು ಸಾಲ ಪಡೆದಿರುವ/ಪಡೆಯುವ ರೈತರಿಗೆ ಕಡ್ಡಾಯ ಹಾಗೂ ಬೆಳೆಸಾಲ ಪಡೆಯದ ರೈತರಿಗೆ ಐಚ್ಛಿಕವಾಗಿರುತ್ತದೆ.

ಗುಬ್ಬಿ ತಾಲ್ಲೂಕಿನಲ್ಲಿ ಅಡಿಕೆ, ದಾಳಿಂಬೆ, ಮಾವು, ಪರಂಗಿ ಬೆಳೆಗಳನ್ನು ವಿಮಾ ಸೌಲಭ್ಯಕ್ಕೆ ಒಳಪಡಿಸಲಾಗಿದೆ.

ತಮ್ಮ ಬೆಳೆಗಳಿಗೆ ವಿಮೆ ಮಾಡಿಸುವ ರೈತರು ಕೂಡಲೇ ನಿಗಧಿತ ಅರ್ಜಿಯೊಂದಿಗೆ ಪ್ರಸಕ್ತ ಸಾಲಿನಲ್ಲಿ ಭೂಮಿ ಹೊಂದಿರುವ ದಾಖಲೆಗಳಾದ ಪಹಣಿ, ಬ್ಯಾಂಕ್ ಖಾತೆ ಪುಸ್ತಕ, ಆಧಾರ್ ನಕಲು ಪ್ರತಿ, ಸ್ವಯಂಘೋಷಿತ ಬೆಳೆ ವಿವರದೊಂದಿಗೆ ಆಯಾ ತಾಲ್ಲೂಕಿನ ಯಾವುದಾದರು ರಾಷ್ಟ್ರೀಯ ಅಧಿಕೃತ ಬ್ಯಾಂಕು/ಗ್ರಾಮ ಒನ್/ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ನೋಂದಣಿ ಮಾಡಿಸಬಹುದಾಗಿದೆ.

ಅಡಿಕೆ, ದಾಳಿಂಬೆ ಮತ್ತು ಪರಂಗಿ ಬೆಳೆಗಳಿಗೆ ನೋಂದಾಯಿಸಿಕೊಳ್ಳಲು ಜೂನ್ 30 ಹಾಗೂ ಮಾವು ಬೆಳೆಗೆ ನೋಂದಾಯಿಸಿಕೊಳ್ಳಲು ಜುಲೈ 31 ಕಡೆಯ ದಿನವಾಗಿದೆ.

ಬೆಳೆ ವಿಮೆಯಲ್ಲಿ ಒಳಪಟ್ಟ ಬೆಳೆಗಳ ವಿಮಾಕಂತಿನ ವಿವರ:–

ವಿಮಾ ಯೋಜನೆಗೊಳಪಟ್ಟ ವಿವಿಧ ಬೆಳೆಗಳ ಪ್ರತಿ ಹೆಕ್ಟೇರ್‌ಗೆ ವಿಮಾ ಮೊತ್ತದ ವಿವರ ಇಂತಿದ್ದು, ಆವರಣದಲ್ಲಿ ಶೇ.5ರಂತೆ ರೈತರು ಪಾವತಿಸಬೇಕಾದ ವಿಮಾ ಕಂತಿನ ದರದ ವಿವರವನ್ನು ನೀಡಲಾಗಿದೆ.

ಅಡಿಕೆ ಬೆಳೆ–128000 ರೂ.(ವಿಮಾ ಕಂತಿನ ದರ 6400 ರೂ.), ದಾಳಿಂಬೆ–127000 ರೂ.(6350 ರೂ.), ಪರಂಗಿ–134000 ರೂ.(6700 ರೂ.), ಮಾವು–80000 ರೂ.(4000 ರೂ.).

ರೈತರು ಹೆಚ್ಚಿನ ಮಾಹಿತಿಗಾಗಿ ಗುಬ್ಬಿ ತಾಲ್ಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ದೂ.ವಾ.ಸಂ. 08131–295512, ಕಸಬ ಹಾಗೂ ಸಿ.ಎಸ್.ಪುರ ಹೋಬಳಿ–7259243329, ಕಡಬ ಹಾಗೂ ನಿಟ್ಟೂರು ಹೋಬಳಿ–9535376687, ಚೇಳೂರು ಹೋಬಳಿ–6362409080, ಹಾಗಲವಾಡಿ ಹೋಬಳಿ–7259243329ನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ರಸ್ತೆ ಅಪಘಾತದಲ್ಲಿ ವ್ಯಕ್ತಿ ಸಾವು

ತುಮಕೂರು

ತುಮಕೂರು ಸಂಚಾರ ಪೊಲೀಸ್ ಠಾಣೆ ವ್ಯಾಪ್ತಿ ಬಟವಾಡಿ ಸಮೀಪದ ಶಿರಾ ಕಡೆಗೆ ಹೋಗುವ ಎನ್.ಹೆಚ್.48 ರಸ್ತೆಯಲ್ಲಿ ಸುಮಾರು 40 ವರ್ಷದ ಅಪರಿಚಿತ ವ್ಯಕ್ತಿಯು ರಸ್ತೆ ಅಪಘಾತಕ್ಕೊಳಗಾಗಿ ಸಾವನ್ನಪ್ಪಿದ್ದು, ಮೃತದೇಹದ ಮೇಲೆ ವಾಹನಗಳ ಚಕ್ರ ಹರಿದಿರುವುದರಿಂದ ದೇಹವು ರಸ್ತೆಯಲ್ಲಿ ಅಪ್ಪಚ್ಚಿಯಾಗಿ ರಕ್ತದ ಮಡುವಿನಲ್ಲಿ ಬಿದ್ದಿರುವುದು ಕಂಡು ಬಂದಿದೆ.

ಮೃತನ ಮೈಮೇಲೆ ಹಸಿರು ಬಣ್ಣದ ಬಿಳಿ ಗೀರುಗಳುಳ್ಳ ಟೀ ಷರ್ಟ್, ಕಪ್ಪು ಬಣ್ಣದ ಪ್ಯಾಂಟು, ನೇರಳೆ ಬಣ್ಣದ ಜರ್ಕಿನ್ ಇದ್ದು, ಕಾಲಿನಲ್ಲಿ ಕಪ್ಪು ಬಣ್ಣದ ಶೂ ಇರುತ್ತದೆ. ಮೃತ ದೇಹವನ್ನು ತುಮಕೂರು ಜಿಲ್ಲಾ ಆಸ್ಪತ್ರೆಯ ಶವಾಗಾರದಲ್ಲಿ ಇಟ್ಟಿದ್ದು, ವಾರಸುದಾರರು ಯಾರಾದರೂ ಇದ್ದಲ್ಲಿ ಕೂಡಲೇ ಸಂಪರ್ಕಿಸಬೇಕಾಗಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

# ಅಪರಿಚಿತ ಮಹಿಳೆ ಸಾವು

ತುಮಕೂರು

ತುಮಕೂರು ತಾಲ್ಲೂಕು, ಕೋರ ಗ್ರಾಮದ ಹತ್ತಿರವಿರುವ ನಿರಾಶ್ರಿತರ ಕೇಂದ್ರದಲ್ಲಿದ್ದ ಸುಮಾರು 63 ವರ್ಷದ ಚಂದ್ರಿಕಾ ಎಂಬ ನಿರಾಶ್ರಿತಳು ಜೂನ್ 9ರಂದು ಮೃತಪಟ್ಟಿದ್ದಾರೆಂದು ಕೋರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಮೃತ ಮಹಿಳೆಯು 165 ಸೆಂ.ಮೀ. ಎತ್ತರ, ದುಂಡು ಮುಖ, ದೃಢಕಾಯ ಶರೀರ ಹೊಂದಿದ್ದು ಕನ್ನಡ ಮಾತನಾಡುತ್ತಿದ್ದರು. ಮೃತರ ಸರಿಯಾದ ಹೆಸರು, ವಿಳಾಸ ತಿಳಿದು ಬಂದಿರುವುದಿಲ್ಲ.

# ‘ಜಗತ್ತಿನಲ್ಲಿ ಶಾಂತಿ, ನೆಮ್ಮದಿಯಿಂದ ಸಾಗಬೇಕಾದರೆ, ಗೀತೆಯ ಸಾರವನ್ನು ಅರ್ಥೈಸಿಕೊಳ್ಳಬೇಕು’

ವಿಜಯಪುರ



ಮಾನವನ ಬದುಕು, ಈ ಜಗತ್ತಿನಲ್ಲಿ ಶಾಂತಿ, ನೆಮ್ಮದಿಯಿಂದ ಸಾಗಬೇಕಾದರೆ, ಗೀತೆಯ ಸಾರವನ್ನು ಅರ್ಥೈಸಿಕೊಂಡು, ಸಾಗಿದಾಗ ಮಾತ್ರ, ಜೀವನಕ್ಕೆ ಅರ್ಥ ಬರುತ್ತದೆ ಎಂದು ಅಯೋಧ್ಯಾನಗರ ಶಿವಾಚಾರ್ಯ ವೈಶ್ಯ ನಗರ್ತ ಮಂಡಳಿಯ ಖಜಾಂಚಿ ಎಂ.ಶಂಕರ್ ಹೇಳಿದರು.

ಪಟ್ಟಣದ ಸೌಮ್ಯಚನ್ನಕೇಶವಸ್ವಾಮಿ ದೇವಾಲಯದ ಆವರಣದಲ್ಲಿ, ಶ್ರೀಕೃಷ್ಣ ಯತಿಂದ್ರ ಸೇವಾ ಟ್ರಸ್ಟ್ ವತಿಯಿಂದ ಶ್ರೀಮದ್ ಭಗವದ್ಗೀತಾ ಪಾರಾಯಣ ಶ್ರೀಕೈವಾರ ಯೋಗಿ ನಾರೇಯಣ ಯತೀಂದ್ರರ ಹಾಗೂ ಕನಕ,ಪುರಂದರ ಗೀತಾ ತತ್ವಾಮೃತ ರಸಧಾರೆಯ 252 ನೇ ಕಾರ್ಯಕ್ರಮ ಹಾಗೂ ಶ್ರೀಷ್ಣ ಮಾಸಿಕ ದ್ವಾದಶಿ ವಿಚಾರಧಾರೆಯ ಗೋಷ್ಠಿಯ 203 ನೇ ಕಾರ್ಯಕ್ರಮ ಉದ್ಘಾಟನೆ ಮಾಡಿ ಅವರು ಮಾತನಾಡಿದರು.

ಜಗತ್ತಿನಲ್ಲಿ ತಂತ್ರಜ್ಞಾನ ಮುಂದುವರೆದಿದೆ. ಜನರು, ಅದರ ವೇಗಕ್ಕೆ ತಕ್ಕಂತೆ ಸಾಗುತ್ತಿದ್ದಾರೆ. ಆಧುನಿಕತೆಯ ನಡುವೆ, ಬಾಂಧವ್ಯಗಳಿಗೆ ಬೆಲೆಯಿಲ್ಲದಂತಾಗುತ್ತಿದೆ. ಮಾನವನರಲ್ಲಿ ಸ್ವಾರ್ಥ ಚಿಂತನೆ ಹೆಚ್ಚಾಗುತ್ತಿದೆ. ಕೌಟುಂಬಿಕ ಬಾಂಧವ್ಯಗಳು ದೂರವಾಗುತ್ತಿದೆ. ಇದೆಲ್ಲವನ್ನು ತಹಬದಿಗೆ ತಂದು, ಜನರೆಲ್ಲರೂ ಸನ್ಮಾರ್ಗದಲ್ಲಿ ಸಾಗುವಂತೆ ಮಾಡಬೇಕಾದರೆ, ಸತ್ಸಂಗದಂತಹ ಕಾರ್ಯಕ್ರಮಗಳು, ಪ್ರವಚನಗಳು ಹೆಚ್ಚು ನಡೆಯಬೇಕು. ಇಂತಹ ಕಾರ್ಯಕ್ರಮಗಳಲ್ಲಿ ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದರು.

ಸತ್ಸಂಗದ ಸಂಚಾಲಕ ವಿ.ಎನ್ ವೆಂಕಟೇಶ್ ಮಾತನಾಡಿ, ಸಮಾಜದಲ್ಲಿ ಸಾಮಾಜಿಕ ಜಾಲತಾಣಗಳು, ಸೇರಿದಂತೆ ವಿವಿಧ ವಿಭಾಗಗಳಲ್ಲಿ ತೊಡಗಿಸಿಕೊಂಡು ತಮಗಿರುವ ಉತ್ತಮವಾದ ಜೀವನವನ್ನು ಹಾಳು ಮಾಡಿಕೊಳ್ಳುತ್ತಿರುವ ಯುವಪೀಳಿಗೆಯನ್ನು ಸರಿದಾರಿಗೆ ತರಬೇಕು ಎನ್ನುವ ಉದ್ದೇಶದಿಂದ ಸತ್ಸಂಗ ಕಾರ್ಯಕ್ರಮಗಳನ್ನು ಭಕ್ತರ ಸಹಕಾರದಿಂದ ನಿರಂತರವಾಗಿ ಆಯೋಜನೆ ಮಾಡಿಕೊಂಡು ಬರಲಾಗುತ್ತಿದೆ. ಜನರೂ ಕೂಡಾ ಇಂತಹ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದರು. ಎಂ.ವಿ.ನಾಯ್ಡು ತಂಡದವರಿಂದ ಗೀತಗಾಯನ ಕಾರ್ಯಕ್ರಮ ನಡೆಯಿತು. ಮೇಲೂರಿನ ಗೋಪಾಲಪ್ಪ, ರಾಮಾಂಜಿನಪ್ಪ, ವೆಂಕಟೇಶ್ವರ ಸಾಮಿಲ್ ಮಾಲೀಕ ನಾಗರಾಜ್, ಕಾರ್ಯದರ್ಶಿ ಕೃಷ್ಣಪ್ಪ, ಖಜಾಂಚಿ ಆರ್.ರಾಜಶೇಖರ್, ಸದಸ್ಯರಾದ ಎಸ್.ಆರ್ .ಲಕ್ಷ್ಮೀನಾರಾಯಣ, ಅಂಜಿನಪ್ಪ ಆರ್.ಮುನಿರಾಜು ರತ್ನಮ್ಮ ರಾಮದಾಸ್, ಅನಿತಾ ರಾಮದಾಸ್ ಹಾಗೂ ಪದಾಧಿಕಾರಿಗಳು ಹಾಜರಿದ್ದರು.

# ನೀರಿನ ಸಮಸ್ಯೆ ಗಂಭೀರ ಚರ್ಚೆ: ಸದಸ್ಯರಿಂದ ಅಧಿಕಾರಿಗಳ ವಿರುದ್ಧ ಆಕ್ರೋಶ

ದೊಡ್ಡಬಳ್ಳಾಪುರ

ನಗರದಲ್ಲಿ ಶುದ್ಧ ಕುಡಿಯುವ ನೀರಿನ ಕೊರತೆ, ಕಲುಷಿತ ನೀರಿನ ಸರಬರಾಜು ಹಾಗೂ ಒಳಚರಂಡಿ ಅವ್ಯವಸ್ಥೆ ಕುರಿತು ನಗರಸಭೆಯ ಸಾಮಾನ್ಯ ಸಭೆಯಲ್ಲಿ ಗಂಭೀರ ಚರ್ಚೆ ನಡೆಯಿತು. ಹಲವಾರು ವಾರ್ಡ್‌ಗಳಲ್ಲಿ ಮೂಲಸೌಕರ್ಯ ಸಮಸ್ಯೆಗಳು ತೀವ್ರಗೊಂಡಿರುವ ಹಿನ್ನೆಲೆಯಲ್ಲಿ ಸದಸ್ಯರು ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

> ರೈಲ್ವೇ ಸ್ಟೇಷನ್ ಮಲ್ಲೇಶ್, ದರ್ಗಾಪುರ ಹಾಗೂ ಖಾಸ್ ಬಾಗ್ ಭಾಗಗಳಲ್ಲಿ ಕಲುಷಿತ ನೀರು ಸರಬರಾಜಾಗುತ್ತಿರುವ ಬಗ್ಗೆ ದೂರು ನೀಡಿದರು. ಶುದ್ಧ ಕುಡಿಯುವ ನೀರಿನ ಘಟಕಗಳ ಸ್ವಚ್ಛತೆ ಸರಿಯಾಗಿ ನಡೆಯುತ್ತಿಲ್ಲ ಎಂದು ಆರೋಪಿಸಿದ ಅವರು, ಪ್ರಯೋಗಾಲಯದ ವರದಿ ಆಧರಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಉಪಾಧ್ಯಕ್ಷ ಬಂತಿ ವೆಂಕಟೇಶ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ಆರಂಭದಲ್ಲೇ 18ನೇ ವಾರ್ಡ್ ಸದಸ್ಯ ಶಿವಣ್ಣ ಮಾತನಾಡಿ, ವಾರಕ್ಕೆ ಒಂದೇ ಬಾರಿ ನೀರು ಸರಬರಾಜಾಗುತ್ತಿದ್ದು, ಅದು ಕೂಡ ಕೇವಲ ಒಂದು ಗಂಟೆ ಮಾತ್ರ ಲಭ್ಯವಾಗುತ್ತಿದೆ. ನೀರು ಸರಬರಾಜಿನ ಸಮಯವನ್ನು ಹೆಚ್ಚಿಸಬೇಕು ಎಂದು ಅವರು ಒತ್ತಾಯಿಸಿದರು.

ರೈಲ್ವೇ ಸ್ಟೇಷನ್ ಮಲ್ಲೇಶ್, ದರ್ಗಾಪುರ ಹಾಗೂ ಖಾಸ್ ಬಾಗ್ ಭಾಗಗಳಲ್ಲಿ ಕಲುಷಿತ ನೀರು ಸರಬರಾಜಾಗುತ್ತಿರುವ ಬಗ್ಗೆ ದೂರು ನೀಡಿದರು. ಶುದ್ಧ ಕುಡಿಯುವ ನೀರಿನ ಘಟಕಗಳ ಸ್ವಚ್ಛತೆ ಸರಿಯಾಗಿ ನಡೆಯುತ್ತಿಲ್ಲ ಎಂದು ಆರೋಪಿಸಿದ ಅವರು, ಪ್ರಯೋಗಾಲಯದ ವರದಿ ಆಧರಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಈ ವಿಚಾರಕ್ಕೆ ಶಿವರಾಜ್, ಮೋಹನ್, ಆನಂದ್, ಶಂಕ್ರಿ, ಪ್ರಭು ಸೇರಿದಂತೆ ಹಲವು ಸದಸ್ಯರು ಬೆಂಬಲ ವ್ಯಕ್ತಪಡಿಸಿದರು.

ಸದಸ್ಯ ಆನಂದ್ ಮಾತನಾಡಿ, ನಗರದಲ್ಲಿ ಒಳಚರಂಡಿ ವ್ಯವಸ್ಥೆ ಸಂಪೂರ್ಣ ಹದಗೆಟ್ಟಿದ್ದು, ಚೇಂಬರ್‌ಗಳ ನಿರ್ವಹಣೆ ಸರಿಯಾಗಿ ನಡೆಯುತ್ತಿಲ್ಲ. ಇದರಿಂದ ರಸ್ತೆಗಳ ಮೇಲೆ ಕಲುಷಿತ ನೀರು ಹರಿದು ದುರ್ವಾಸನೆ ಉಂಟಾಗುತ್ತಿದೆ ಎಂದು ಹೇಳಿದರು. ಹಲವು ರಸ್ತೆಗಳು ಹಾಳಾಗಿ ಗುಂಡಿಗಳಾಗಿವೆ ಎಂದು ಅವರು ಆರೋಪಿಸಿದರು. ನೀರು ಸರಬರಾಜು ವಿಭಾಗಕ್ಕೆ ಸೂಕ್ತ ಸಿಬ್ಬಂದಿ ನೇಮಿಸಬೇಕು ಎಂದು ಅವರು ಒತ್ತಾಯಿಸಿದರು.

ಸದಸ್ಯರು ಪದೇಪದೇ ಇದೇ ಸಮಸ್ಯೆಗಳನ್ನು ಪ್ರತಿ ಸಭೆಯಲ್ಲೂ ಪ್ರಸ್ತಾಪಿಸುತ್ತಿದ್ದರೂ ಯಾವುದೇ ಶಾಶ್ವತ ಪರಿಹಾರ ಸಿಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಅಧಿಕಾರಿಗಳನ್ನು ಸಂಪರ್ಕಿಸಿದರೂ ಫೋನ್ ಸ್ವೀಕರಿಸುವುದಿಲ್ಲ ಎಂಬ ಆರೋಪವೂ ಸಭೆಯಲ್ಲಿ ಕೇಳಿಬಂತು. ಈ ಸಂದರ್ಭದಲ್ಲಿ ಶಿವರಾಜ್, ಶಂಕ್ರಿ, ಆನಂದ್, ಇಂದ್ರಾಣಿ, ವಡ್ಡರಹಳ್ಳಿ ರವಿ, ಪ್ರಭು, ನಾಗರಾಜ್ ಹಾಗೂ ಮಲ್ಲೇಶ್ ಪೌರಾಯುಕ್ತರ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಪೌರಾಯುಕ್ತರು ಮಾತನಾಡಿ, ಸಮಸ್ಯೆಗಳನ್ನು ಹಂತ ಹಂತವಾಗಿ ಪರಿಹರಿಸಲಾಗುವುದು ಎಂದು ಭರವಸೆ ನೀಡಿದರು. ಆದರೆ ಈ ಉತ್ತರಕ್ಕೆ ತೃಪ್ತರಾಗದ ಸದಸ್ಯರು ಸಭೆಯಲ್ಲಿ ಮತ್ತೆ ಆಕ್ರೋಶ ವ್ಯಕ್ತಪಡಿಸಿದರು. ನಂತರ ಉಪಾಧ್ಯಕ್ಷ ಬಂತಿ ವೆಂಕಟೇಶ್ ಮಧ್ಯಪ್ರವೇಶಿಸಿ ಪರಿಸ್ಥಿತಿಯನ್ನು ಶಾಂತಗೊಳಿಸಿದರು.


ಸದಸ್ಯರು ಸರಿಯಾಗಿ ಕಾರ್ಯನಿರ್ವಹಿಸದ ಗುತ್ತಿಗೆದಾರರಿಗೆ ನೋಟಿಸ್ ನೀಡಬೇಕು, ಅಗತ್ಯವಿದ್ದರೆ ಪರ್ಯಾಯ ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಪೌರಾಯುಕ್ತರು, ಈಗಿರುವ ಮೂವರು ಇಂಜಿನಿಯರ್‌ಗಳಿಗೆ ಉಸ್ತುವಾರಿ ವಹಿಸಲಾಗಿದೆ ಎಂದು ತಿಳಿಸಿದರು.

ನಗರೋತ್ಥಾನ ಯೋಜನೆಯ ಕಾಮಗಾರಿಗಳ ವಿಳಂಬದ ಕುರಿತು ರವಿಕುಮಾರ್ ಪ್ರಸ್ತಾಪಿಸಿ, ಯೋಜನೆಗಳು ನಿಧಾನಗತಿಯಲ್ಲಿ ಸಾಗುತ್ತಿರುವುದನ್ನು ಖಂಡಿಸಿದರು. ಕೆಲ ತಿಂಗಳಲ್ಲಿ ಅವಧಿ ಮುಗಿಯಲಿರುವ ಹಿನ್ನೆಲೆಯಲ್ಲಿ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಬೇಕು ಎಂದು ಅವರು ಒತ್ತಾಯಿಸಿದರು. ಈ ವಿಚಾರಕ್ಕೆ ಮೋಹನ್ ಕೂಡ ಬೆಂಬಲ ನೀಡಿದರು.

ಪೌರಾಯುಕ್ತರು ಮಾತನಾಡಿ, ಕೆಲವು ತಾಂತ್ರಿಕ ಹಾಗೂ ವಿದ್ಯುತ್ ಸಮಸ್ಯೆಗಳಿಂದ ನೀರು ಸರಬರಾಜು ಮತ್ತು ಒಳಚರಂಡಿ ನಿರ್ವಹಣೆಯಲ್ಲಿ ಅಡಚಣೆ ಉಂಟಾಗಿದೆ ಎಂದು ಹೇಳಿದರು. ಗುತ್ತಿಗೆದಾರರು ದರ ಹೆಚ್ಚಳಕ್ಕೆ ಒತ್ತಾಯಿಸುತ್ತಿರುವುದರಿಂದ ಸ್ವಲ್ಪ ತೊಂದರೆ ಆಗುತ್ತಿದೆ, ಆದರೆ ಶೀಘ್ರದಲ್ಲೇ ಸರಿಪಡಿಸಲಾಗುವುದು ಎಂದು ಭರವಸೆ ನೀಡಿದರು. ಸಭೆಯ ಆರಂಭಕ್ಕೂ ಮುನ್ನ ಅಧ್ಯಕ್ಷರಾಗಿದ್ದ ಸುಮಿತ್ರಾ ಆನಂದ್ ಅವರು ವೈಯಕ್ತಿಕ ಕಾರಣಗಳಿಂದ ರಾಜೀನಾಮೆ ನೀಡಿದ್ದು, ಜಿಲ್ಲಾಧಿಕಾರಿಗಳು ಅದನ್ನು ಅಂಗೀಕರಿಸಿದ್ದಾರೆ ಎಂದು ತಿಳಿಸಲಾಯಿತು. ನಂತರ ಉಪಾಧ್ಯಕ್ಷ ಬಂತಿ ವೆಂಕಟೇಶ್ ಅವರು ಅಧಿಕೃತವಾಗಿ ಸಭೆಯ ಅಧ್ಯಕ್ಷತೆ ವಹಿಸಿದರು. ತಮ್ಮ ಅವಧಿಯಲ್ಲಿ ಉತ್ತಮ ಕಾರ್ಯನಿರ್ವಹಣೆಗಾಗಿ ಸುಮಿತ್ರಾ ಆನಂದ್ ಅವರನ್ನು ಸದಸ್ಯರು ಶ್ಲಾಘಿಸಿದರು.

# ಸ್ವಚ್ಛತೆ ಕಾಪಾಡುವಂತೆ ಕರೆ

ಮಾಲೂರು



ನಗರದ ಸ್ವಚ್ಛತೆಗಾಗಿ ಪ್ರತಿಯೊಬ್ಬ ನಾಗರಿಕರು ಬೃಹತ್ ತ್ಯಾಜ್ಯ ಉತ್ಪಾದಕರು ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2026ರಂತೆ ಕಸ ವಿಂಗಡಣೆ ಕಡ್ಡಾಯವಾಗಿದ್ದು ತಮ್ಮ ಮನೆಗಳಲ್ಲಿ ಸಂಗ್ರಹವಾಗುವ ಕಸವನ್ನು ಹಸಿಕಸ, ಒಣಕಸ, ಸ್ಯಾನಿಟರಿ ತ್ಯಾಜ್ಯ, ವಿಶೇಷ ಕಾಳಜಿ ತ್ಯಾಜ್ಯವಾಗಿ, ವಿಂಗಡಿಸಿ ನಗರಸಭೆಯ ಕಸ ಸಂಗ್ರಹಣೆ ಆಟೋ ಟಿಪ್ಪರ್‌ಗಳಿಗೆ ಹಾಕುವ ಮೂಲಕ ನಗರದ ಸ್ವಚ್ಛತೆಯನ್ನು ಕಾಪಾಡಿ ಪರಿಸರವನ್ನು ಸಂರಕ್ಷಿಸುವಂತೆ ನಗರಸಭೆ ಪೌರಾಯುಕ್ತ ಎಂ.ಎಸ್.ಮಹದೇವ ಹೇಳಿದರು.

ಅವರು ಪೌರಾಡಳಿತ ನಿರ್ದೇಶನಾಲಯ ನಗರಸಭೆ ಕಾರ್ಯಾಲಯ ವತಿಯಿಂದ ನಗರದ ಅಂಬೇಡ್ಕರ್ ಭವನದಲ್ಲಿ ವಾರ್ಡ್‌ವಾರು ಸಾರ್ವಜನಿಕರಿಗೆ ಹಮ್ಮಿಕೊಳ್ಳಲಾಗಿದ್ದ ಘನತ್ಯಾಜ್ಯ ನಿರ್ವಹಣೆ ನಿಯಮಗಳು 2026 ರ ಜಾಗೃತಿ ಮೂಡಿಸುವ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮೂಲಭೂತ ಸವಲತ್ತುಗಳಲ್ಲಿ ಅತಿ ಮುಖ್ಯವಾದದ್ದು ಕುಡಿಯುವ ನೀರು ಸ್ವಚ್ಛತೆ ನಮ್ಮ ಸುತ್ತಮುತ್ತಲಿನ ಪರಿಸರವನ್ನು ಶುದ್ಧವಾಗಿಟ್ಟುಕೊಂಡರೆ ಪರಿಸರವು ಕಲುಷಿತವಾಗುವುದಿಲ್ಲ, ಪರಿಸರ ಕಲುಷಿತವಾದರೆ ನಾವು ಅನಾರೋಗ್ಯವನ್ನು ಎದುರಿಸಬೇಕಾಗುತ್ತದೆ, ಉತ್ತಮ ಆರೋಗ್ಯಕ್ಕಾಗಿ ನಮ್ಮ ಸುತ್ತಮುತ್ತಲನ್ನು ಪರಿಸರವನ್ನು ಕಾಪಾಡಿಕೊಳ್ಳಬೇಕಾಗಿದೆ, ಪರಿಸರವನ್ನು ಕಾಪಾಡುವ ನಿಟ್ಟಿನಲ್ಲಿ ಪೌರಾಡಳಿತ ನಿರ್ದೇಶನಾಲಯ ಘನ ತ್ಯಾಜ್ಯ ನಿರ್ವಹಣೆಗಾಗಿ 2026ರ ಕಸ ವಿಂಗಡಣೆ ಕಡ್ಡಾಯ ಗೊಳಿಸಲು 2026ರ ಘನ ತ್ಯಾಜ್ಯ ನಿರ್ವಹಣೆ ಹೊಸ ನಿಯಮವನ್ನು ರೂಪಿಸಿದೆ.

ನಗರವು ದಿನದಿಂದ ದಿನಕ್ಕೆ ವೇಗವಾಗಿ ಬೆಳೆಯುತ್ತಿದ್ದು ಅದರಂತೆ ಕಸ ಸಂಗ್ರಹಣೆ ಮಾಡುವುದರ ಮೂಲಕ ನಗರದ ಸ್ವಚ್ಛತೆಯನ್ನು ಕಾಪಾಡುವುದು ನಗರ ಸಭೆಯ ಆದ್ಯ ಕರ್ತವ್ಯವಾಗಿದ್ದು, ಪ್ರತಿಯೊಬ್ಬ ನಾಗರಿಕರು ತಮ್ಮ ಮನೆಗಳಲ್ಲಿ ಸಂಗ್ರಹವಾಗುವ ಕಸವನ್ನು ಹಸಿಕಸ, ಒಣಕಸ, ಸ್ಯಾನಿಟರಿ ತ್ಯಾಜ್ಯ, ವಿಶೇಷ ಕಾಳಜಿ ತ್ಯಾಜ್ಯವಾಗಿ ವಿಂಗಡಿಸಿ ನಗರಸಭೆಯ ಕಸ ಸಂಗ್ರಹಣೆ ಮಾಡುವ ಆಟೋ ಟಿಪ್ಪರ್‌ಗಳಿಗೆ ನೀಡಬೇಕು ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2026ರ ಪ್ರಕಾರ ಪ್ರತಿಯೊಬ್ಬ ಸಾರ್ವಜನಿಕರು, ಮನೆ ಮಠಗಳು, ವಾಣಿಜ್ಯ ಸಂಸ್ಥೆಗಳು, ಕಚೇರಿಗಳು ಹಾಗೂ ಎಲ್ಲಾ ತ್ಯಾಜ್ಯ ಉತ್ಪಾದಕರು ತಮ್ಮ ಮೂಲದಲ್ಲಿಯೇ ಕಸವನ್ನು ನಾಲ್ಕು ವಿಧಗಳಾಗಿ ಪ್ರತ್ಯೇಕಿಸಿ ನೀಡುವುದು ಕಡ್ಡಾಯವಾಗಿದೆ.

ಹಸಿ ತ್ಯಾಜ್ಯ– ಆಹಾರ ಅವಶೇಷಗಳು, ತರಕಾರಿ ಹಾಗೂ ಹಣ್ಣಿನ ಸಿಪ್ಪೆಗಳು, ತೋಟದ ತ್ಯಾಜ್ಯ.ಒಣ ತ್ಯಾಜ್ಯ– ಕಾಗದ, ಪ್ಲಾಸ್ಟಿಕ್, ಲೋಹ, ಗಾಜು ಹಾಗೂ ಮರುಬಳಕೆ ಮಾಡಬಹುದಾದ ವಸ್ತುಗಳು. ಸ್ಯಾನಿಟರಿ ತ್ಯಾಜ್ಯ– ಡೈಪರ್‌ಗಳು, ಸ್ಯಾನಿಟರಿ ನ್ಯಾಪ್ಕಿನ್‌ಗಳು ಹಾಗೂ ಇತರೆ ಸ್ವಚ್ಛತಾ ತ್ಯಾಜ್ಯಗಳು.

ವಿಶೇಷ ತ್ಯಾಜ್ಯ– ಬ್ಯಾಟರಿಗಳು, ಬಲ್ಬ್‌ಗಳು, ಔಷಧಿಗಳ ಅವಶೇಷಗಳು, ಇ–ತ್ಯಾಜ್ಯ ಹಾಗೂ ಅಪಾಯಕಾರಿ ತ್ಯಾಜ್ಯಗಳು. ಮಿಶ್ರ ಕಸ ನೀಡುವುದು ನಿಯಮ ಉಲ್ಲಂಘನೆಯಾಗಿದ್ದು, ಪರಿಸರ ಮಾಲಿನ್ಯ ಹಾಗೂ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುತ್ತದೆ.

ಆದ್ದರಿಂದ ಪ್ರತಿಯೊಬ್ಬ ನಾಗರಿಕರು ತಮ್ಮ ಜವಾಬ್ದಾರಿಯನ್ನು ಅರಿತು ಕಸವನ್ನು ನಾಲ್ಕು ವಿಭಾಗಗಳಲ್ಲಿ ವಿಂಗಡಿಸಿ ಸ್ಥಳೀಯ ಸಂಸ್ಥೆಗೆ ಹಸ್ತಾಂತರಿಸಬೇಕು. ಮೂಲದಲ್ಲಿಯೇ ಕಸ ವಿಂಗಡಣೆ – ಸ್ವಚ್ಛ ಪರಿಸರದತ್ತ ಮೊದಲ ಹೆಜ್ಜೆ" ಸ್ವಚ್ಛ ನಗರ, ಆರೋಗ್ಯಕರ ಸಮಾಜ ಹಾಗೂ ಸುಸ್ಥಿರ ಭವಿಷ್ಯಕ್ಕಾಗಿ ಎಲ್ಲರೂ ಘನ ತ್ಯಾಜ್ಯ ನಿರ್ವಹಣಾ ನಿಯಮಗಳು–2026ನ್ನು ಕಟ್ಟುನಿಟ್ಟಾಗಿ ಪಾಲಿಸೋಣ. ಎಂದ ಅವರು ನಗರದಲ್ಲಿ ನಗರಸಭೆಯ ಆರೋಗ್ಯ ಶಾಖೆಯಿಂದ ಘನತ್ಯಾಜ್ಯ ನಿರ್ವಹಣೆ 2026ರ ಹೊಸ ನಿಯಮದ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಮಾಡಲಾಗುತ್ತಿದೆ.

ಸಾರ್ವಜನಿಕರು ಜಾಗೃತಿ ಮೂಡಿಸುವ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಹೊಸ ನಿಯಮಗಳ ಬಗ್ಗೆ ಮಾಹಿತಿ ಪಡೆದು ನಗರದ ಸ್ವಚ್ಛತೆಗಾಗಿ ನಗರಸಭೆಯ ಅಧಿಕಾರಿಗಳೊಂದಿಗೆ ಕೈಜೋಡಿಸುವಂತೆ ಹೇಳಿದರು.

ಈ ಸಂದರ್ಭದಲ್ಲಿ ಪರಿಸರ ಅಭಿಯಂತರ ಶಾಲಿನಿ, ಹಿರಿಯ ಆರೋಗ್ಯ ನಿರೀಕ್ಷಕ ಶ್ರೀನಿವಾಸ್, ಕಿರಿಯ ಅರೋಗ್ಯ ನಿರೀಕ್ಷಿಕ ರಾಜಣ್ಣ, ಹಾಜರಿದ್ದರು.

# ನಾಡಪ್ರಭು ಕೆಂಪೇಗೌಡ ಜಯಂತಿ ಸಂಭ್ರಮಕ್ಕೆ ಸಕಲ ಸಿದ್ಧತೆ

ಚಿಕ್ಕಬಳ್ಳಾಪುರ

ನಾಡಪ್ರಭು ಕೆಂಪೇಗೌಡರ ಜಯಂತಿಯನ್ನು ಇದೇ ಜೂನ್ 27ರಂದು ನಗರದ ಕನ್ನಡ ಭವನದಲ್ಲಿ ಸಂಭ್ರಮ, ಸಡಗರ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಜಿ. ಪ್ರಭು ತಿಳಿಸಿದ್ದಾರೆ.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಕೆಂಪೇಗೌಡ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಾರ್ಯಕ್ರಮವನ್ನು ಅದ್ದೂರಿಯಾಗಿ ಹಾಗೂ ಯಾವುದೇ ಲೋಪವಿಲ್ಲದೆ ಯಶಸ್ವಿಯಾಗಿ ನಡೆಸಲು ಎಲ್ಲಾ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

ಜೂನ್ 27ರಂದು ಬಿಬಿ ರಸ್ತೆಯ ರಂಗನಾಥಸ್ವಾಮಿ ದೇವಾಲಯದ ಮುಂಭಾಗದಿಂದ ಕನ್ನಡ ಭವನದವರೆಗೆ ಪಲ್ಲಕ್ಕಿ ಹಾಗೂ ಜಾನಪದ ಕಲಾತಂಡಗಳೊಂದಿಗೆ ಭವ್ಯ ಮೆರವಣಿಗೆ ನಡೆಯಲಿದೆ ಎಂದು ತಿಳಿಸಿದರು. ಮೆರವಣಿಗೆಯ ಮಧ್ಯದಲ್ಲಿ ನಗರದ ಒಕ್ಕಲಿಗರ ಕಲ್ಯಾಣ ಮಂಟಪದ ಮುಂಭಾಗದಲ್ಲಿರುವ ನಾಡಪ್ರಭು ಕೆಂಪೇಗೌಡರ ಪುತ್ಥಳಿಗೆ ಮಾಲಾರ್ಪಣೆ ಕಾರ್ಯಕ್ರಮವೂ ನಡೆಯಲಿದೆ ಎಂದು ಅವರು ಹೇಳಿದರು.

ನಂತರ ಕನ್ನಡ ಭವನದಲ್ಲಿ ವೇದಿಕೆ ಕಾರ್ಯಕ್ರಮಗಳು ಜರುಗಲಿದ್ದು, ನಾಡಪ್ರಭು ಕೆಂಪೇಗೌಡರ ವಿಚಾರಧಾರೆಗಳ ಕುರಿತು ಉಪನ್ಯಾಸ ಕಾರ್ಯಕ್ರಮಗಳು ನಡೆಯಲಿವೆ. ಜೊತೆಗೆ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಪ್ರಗತಿಪರ ರೈತರಿಗೆ ಸನ್ಮಾನ ನೀಡಲಾಗುವುದು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಕಾರ್ಯಕ್ರಮದ ಯಶಸ್ವಿಗಾಗಿ ಆಹ್ವಾನ ಪತ್ರಿಕೆ ಮುದ್ರಣ ಮತ್ತು ವಿತರಣೆ, ವೇದಿಕೆ ಸಿದ್ಧತೆ, ಸಾಧಕರ ಆಯ್ಕೆ, ಪ್ರತಿಭಾ ಪುರಸ್ಕಾರ, ಸನ್ಮಾನ ಹಾಗೂ ಕಲಾತಂಡಗಳ ವ್ಯವಸ್ಥೆ ಸೇರಿದಂತೆ ಎಲ್ಲಾ ವಿಭಾಗಗಳಿಗೂ ಇಲಾಖಾವಾರು ಜವಾಬ್ದಾರಿ ಹಂಚಿಕೆ ಮಾಡಲಾಗಿದೆ ಎಂದು ಅವರು ಹೇಳಿದರು.

ಯಾವುದೇ ರೀತಿಯ ಲೋಪದೋಷಗಳಿಗೆ ಅವಕಾಶ ನೀಡದೆ ಎಲ್ಲಾ ಅಧಿಕಾರಿಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದ ಅವರು, ಜಯಂತ್ಯೋತ್ಸವವನ್ನು ಅರ್ಥಪೂರ್ಣವಾಗಿ ಯಶಸ್ವಿಗೊಳಿಸಲು ಎಲ್ಲಾ ಇಲಾಖೆಗಳು ಸಹಕಾರ ನೀಡಬೇಕು ಎಂದು ನಿರ್ದೇಶಿಸಿದರು.

ಜಿಲ್ಲೆಯ ಸಮಸ್ತ ನಾಗರಿಕರು, ಸಮುದಾಯದ ಮುಖಂಡರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ರೈತಬಾಂಧವರು ಸೇರಿದಂತೆ ಎಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಮನವಿ ಮಾಡಿದರು.

ಸಭೆಯಲ್ಲಿ ರಾಜ್ಯ ಬೀಜ ನಿಗಮದ ಅಧ್ಯಕ್ಷ ಎಂ. ಆಂಜಿನಪ್ಪ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಜಿಲ್ಲಾ ಅಧ್ಯಕ್ಷ ಎನ್. ರಮೇಶ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಅತಿಕ್ ಪಾಷಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಕುಮಾರ, ತಾಲ್ಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಪಿ. ಎನ್. ಕೇಶವರೆಡ್ಡಿ ಹಾಗೂ ಸಮುದಾಯದ ಮುಖಂಡರು, ಕ್ರೀಡಾಪಟುಗಳು ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಪ್ರತಿಯೊಬ್ಬರಿಗೂ ಕಾನೂನು ಅರಿವು ಅತ್ಯವಶ್ಯ

ತುಮಕೂರು

ಕಾನೂನು ಎನ್ನುವುದು ಒಂದು ಸಾಮಾನ್ಯ ಜ್ಞಾನ. ಕಾನೂನಿನ ಬಗ್ಗೆ ಪ್ರತಿಯೊಬ್ಬರು ಅರಿವು ಹೊಂದಿರಬೇಕು ಎಂದು ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿಜೆಎಂ ಸುನೀಲ್ ಎಸ್. ಹೊಸಮನಿ ಹೇಳಿದರು.

ನಗರದ ಎಸ್‌ಐಟಿ ಕ್ಯಾಂಪಸ್‌ನಲ್ಲಿ ಶ್ರೀ ಕೃಷ್ಣ ವಿದ್ಯಾಸಂಸ್ಥೆ, ಶ್ರೀ ಕೃಷ್ಣ ಕಾನೂನು ಕಾಲೇಜು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಹಯೋಗದಲ್ಲಿ ಏರ್ಪಡಿಸಿದ್ದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಗಿಡಗಳಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಕಾನೂನನ್ನು ಪ್ರತಿಯೊಬ್ಬರು ಅರಿತಿರಬೇಕು. ನಾವು ತಾಯಿಯ ಹೊಟ್ಟೆಯಲ್ಲಿ ಇರುವಾಗಲೇ ಕಾನೂನು ರಕ್ಷಣೆಯ ಹಕ್ಕನ್ನು ಪಡೆದುಕೊಂಡಿರುತ್ತೇವೆ. ಪ್ರತಿಯೊಬ್ಬರಿಗೂ ಈ ಹಕ್ಕು ತಾವು ಸಾಯುವವರೆಗೂ ಇರುತ್ತದೆ. ಭ್ರೂಣ ಪತ್ತೆ ಹಾಗೂ ಹತ್ಯೆ ಮಾಡುವುದು ಕಾನೂನು ಪ್ರಕಾರ ತಪ್ಪು. ಒಂದು ವೇಳೆ ಹಾಗೆ ಮಾಡಿದಲ್ಲಿ ಅವರಿಗೆ ಕಾನೂನಿನಲ್ಲಿ ಜೈಲು ಶಿಕ್ಷೆಗೆ ಒಳಗಾಗ ಬೇಕಾಗುತ್ತದೆ ಎಂದು ಅವರು ತಿಳಿಸಿದರು.

ಕಳಬೇಡ ಕೊಲಬೇಡ, ಹುಸಿಯ ನುಡಿಯಲು ಬೇಡ, ಮುನಿಯ ಬೇಡ ಅನ್ಯರಿಗೆ ಅಸಹ್ಯಪಡ ಬೇಡ, ತನ್ನ ಬಣ್ಣಿಸಬೇಡ ಇದಿರ ಹಳಿಯಲು ಬೇಡ, ಇದೇ ಅಂತರಂಗ ಶುದ್ಧಿ, ಇದೇ ಬಹಿರಂಗ ಶುದ್ಧಿ ಇದೇ ನಮ್ಮ ಕೂಡಲ ಸಂಗಮ ದೇವರನೊಲಿಸುವ ಪರಿ ಎಂದು ಹನ್ನೆರಡನೆ ಶತಮಾನದಲ್ಲಿಯೇ ಬಸವಣ್ಣನವರು ಕಾನೂನು ಒಳಗೊಂಡಂತೆ ತಮ್ಮ ವಚನದಲ್ಲಿ ಸಾಮಾನ್ಯ ಜ್ಞಾನವನ್ನು ತಿಳಿಸಿದ್ದಾರೆ. ಕಾನೂನು ಎನ್ನುವುದು ಒಂದು ಸಾಮಾನ್ಯ ಜ್ಞಾನ ಎಂದು ಅವರು ತಿಳಿಸಿದರು.

ಮೋಟಾರು ವಾಹನ ಕಾಯ್ದೆ, ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ ಕಾಯ್ದೆ ಬಗ್ಗೆ ವಿವರವಾಗಿ ಮಾಹಿತಿ ನೀಡಿದ ಅವರು, ಕಾಯ್ದೆಯಿಂದ ಇರುವ ರಕ್ಷಣೆ ಹಾಗೂ ಶಿಕ್ಷೆ, ದಂಡದ ಬಗ್ಗೆ ಸವಿಸ್ತಾರವಾಗಿ ವಿದ್ಯಾರ್ಥಿಗಳಿಗೆ ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯಕಾರ್ಯದರ್ಶಿ ಲೋಕೇಶ್ ಧನಪಾಲ್ ಹವಾಲೆ ಮಾತನಾಡಿ, ಬಾಲ್ಯ ವಿವಾಹವು ಕಾನೂನಿ ರೀತ್ಯ ಅಪರಾಧವಾಗಿದ್ದು, ಇದನ್ನು ತಡೆಗಟ್ಟಬೇಕಾದ್ದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು. ಪ್ರತಿಯೊಬ್ಬರಿಗೂ ಕಾನೂನು ಅರಿವು–ನೆರವು ಮೂಡಿಸುವುದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹೊಣೆಯಾಗಿದೆ. ಇಲ್ಲಿ ಉಚಿತವಾಗಿ ಸಲಹೆಗಳನ್ನು ನೀಡಲಾಗುತ್ತದೆ. ನಮ್ಮ ಪ್ರಾಧಿಕಾರ ಇರುವುದೇ ಕಾನೂನಿನ ಅವಶ್ಯಕತೆ ಯಾರಿಗೆಲ್ಲ ಇದೆಯೋ ಅವರಿಗೆಲ್ಲ ನೆರವು ನೀಡುವ ಉದ್ದೇಶ ನಮ್ಮ ಪ್ರಾಧಿಕಾರದ್ದಾಗಿದೆ. ಎಲ್ಲರೂ ಇದರ ನೆರವನ್ನು ಪಡೆಯಬೇಕು ಎಂದು ತಿಳಿಸಿದರು.

ಲೈಂಗಿಕ ಅಪರಾಧಗಳಿಂದ ಮಕ್ಕಳರಕ್ಷಣೆ (ಪೋಕ್ಸೋ) ಕಾಯ್ದೆ ಕುರಿತು ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೊಂಡಿದ್ದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಪ್ಯಾನಲ್ ವಕೀಲರಾದ ಆಶಾ ಕೆ.ಎಸ್. ಮಾತನಾಡಿ, ಇಂದು ಮಕ್ಕಳ ಮೇಲೆ ಅತಿ ಹೆಚ್ಚು ಲೈಂಗಿ ದೌರ್ಜನ್ಯಗಳು ನಡೆಯುತ್ತಿವೆ. ಅದರಲ್ಲೂ ನೂರಕ್ಕೆ ಎಂಬತ್ತು ಪ್ರತಿ ಶತ ಗಂಡು ಮಕ್ಕಳ ಮೇಲೆ ದೌರ್ಜ್ಯ ನಡೆಯುತ್ತಿದೆ. ಹೆಣ್ಣು ಮಕ್ಕಳ ಮೇಲೆ ನಡೆದಂತಹ ಪ್ರಕರಣಗಳು ಮಾತ್ರ ನೋಂದಣಿಯಾಗುತ್ತಿವೆ.

ಆದರೆ, ಗಂಡು ಮಕ್ಕಳ ಮೇಲೆ ಅದರಲ್ಲೂ ಹದಿನೈದು ವರ್ಷದೊಳಗಿನ ಮಕ್ಕಳ ಮೇಲೆ ಅತಿ ಹೆಚ್ಚು ಲೈಂಗಿ ದೌರ್ಜನ್ಯಗಳು ನಡೆಯುತ್ತಿದ್ದರೂ ಸಹ ಯಾರೂ ಪ್ರಕರಣ ನೋಂದಣಿ ಮಾಡಲು ಮುಂದಾಗುವುದಿಲ್ಲ. ಕಾರಣ ಇಷ್ಟೇ ಮರ್ಯಾದೆ ಪ್ರಶ್ನೆ? ಭವಿಷ್ಯದಲ್ಲಿ ಸಮಾಜದಲ್ಲಿ ಶಾಂತಿ– ನೆಮ್ಮದಿಯಿಂದ ಬದಕಲು ಕಷ್ಟವಾಗುತ್ತದೆ ಎಂಬ ಉದ್ದೇಶದಿಂದ ನೋಂದಣಿ ತುಂಬಾ ಕಡಿಮೆ. ಈ ಕುರಿತು ಕಾನೂನು ಅರಿವು ಮೂಡಿಸುವ ಅಗತ್ಯವಿದೆ ಎಂದು ಹೇಳಿದರು.

ಸಮಾರಂಭದಲ್ಲಿ ಎನ್‌ಸಿಸಿ ಮುಖ್ಯಸ್ಥ ಅನಿಲ್‌ಕುಮಾರ, 4 ಕರ್ನಾಟಕ ಬಟಾಲಿಯನ್ ಎನ್‌ಸಿಸಿ ಜೆಸಿಓ ಯೋಗೀಶ್ ಕೆ.ಡಿ., ಶ್ರೀ ಕೃಷ್ಣ ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಡಾ.ವಿನೆಟ್ ವಿಮಲ, ಆಯುಷ್ಯಮಾನ್ ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಮಂಜುಳಾ, ಸಹ ಪ್ರಾಧ್ಯಾಪಕರಾದ ರಾಜೇಶ್ವರಿ, ಸುಮಿತ್ರಾ ಪಾಟೀಲ್, ಸ್ವಾತಿ ಮತ್ತಿತರರು ಉಪಸ್ಥಿತರಿದ್ದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
23/06/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಯಶಸ್ವಿಗೊಳಿಸಲು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಕರೆ

ಕೋಲಾರ

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಕರ್ನಾಟಕ ರಾಜ್ಯದಲ್ಲಿ ಮೂರನೇ ಹಂತದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯು ನಡೆಯುತ್ತಿದ್ದು, ಜಿಲ್ಲೆಯಲ್ಲಿ ಈ ಕಾರ್ಯಕ್ರಮವನ್ನು ಅತ್ಯಂತ ಪಾರದರ್ಶಕ ಹಾಗೂ ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ಅವರು ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗಕ್ಕೆ ಸೂಚನೆ ನೀಡಿದರು.

ಇಂದು ಜಿಲ್ಲಾಧಿಕಾರಿಗಳ ಆಡಿಟೋರಿಯಂ ನಲ್ಲಿ ಹಮ್ಮಿಕೊಳ್ಳಲಾಗಿದ್ದ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರ ಎಸ್.ಐ.ಆರ್ ತರಬೇತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ಪ್ರತಿ ವರ್ಷ ಮತದಾರರ ಪಟ್ಟಿಯ ತಿದ್ದುಪಡಿಗಾಗಿ ಸಮ್ಮರಿ ರಿವಿಷನ್ ಪ್ರಕ್ರಿಯೆ ನಡೆಯುತ್ತದೆ. ಆದರೆ, ಎಸ್.ಐ.ಆರ್ ಪ್ರಕ್ರಿಯೆಯು ಸುಮಾರು 24 ವರ್ಷಗಳ ಸುದೀರ್ಘ ಅವಧಿಯ ನಂತರ ನಡೆಯುತ್ತಿರುವ ಅತ್ಯಂತ ಜವಾಬ್ದಾರಿಯುತ ಹಾಗೂ ಮಹತ್ವದ ಕಾರ್ಯವಾಗಿದೆ. ನಗರೀಕರಣ, ಜನರ ವಲಸೆ, ಮರಣ ಹಾಗೂ ವಿಳಾಸ ಬದಲಾವಣೆಯಿಂದಾಗಿ ಮತದಾರರ ಪಟ್ಟಿಯಲ್ಲಿ ಕಂಡುಬರುವ ನ್ಯೂನತೆಗಳನ್ನು ಸರಿಪಡಿಸಿ, ಸಂಪೂರ್ಣವಾಗಿ ಹೊಸ ಹಾಗೂ ಸ್ವಚ್ಛ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು ಈ ಪ್ರಕ್ರಿಯೆಯ ಮುಖ್ಯ ಉದ್ದೇಶವಾಗಿದೆ ಎಂದು ಜಿಲ್ಲಾಧಿಕಾರಿಗಳು ವಿವರಿಸಿದರು.

ಜಿಲ್ಲೆಯಾದ್ಯಂತ ಒಟ್ಟು 1,538 ಬಿ.ಎಲ್.ಓ ಕಾರ್ಯನಿರ್ವಹಿಸುತ್ತಿದ್ದು, ಪ್ರತಿಯೊಬ್ಬ ಮತದಾರರ ಮನೆಗೆ ಭೇಟಿ ನೀಡಿ ಗಣತಿ ನಡೆಸಲಿದ್ದಾರೆ. ಒಂದು ವೇಳೆ ಮತದಾರರು ಮನೆಯಲ್ಲಿ ಇಲ್ಲದಿದ್ದರೆ ಕನಿಷ್ಠ ಮೂರು ಬಾರಿ ಬಿ.ಎಲ್.ಓಗಳು ಆ ಮನೆಗೆ ಭೇಟಿ ನೀಡಬೇಕಾಗುತ್ತದೆ. ಇದಕ್ಕಾಗಿ ಪರ್ಪಲ್ ಕಲರ್ (ಕೆಲಸ ಮುಗಿದಿರುವ ಮನೆಗಳಿಗೆ) ಮತ್ತು ರೆಡ್ ಕಲರ್ (ಬೀಗ ಹಾಕಿರುವ ಮನೆಗಳಿಗೆ) ಸ್ಟಿಕ್ಕರ್‌ಗಳ ಮೂಲಕ ಪ್ರತ್ಯೇಕಿಸಿ ಗುರುತಿಸಲಾಗುತ್ತದೆ.

ಬಿ.ಎಲ್.ಓಗಳು ಪ್ರತಿ ಮತದಾರರಿಗೆ ಗಣತಿ ನಮೂನೆಯನ್ನು ಎರಡು ಪ್ರತಿಗಳಲ್ಲಿ ವಿತರಿಸಲಿದ್ದಾರೆ. ಒಂದು ಪ್ರತಿಯನ್ನು ಭರ್ತಿ ಮಾಡಿ ಸಹಿ ರಸೀದಿಯೊಂದಿಗೆ ಮತದಾರರು ತಮ್ಮ ಬಳಿ ಸುರಕ್ಷಿತವಾಗಿಟ್ಟುಕೊಳ್ಳಬೇಕು.

ಯಾವುದೇ ಮತದಾರರು ಈ ಗಣತಿ ನಮೂನೆಯನ್ನು ಭರ್ತಿ ಮಾಡಿ ಸಹಿಯೊಂದಿಗೆ ಬಿ.ಎಲ್.ಓಗೆ ವಾಪಸ್ ನೀಡದಿದ್ದರೆ, ಅವರ ಹೆಸರನ್ನು ಕರಡು ಮತದಾರರ ಪಟ್ಟಿಯಿಂದ ಕೈಬಿಡಲಾಗುತ್ತದೆ.

## ಇಂದು ವಿಶ್ವ ಯೋಗ ದಿನಾಚರಣೆಗೆ ವಿಪ್ರ ಸಮುದಾಯ ಸಜ್ಜು

ಬೆಂಗಳೂರು

ಯೋಗದಿಂದ ರೋಗ ನಿವಾರಣೆ, ಆರೋಗ್ಯ ವೃದ್ಧಿಯಾಗುವುದು. ಇದರ ಅರಿವನ್ನು ಮೂಡಿಸಲು ಸಾರ್ವಜನಿಕವಾಗಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸಲು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾ ಸಭಾ ಮುಂದಾಗಿದೆ.

ಬೆಳಿಗ್ಗೆ 7–30ಕ್ಕೆ ಬನಶಂಕರಿ 2ನೇ ಹಂತದ ಗಾಯತ್ರಿ ಭವನದ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ದಲ್ಲಿ ನಡೆವ ಯೋಗ ದಿನಾಚರಣೆಯನ್ನು ನಡೆಸಲಾಗುತ್ತಿದೆ. ಭಾರತ ಸರ್ಕಾರದಿಂದ ಪ್ರಮಾಣೀಕೃತ ಯೋಗ ಶಿಕ್ಷಕರಾದ ನಿನಿತ್ ಎನ್.ಕೊರಳ್ಳಿ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ಮಹಾಸಭಾದ ಅಧ್ಯಕ್ಷರಾದ ಎಸ್.ರಘುನಾಥ್ ಅವರು ತಿಳಿಸಿದ್ದಾರೆ.

# ಸಾರ್ವಜನಿಕ ಆಸ್ಪತ್ರೆಯಲ್ಲಿ ಅಕ್ರಮ: ಕ್ರಮಕ್ಕೆ ಆಗ್ರಹ

ಮುಳಬಾಗಿಲು

ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ನಡೆಯುತ್ತಿದೆ ಎನ್ನಲಾದ ಅಕ್ರಮ ಚಟುವಟಿಕೆಗಳು, ವೈದ್ಯರು ಮತ್ತು ಸಿಬ್ಬಂದಿಯ ನಿರ್ಲಕ್ಷ್ಯ, ಹೆರಿಗೆ ಪ್ರಕರಣಗಳಲ್ಲಿ ಹಣ ವಸೂಲಿ ಹಾಗೂ '108' ಆಂಬುಲೆನ್ಸ್ ಸೇವೆಯ ಅವ್ಯವಸ್ಥೆ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಬಹುಜನ ಕನ್ನಡ ಸೇನೆಯ ಪದಾಧಿಕಾರಿಗಳು ಜಿಲ್ಲಾ ಆರೋಗ್ಯ ಇಲಾಖೆಯ ಕಚೇರಿಗೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಬಹುಜನ ಕನ್ನಡ ಸೇನೆ ರಾಜ್ಯಾಧ್ಯಕ್ಷ ಸೈಯಾದ್ ಅರ್ಬಾಜ್, ಮುಳಬಾಗಿಲು ತಾಲ್ಲೂಕಿನ 366 ಗ್ರಾಮಗಳ ಜನರು ಚಿಕಿತ್ಸೆಗಾಗಿ ಸಾರ್ವಜನಿಕ ಆಸ್ಪತ್ರೆಗೆ ಅವಲಂಬಿತರಾಗಿದ್ದಾರೆ. ಆದರೆ ಆಸ್ಪತ್ರೆಗೆ ಬರುವ ರೋಗಿಗಳಿಗೆ ಸರಿಯಾದ ಸಮಯಕ್ಕೆ ವೈದ್ಯರು ಮತ್ತು ಸಂಬಂಧಪಟ್ಟ ಸಿಬ್ಬಂದಿ ಲಭ್ಯವಾಗುತ್ತಿಲ್ಲ ಎಂಬ ಗಂಭೀರ ಆರೋಪ ಮಾಡಿದರು.



ಸಾರ್ವಜನಿಕರು ಚಿಕಿತ್ಸೆಗಾಗಿ ಆಸ್ಪತ್ರೆಗೆ ಬಂದಾಗ ವೈದ್ಯರು ಇಲ್ಲ, ಸಿಬ್ಬಂದಿ ಇಲ್ಲ ಎನ್ನುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಇದರಿಂದ ಬಡ ಹಾಗೂ ಗ್ರಾಮೀಣ ಭಾಗದ ಜನರು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ಸಾರ್ವಜನಿಕರ ಆರೋಗ್ಯದ ವಿಚಾರದಲ್ಲಿ ಇಂತಹ ನಿರ್ಲಕ್ಷ್ಯ ನಡೆಯುತ್ತಿರುವುದು ಖಂಡನೀಯ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಆಸ್ಪತ್ರೆಯಲ್ಲಿ ಹೆರಿಗೆಗಾಗಿ ಬರುವ ಗರ್ಭಿಣಿಯರಿಂದ ಅನಧಿಕೃತವಾಗಿ ಹಣ ವಸೂಲಿ ಮಾಡಲಾಗುತ್ತಿದೆ ಎಂಬ ಆರೋಪವನ್ನೂ ಅವರು ಮುಂದಿಟ್ಟರು. ಸಾಮಾನ್ಯ ಹೆರಿಗೆ ನಡೆಸಬಹುದಾದ ಪ್ರಕರಣಗಳಲ್ಲಿಯೂ ಕೆಲ ವೈದ್ಯರು ಹಣದಾಸೆಯಿಂದ ರೋಗಿಗಳಿಂದ ಐದು ಸಾವಿರದಿಂದ ಹತ್ತು ಸಾವಿರ ರೂಪಾಯಿವರೆಗೆ ಹಣ ಪಡೆಯುತ್ತಿದ್ದಾರೆ. ಸಾರ್ವಜನಿಕ ಆಸ್ಪತ್ರೆಯಲ್ಲಿ ಕೆಳಮಟ್ಟದ ಸಿಬ್ಬಂದಿಯಿಂದ ಹಿಡಿದು ಕೆಲ ವೈದ್ಯರ ಮಟ್ಟದವರೆಗೂ ಹಣಕ್ಕಾಗಿ ರೋಗಿಗಳನ್ನು ಕಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.

ಇದೇ ವೇಳೆ ತುರ್ತು ಆರೋಗ್ಯ ಸೇವೆಯ ಪ್ರಮುಖ ಭಾಗವಾಗಿರುವ '108' ಆಂಬುಲೆನ್ಸ್ ಸೇವೆಯ ಕಾರ್ಯವೈಖರಿಯ ಮೇಲೂ ಅವರು ಅಸಮಾಧಾನ ವ್ಯಕ್ತಪಡಿಸಿದರು. ರೋಗಿಗಳನ್ನು ಆಸ್ಪತ್ರೆಗೆ ಸಾಗಿಸುವ ವೇಳೆ ಚಾಲಕರು ಹಾಗೂ ಸಿಬ್ಬಂದಿಗೆ ಹಣ ನೀಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಹಣ ನೀಡದಿದ್ದರೆ ಸಮಯಕ್ಕೆ ಸರಿಯಾಗಿ ಸೇವೆ ದೊರೆಯುವುದಿಲ್ಲ ಎಂಬ ದೂರುಗಳು ಸಾರ್ವಜನಿಕರಿಂದ ಕೇಳಿಬರುತ್ತಿವೆ ಎಂದು ಆರೋಪಿಸಿದರು.

ಕೆಲ ದಿನಗಳ ಹಿಂದೆ ಆಂಬುಲೆನ್ಸ್ ಸಮಯಕ್ಕೆ ತಲುಪದ ಕಾರಣ ಮಗುವೊಂದು ಸಾವನ್ನಪ್ಪಿದ ಘಟನೆ ನಡೆದಿರುವುದನ್ನು ಉಲ್ಲೇಖಿಸಿದ ಅವರು, ಇಂತಹ ದುರ್ಘಟನೆಗಳು ಮರುಕಳಿಸದಂತೆ ಆರೋಗ್ಯ ಇಲಾಖೆ ತಕ್ಷಣವೇ ಎಚ್ಚೆತ್ತುಕೊಂಡು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಬಹುಜನ ಸಂಘಟನೆಗಳ ಸಂಸ್ಥಾಪಕ ರಾಜ್ಯಾಧ್ಯಕ್ಷ ಸಂಗಸಂದ್ರ ವಿಜಯಕುಮಾರ್, ಬಹುಜನ ಕನ್ನಡ ರಕ್ಷಣಾ ಸೇನೆ ತಾಲೂಕು ಅಧ್ಯಕ್ಷ ಸಿದ್ದಘಟ್ಟ ವೆಂಕಟರಾಮ್, ಆವಣಿ ಮಂಜುನಾಥ್, ಸಲ್ಮಾನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ

ಪಾವಗಡ

ತಾಲ್ಲೂಕಿನ ಅಭಿವೃದ್ಧಿ, ಗ್ರಾಮೀಣ ಮೂಲಸೌಕರ್ಯಗಳ ಬಲವರ್ಧನೆ ಹಾಗೂ ಜನರ ಸಮಸ್ಯೆಗಳಿಗೆ ಸ್ಪಂದಿಸುವುದೇ ತಮ್ಮ ಪ್ರಮುಖ ಗುರಿಯಾಗಿದ್ದು, ನಿರಂತರವಾಗಿ ತೋಟದ ಮನೆಯಲ್ಲೇ ವಾಸವಿದ್ದು ಜನರ ಕಷ್ಟ–ಸುಖಗಳಲ್ಲಿ ಭಾಗಿಯಾಗುವುದಾಗಿ ಶಾಸಕ ಹಾಗೂ ತುಮುಲ್ ಅಧ್ಯಕ್ಷ ಹೆಚ್.ವಿ. ವೆಂಕಟೇಶ್ ಹೇಳಿದರು.

ತಾಲ್ಲೂಕಿನ ಪಳವಳ್ಳಿ ಕೆರೆಕಟ್ಟೆ, ಪೊನ್ನಸಮುದ್ರ ಗೊಲ್ಲರಹಟ್ಟಿ, ಮರಿದಾಸನಹಳ್ಳಿ, ಬಿ.ಹೊಸಹಳ್ಳಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಕ್ರೆಡಲ್ ಇಲಾಖೆಯ ವತಿಯಿಂದ ಹಮ್ಮಿಕೊಂಡಿದ್ದ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಭೂಮಿಪೂಜೆ ಹಾಗೂ ಉದ್ಘಾಟನಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪಳವಳ್ಳಿ ಕೆರೆಕಟ್ಟೆ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜನರ ಕಷ್ಟ–ನಷ್ಟಗಳಿಗೆ ಸ್ಪಂದಿಸುವುದು, ವಸತಿ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡುವುದು ತಮ್ಮ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಗ್ರಾಮೀಣ ಭಾಗಗಳಲ್ಲಿ ರಸ್ತೆ, ಚರಂಡಿ, ಕುಡಿಯುವ ನೀರು ಹಾಗೂ ಸಮುದಾಯ ಭವನಗಳ ನಿರ್ಮಾಣಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದ್ದು, ಪ್ರತಿಯೊಂದು ಹಳ್ಳಿಯ ಸಮಗ್ರ ಅಭಿವೃದ್ಧಿಗೆ ನಿರಂತರ ಶ್ರಮಿಸಲಾಗುವುದು ಎಂದು ಭರವಸೆ ನೀಡಿದರು.

ಈ ವೇಳೆ ತಮ್ಮ ತಂದೆ, ದಿವಂಗತ ಮಾಜಿ ಸಚಿವ ವೆಂಕಟರಮಣಪ್ಪ ಅವರನ್ನು ಸ್ಮರಿಸಿದ ಶಾಸಕ ವೆಂಕಟೇಶ್, ಯಾವುದೇ ಜಾತಿ, ಧರ್ಮ ಅಥವಾ ರಾಜಕೀಯ ಭೇದಭಾವವಿಲ್ಲದೆ ಎಲ್ಲ ವರ್ಗದ ಜನರನ್ನು ಗೌರವಿಸುವುದು ತಮ್ಮ ಕುಟುಂಬದ ಪರಂಪರೆಯಾಗಿದೆ ಎಂದರು. ತಂದೆಯ ಮಾರ್ಗದರ್ಶನದಲ್ಲಿಯೇ ರಾಜಕೀಯ ಜೀವನ ಸಾಗಿಸುತ್ತಿದ್ದು, ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ವಿಶ್ವಾಸ ಉಳಿಸಿಕೊಂಡು ತಾಲ್ಲೂಕಿನ ಪ್ರಗತಿಗೆ ನಿರಂತರವಾಗಿ ದುಡಿಯುವುದಾಗಿ ಹೇಳಿದರು.



ಗ್ರಾಮೀಣ ಭಾಗದ ಬಡ, ರೈತ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ಕಡಿಮೆ ವೆಚ್ಚದಲ್ಲಿ ಸಾಮಾಜಿಕ ಕಾರ್ಯಕ್ರಮಗಳು ನಡೆಯುವಂತಾಗಲು ಸಮುದಾಯ ಭವನಗಳ ನಿರ್ಮಾಣ ಅಗತ್ಯವಾಗಿದೆ ಎಂದು ತಿಳಿಸಿದ ಅವರು, ಪಳವಳ್ಳಿ ಕೆರೆಕಟ್ಟೆ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ರೂ.15 ಲಕ್ಷ ವೆಚ್ಚದ ನೂತನ ಸಮುದಾಯ ಭವನ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ಯಾದವ ಸಮುದಾಯವು ಹಲವು ದಶಕಗಳಿಂದ ತಮ್ಮ ಕುಟುಂಬದ ಮೇಲೆ ಇಟ್ಟಿರುವ ವಿಶ್ವಾಸವನ್ನು ಸ್ಮರಿಸಿದ ಅವರು, ಗೊಲ್ಲರಹಟ್ಟಿಗಳ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಲಾಗುತ್ತಿದೆ ಎಂದರು. ಇದರ ಭಾಗವಾಗಿ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದ ಬಳಿ ರೂ.10 ಲಕ್ಷ ಹಾಗೂ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ರೂ.11 ಲಕ್ಷ ವೆಚ್ಚದ ಸಮುದಾಯ ಭವನ ಕಾಮಗಾರಿಗಳಿಗೆ ಚಾಲನೆ ನೀಡಲಾಯಿತು. ಜೊತೆಗೆ ಬಾಬಯ್ಯನ ಗುಡಿ ಜೀರ್ಣೋದ್ಧಾರಕ್ಕೆ ರೂ.5 ಲಕ್ಷ ನೆರವು ಘೋಷಿಸಿದರು.

ಮರಿದಾಸನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಕಟ್ಟಡ ಆವರಣ ಅಭಿವೃದ್ಧಿಗೆ ರೂ.25 ಲಕ್ಷ ಮಂಜೂರು ಮಾಡಲಾಗಿದ್ದು, ಗುಡಿಕಲ್ಲು ಗೋವಿಂದಪ್ಪಸ್ವಾಮಿ ಆಶ್ರಮದ ಬಳಿ ರೂ.15 ಲಕ್ಷ ವೆಚ್ಚದ ಸಮುದಾಯ ಭವನ ನಿರ್ಮಾಣಕ್ಕೂ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು.

ಲಂಬಾಣಿ ಸಮುದಾಯದ ತಾಂಡಾಗಳ ಅಭಿವೃದ್ಧಿ ತಮ್ಮ ಬಹುದೊಡ್ಡ ಕನಸಾಗಿದೆ ಎಂದು ಹೇಳಿದ ಶಾಸಕ ವೆಂಕಟೇಶ್, ಸ್ವಚ್ಛತೆ, ರಸ್ತೆ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಲಾಗುತ್ತಿದೆ ಎಂದರು. ಇದರ ಅಂಗವಾಗಿ ವೈ.ಎನ್. ಹೊಸಕೋಟೆ ಮೇಗಳಪಾಳ್ಯ ಗ್ರಾಮದಲ್ಲಿ ರೂ.1 ಕೋಟಿ ವೆಚ್ಚದ ಸಿಸಿ ರಸ್ತೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿರುವುದಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಮುಖಂಡರಾದ ಆಂಜನೇಯಲು, ದಿನೇಶ್, ಹರುಷ, ತಿಮ್ಮ ನಾಯ್ಡು, ತಿಮ್ಮಯ್ಯ, ಮುತ್ಯಾಲಪ್ಪ, ಅಂಜನಪ್ಪ, ತಾಳೆಮರದಹಳ್ಳಿ ಮೂರ್ತಿ, ಅಶ್ವಿನಿ ಮಹೇಶ್, ಪೊಲೀಸ್ ರಾಮಾಂಜಿ, ಅಂಜಿಕುಮಾರ್, ಈರಣ್ಣ, ರಾಜಣ್ಣ, ಗಂಗಾಧರ, ಹನುಮಂತರಾಯ, ಬೊಮ್ಮಯ್ಯ, ರಘು, ಸರ್ವೇಂದ್ರ, ಸಿಂಗರೆಡ್ಡಿಹಳ್ಳಿ ತಿಪ್ಪೇಸ್ವಾಮಿ, ಬಾಬುರೆಡ್ಡಿ, ಕೊಂಡಾರೆಡ್ಡಿ, ಜಯರಾಮರೆಡ್ಡಿ, ರಾಮಚಂದ್ರ, ಹರೀಶ್ ಸೇರಿದಂತೆ

## 254 ಕೆ.ಜಿ. ಗಂಧದ ಮರ ವಶ

ದೊಡ್ಡಬಳ್ಳಾಪುರ

ನಗರದ ವ್ಯಾಪ್ತಿಯಲ್ಲಿ ನಡೆದಿದ್ದ ಗಂಧದ ಮರ ಕಳ್ಳತನ ಪ್ರಕರಣವನ್ನು ದೊಡ್ಡಬಳ್ಳಾಪುರ ನಗರ ಠಾಣೆ ಪೊಲೀಸರು ಯಶಸ್ವಿಯಾಗಿ ಭೇದಿಸಿದ್ದು, ಇಬ್ಬರು ಆರೋಪಿಗಳನ್ನು ಬಂಧಿಸಿ ರೂ.30 ಲಕ್ಷಕ್ಕೂ ಅಧಿಕ ಮೌಲ್ಯದ 254 ಕೆ.ಜಿ. ಗಂಧದ ಮರದ ತುಂಡುಗಳನ್ನು ವಶಪಡಿಸಿಕೊಂಡಿದ್ದಾರೆ.

ಕಳ್ಳತನ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದ ಪೊಲೀಸರು ತಾಂತ್ರಿಕ ಸಾಕ್ಷ್ಯಗಳು ಹಾಗೂ ಸಿಸಿಟಿವಿ ದೃಶ್ಯಾವಳಿಗಳ ಆಧಾರದ ಮೇಲೆ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಬಂಧಿತರಿಂದ ಕೃತ್ಯಕ್ಕೆ ಬಳಸಲಾಗಿದ್ದ ಪೆಟ್ರೋಲ್ ಚಾಲಿತ ಗರಗಸ ಹಾಗೂ ಒಂದು ಸ್ಯಾಂಟ್ರೋ ಕಾರನ್ನೂ ವಶಕ್ಕೆ ಪಡೆಯಲಾಗಿದೆ.

ಬಂಧಿತ ಆರೋಪಿಗಳನ್ನು ಮೈಸೂರು ಮೂಲದ ವೆಂಕಟೇಶ್ (26) ಹಾಗೂ ತುಮಕೂರು ಮೂಲದ ಅರುಣ್ (34) ಎಂದು ಗುರುತಿಸಲಾಗಿದೆ. ಇಬ್ಬರೂ ದೊಡ್ಡಬಳ್ಳಾಪುರ ತಾಲೂಕಿನ ಕುರುಬರಹಳ್ಳಿ ಗ್ರಾಮದಲ್ಲಿ ಬಾಡಿಗೆ ಮನೆಯಲ್ಲಿ ವಾಸವಾಗಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಗಳು ಸರ್ಕಾರಿ ಶಾಲೆ ಹಾಗೂ ಸ್ಮಶಾನ ಆವರಣಗಳಲ್ಲಿ ಬೆಳೆದಿದ್ದ ಅಮೂಲ್ಯ ಗಂಧದ ಮರಗಳನ್ನು ರಾತ್ರಿ ವೇಳೆ ಕಡಿದು ಕಳವು ಮಾಡುತ್ತಿದ್ದರು ಎಂಬುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಜೂನ್ 13ರ ಮಧ್ಯರಾತ್ರಿ ನಡೆದಿದ್ದ ಕಳ್ಳತನ ಪ್ರಕರಣದ ಕುರಿತು ದೂರು ದಾಖಲಾಗುತ್ತಿದ್ದಂತೆ ತನಿಖೆ ಆರಂಭಿಸಿದ ಪೊಲೀಸರು ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿ ಆರೋಪಿಗಳ ಸುಳಿವು ಪತ್ತೆಹಚ್ಚಿದರು.

ನಂತರ ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ ವೇಳೆ, ಕಳವು ಮಾಡಿದ ಗಂಧದ ಮರದ ತುಂಡುಗಳನ್ನು ಸ್ಯಾಂಟ್ರೋ ಕಾರಿನಲ್ಲಿ ಸಾಗಿಸಿ ವಿವಿಧ ಸ್ಥಳಗಳಲ್ಲಿ ಅಡಗಿಸಿಟ್ಟಿರುವ ವಿಚಾರ ಬಹಿರಂಗವಾಯಿತು. ತಕ್ಷಣ ಕಾರ್ಯಾಚರಣೆ ನಡೆಸಿದ ಪೊಲೀಸರು ಸುಮಾರು 30 ಲಕ್ಷಕ್ಕೂ ಅಧಿಕ ಮೌಲ್ಯದ 254 ಕೆ.ಜಿ. ಗಂಧದ ಮರದ ತುಂಡುಗಳನ್ನು ಜಪ್ತಿ ಮಾಡಿದ್ದಾರೆ.

ಸೂಕ್ಷ್ಮ ತನಿಖೆ, ತಾಂತ್ರಿಕ ಮಾಹಿತಿ ಹಾಗೂ ಸಿಸಿಟಿವಿ ದೃಶ್ಯಾವಳಿಗಳ ನೆರವಿನಿಂದ ಯಶಸ್ವಿ ಕಾರ್ಯಾಚರಣೆ ನಡೆಸಿದ ದೊಡ್ಡಬಳ್ಳಾಪುರ ನಗರ ಠಾಣೆ ಪೊಲೀಸರ ಕಾರ್ಯಕ್ಕೆ ಸಾರ್ವಜನಿಕ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ.

ಪ್ರಕರಣ ಸಂಬಂಧ ದೊಡ್ಡಬಳ್ಳಾಪುರ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಬಂಧಿತ ಆರೋಪಿಗಳು ಇನ್ನೂ ಇತರೆ ಗಂಧದ ಮರ ಕಳ್ಳತನ ಅಥವಾ ಸಂಬಂಧಿತ ಅಪರಾಧಗಳಲ್ಲಿ ಭಾಗಿಯಾಗಿದ್ದಾರೆಯೇ ಎಂಬ ಕುರಿತು ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

# 'ಕುಡಿಯುವ ನೀರಿಗೆ ಸಮಸ್ಯೆಯಿಲ್ಲ'

ಚಿಕ್ಕಬಳ್ಳಾಪುರ

ಜೂನ್ ನಲ್ಲಿ 9.19 ಟಿಎಂಸಿ ಬಿಡಬೇಕು ನಾವು, ಇಲ್ಲಿಯವರೆಗೂ 2 ಟಿಎಂಸಿ ನೀರು ಹರಿಸಿದ್ದೇವೆ. ನಮ್ಮ ಬಳಿ 3 ಟಿಎಂಸಿ ನೀರು ಇದೆ ಅಷ್ಟೇ. ಅಣೆಕಟ್ಟು ಕಟ್ಟಿ ನೀರು ಸಂಗ್ರಹ ಮಾಡಿದರೆ ಅವರಿಗೆ ಅನುಕೂಲ. ಮಳೆ ಬಂದು ಅಣೆಕಟ್ಟುಗಳು ತುಂಬಿದರೆ ಯಾವುದೇ ತೊಂದರೆ ಇರುವುದಿಲ್ಲ. ನೆಲ, ಜಲ, ಭಾಷೆಯ ವಿಚಾರದಲ್ಲಿ ಎಲ್ಲರೂ ಕೂಡ ಒಗ್ಗಟ್ಟಿನಿಂದ ಹೋರಾಡಬೇಕು. ನೀರು ಸಂಗ್ರಹವಾದರೆ ತಮಿಳುನಾಡು ರೈತರಿಗೆ ಉಪಯೋಗವಾಗುತ್ತದೆ. ನ್ಯಾಯಾಲಯಕ್ಕೆ ಹೋಗುವುದಕ್ಕಿಂತ ಕೂತು ಮಾತನಾಡುವುದು ಸೂಕ್ತ. ಕೃಷ್ಣಾ ಮೇಲ್ದಂಡೆ ಯೋಜನೆ 13–14 ವರ್ಷದಿಂದ ಪರಿಹಾರ ಆಗಿಲ್ಲ. ಅದಕ್ಕೆ ಕೂತು ಪರಿಹಾರ ಮಾಡಬೇಕು ಎಂದು ಅಭಿಪ್ರಾಯಪಟ್ಟರು.

ಮೇಕೆದಾಟು ನದಿ ನೀರು ಯೋಜನೆ ವಿರೋಧಿಸಿ ತಮಿಳುನಾಡು ಸರ್ಕಾರ ಸುಪ್ರೀಂಕೋರ್ಟ್‌ನಲ್ಲಿ ಸಲ್ಲಿಸಿದ್ದ ಅರ್ಜಿ ಈಗಾಗಲೇ ತಿರಸ್ಕಾರವಾಗಿದೆ. ಅಲ್ಲದೆ ಪುನರ್ ಪರಿಶೀಲನಾ ಅರ್ಜಿಯನ್ನು ಸಹ ಸುಪ್ರೀಂಕೋರ್ಟ್ ಎರಡು ಬಾರಿ ತಿರಸ್ಕಾರ ಮಾಡಿದೆ. ಕಾನೂನು ಹೋರಾಟದಲ್ಲೂ ಕರ್ನಾಟಕಕ್ಕೆ ನ್ಯಾಯ ಸಿಕ್ಕಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಆದರೂ ಅಲ್ಲಿನ ಮುಖ್ಯಮಂತ್ರಿ ಜೋಸೆಪ್ ವಿಜಯನ್ ಅವರು ಮೇಕೆದಾಟು ಯೋಜನೆ ವಿರೋಧಿಸಿ ಹೋರಾ ಮಾಡಬೇಕೆಂದು ಹೇಳಿದ್ದಾರೆ. ನಮಗೆ ನಿಗದಿಪಡಿಸಿರುವ ನೀರೇ ಸಾಕು. ಇದರಿಂದ ಯಾರಿಗೂ ತೊಂದರೆಯಾಗುವುದಿಲ್ಲ. ಮೇಕೆದಾಟುವಿನಲ್ಲಿ ಅಣೆಕಟ್ಟು ನಿರ್ಮಿಸಿದರೆ ಸಂಕಷ್ಟದ ಸಂದರ್ಭದಲ್ಲಿ ನೀರು ಹರಿಸಬಹುದಲ್ಲವೇ ಎಂದು ಪ್ರಶ್ನೆ ಮಾಡಿದರು.

ಈ ಯೋಜನೆ ಅನುಷ್ಠಾನವಾದರೆ ತಮಿಳುನಾಡು ರೈತರಿಗೂ ಅನುಕೂಲವಾಗುತ್ತದೆ. ವಿರೋಧಿಸಿದರೆ ಅವರಿಗೇ ನಷ್ಟ. ಈಗಾಗಲೇ ವಿಸ್ತೃತ ಯೋಜನಾ ವರದಿ( ಡಿಪಿಆರ್) ತಯಾರಾಗಿದೆ. ತಮಿಳುನಾಡಿಗೆ ನಿಗದಿಪಡಿಸಿರುವ ನೀರಿನಲ್ಲಿ ನಮಗೆ ಒಂದೇ ಒಂದು ಹನಿ ನೀರೂ ಜಾಸ್ತಿ ಬೇಡ ಎಂದು ಕಡ್ಡಿ ಮುರಿದಂತೆ ಹೇಳಿದರು.

ಚುನಾವಣೆ ಆದಮೇಲೆ ವಿರೋಧ ಮರೆತು ಬಿಡಬೇಕು. ನೀರು ಕೊಡುವ ಮತ್ತು ತೆಗೆದುಕೊಳ್ಳುವ ವಿಚಾರದಲ್ಲಿ ಎಲ್ಲರೂ ಒಟ್ಟಿಗೆ ಕೆಲಸ ಮಾಡಬೇಕು.

ಇದೇ ವಿಚಾರವಾಗಿ ಮೊನ್ನೆ ಕೇಂದ್ರ ಸಚಿವರನ್ನು ಭೇಟಿ ಮಾಡಿ ಚರ್ಚೆ ನಡೆಸಲಾಗಿದೆ. ಮಹದಾಯಿ ವಿಚಾರ, ಮೇಕೆದಾಟು ವಿಚಾರ ಸೇರಿದಂತೆ ಬಾಕಿ ಇರುವ ನೀರಾವರಿ ಯೋಜನೆ ಬಗ್ಗೆ ಮನವರಿಕೆ ಮಾಡಿಕೊಟ್ಟಿದ್ದೇವೆ.

ತಮಿಳುನಾಡಿನ ಮುಖ್ಯಮಂತ್ರಿ ಹಾಗೂ ನಮ್ಮನ್ನೂ ಕರೆಸಿ ಮಾತನಾಡಿ ಎಂದು ಮನವಿ ಮಾಡಿದ್ದೇವೆ ಎಂದು ರಾಮಲಿಂಗಾರಡ್ಡಿ ಅವರು ಹೇಳಿದರು.

## ಪ್ರಜಾಸೇವಾ ಇಲಾಖೆ ಸ್ಥಾಪನೆ

ಚಿಕ್ಕಬಳ್ಳಾಪುರ

ಇದರ ಕಾಲಾವಕಾಶವನ್ನು 31.10.2026 ರವರೆಗೆ ವಿಸ್ತರಿಸಲು ಅನುಮತಿ ನೀಡಲಾಗಿದೆ" ಎಂದು ಹೇಳಿದರು.

"ಒಂದಷ್ಟು ಕ್ಯಾಬಿನೆಟ್ ಉಪ ಸಮಿತಿಗಳ ಜವಾಬ್ದಾರಿ ಮುಖ್ಯಮಂತ್ರಿಗೆ ನೀಡಲಾಗಿದೆ. ಕುಡಿಯುವ ನೀರಿನ ವಿಚಾರವಾಗಿ ಸಚಿವಸಂಪುಟ ವಿಸ್ತರಣೆಯಾದ ತಕ್ಷಣ ಜವಾಬ್ದಾರಿ ನೀಡಲಾಗುವುದು. ಪ್ರಸ್ತುತ ಈಗ ಇರುವವರೇ ನೀರಿನ ಸಮಸ್ಯೆ ಬರದಂತೆ ನಿಗಾವಹಿಸಬೇಕು ಎಂದು ತಿಳಿಸಲಾಗಿದೆ" ಎಂದು ಹೇಳಿದರು.

ನೂತನ ಸಚಿವಾಲಯದ ಮೂಲಕ ಎಲ್ಲಾ ಇಲಾಖೆಗಳ ಸಮನ್ವಯತೆಗೆ ಯಾವ ಕ್ರಮ ಕೈಗೊಳ್ಳುವಿರಿ ಎಂದು ಕೇಳಿದಾಗ, "ನಮಗೆ ಜನರ ಹಿತ ಮುಖ್ಯ. ಇಲ್ಲಿ ಯಾರೂ ಸಹ ಸರ್ವಜ್ಞರಲ್ಲ. ಸಕಾಲ, ಇ– ಆಡಳಿತ ಸೇರಿದಂತೆ ಎಲ್ಲವನ್ನು ಬಳಸಿ ಜನರ ಸಮಸ್ಯೆ ನಿವಾರಿಸಲಾಗುವುದು. ಮಾಧ್ಯಮದಲ್ಲಿ ಬಂದಂತಹ ವಿಚಾರಗಳನ್ನು ತಿಳಿದು ನಾವೂ ಕ್ರಮ ತೆಗೆದುಕೊಳ್ಳುತ್ತಿದ್ದೇವೆ. ಮಾಧ್ಯಮಗಳ ಗಮನಕ್ಕೆ ಬಂದಿದ್ದನ್ನು ಸರ್ಕಾರದ ಗಮನಕ್ಕೆ ತರಬೇಕು.

# ಯಶಸ್ವಿಯಾಗಿ ನಡೆದ ನೀಟ್ ಪರೀಕ್ಷೆ

ಚಿಕ್ಕಬಳ್ಳಾಪುರ

ಜೂನ್ 21ರಂದು ನಡೆಯಲಿರುವ ನೀಟ್ ಮರುಪರೀಕ್ಷೆಯನ್ನು ಯಾವುದೇ ಲೋಪದೋಷಗಳಿಲ್ಲದೆ, ಪಾರದರ್ಶಕ ಹಾಗೂ ಸುಸೂತ್ರವಾಗಿ ನಡೆಸಲು ಜಿಲ್ಲಾಡಳಿತ ಎಲ್ಲಾ ಅಗತ್ಯ ಸಿದ್ಧತೆಗಳನ್ನು ಪೂರ್ಣಗೊಳಿಸಿದೆ ಎಂದು ಜಿಲ್ಲಾಧಿಕಾರಿ ಜಿ. ಪ್ರಭು ತಿಳಿಸಿದ್ದಾರೆ.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ನೀಟ್ ಪರೀಕ್ಷೆಯ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಒಟ್ಟು 10 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಅವುಗಳಲ್ಲಿ 6 ಕೇಂದ್ರಗಳು ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿ ಹಾಗೂ 4 ಕೇಂದ್ರಗಳು ಚಿಂತಾಮಣಿ ತಾಲ್ಲೂಕಿನಲ್ಲಿ ಇರಲಿವೆ ಎಂದು ಮಾಹಿತಿ ನೀಡಿದರು.

ಈ ಬಾರಿ ಜಿಲ್ಲೆಯಲ್ಲಿ ಒಟ್ಟು 3,568 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದಾರೆ ಎಂದು ಅವರು ತಿಳಿಸಿದರು. ಪರೀಕ್ಷೆ ಮಧ್ಯಾಹ್ನ 2 ಗಂಟೆಗೆ ಆರಂಭವಾಗಲಿದ್ದು, ವಿದ್ಯಾರ್ಥಿಗಳು ಬೆಳಗ್ಗೆ 11 ಗಂಟೆಗೇ ಪರೀಕ್ಷಾ ಕೇಂದ್ರಗಳಿಗೆ ಆಗಮಿಸಿ ಅಗತ್ಯ ತಪಾಸಣೆಗಳನ್ನು ಪೂರ್ಣಗೊಳಿಸಿ ತಮ್ಮ ಕೊಠಡಿಗಳಿಗೆ ತೆರಳಬೇಕಾಗಿದೆ ಎಂದು ಸೂಚನೆ ನೀಡಿದರು.

ಪರೀಕ್ಷಾ ಪ್ರಕ್ರಿಯೆ ಸುಗಮವಾಗಿ ನಡೆಯಲು ಎಲ್ಲಾ ಕೇಂದ್ರಗಳಿಗೆ ಕೈಗಾರಿಕಾ ಭದ್ರತಾ ಪಡೆ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದ ಜಿಲ್ಲಾಧಿಕಾರಿ, ಪ್ರತಿ ಪರೀಕ್ಷಾ ಕೇಂದ್ರಕ್ಕೆ ಹಾಗೂ ಪ್ರಶ್ನೆಪತ್ರಿಕೆ ಸಾಗಿಸುವ ವಾಹನಗಳಿಗೆ ತಹಸೀಲ್ದಾರ್ ಮತ್ತು ಬಿಇಒ ಅಧಿಕಾರಿಗಳನ್ನು



ಮೇಲುಸ್ತುವಾರಿ ಅಧಿಕಾರಿಗಳಾಗಿ ನೇಮಿಸಲಾಗಿದೆ ಎಂದರು. ಪ್ರಶ್ನೆಪತ್ರಿಕೆಗಳನ್ನು ಪೊಲೀಸರು ಮತ್ತು ಕೈಗಾರಿಕಾ ಭದ್ರತಾ ಪಡೆ ಭದ್ರತೆಯಲ್ಲಿ ಕೇಂದ್ರಗಳಿಗೆ ತಲುಪಿಸಲಾಗುವುದು ಎಂದು ಹೇಳಿದರು.

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಮಾರ್ಗಸೂಚಿಗಳ ಪ್ರಕಾರ, ವಿದ್ಯಾರ್ಥಿಗಳು ಯಾವುದೇ ರೀತಿಯ ಲೇಖನ ಸಾಮಗ್ರಿ, ಮೊಬೈಲ್ ಫೋನ್, ಸ್ಮಾರ್ಟ್ ವಾಚ್, ಬ್ಲೂಟೂತ್ ಇಯರ್‌ಫೋನ್, ಪೇಜರ್, ಹೆಲ್ತ್ ಬ್ಯಾಂಡ್, ಬೆಲ್ಟ್, ವ್ಯಾಲೆಟ್, ಗಾಗಲ್ಸ್, ಹ್ಯಾಂಡ್ ಬ್ಯಾಗ್, ಕ್ಯಾಪ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಸಾಧನಗಳನ್ನು ಪರೀಕ್ಷಾ ಕೇಂದ್ರಕ್ಕೆ ತರಲು ಸಂಪೂರ್ಣ ನಿಷೇಧಿಸಲಾಗಿದೆ ಎಂದು ಸ್ಪಷ್ಟಪಡಿಸಿದರು. ವಸ್ತ್ರ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸಬೇಕಾಗಿದ್ದು, ಯಾವುದೇ ಗೊಂದಲಕ್ಕೆ ಅವಕಾಶ ನೀಡಬಾರದು ಎಂದು ಅವರು ಹೇಳಿದರು.

ಪರೀಕ್ಷಾ ಕೇಂದ್ರದ ಒಳಗೆ ಯಾವುದೇ ರೀತಿಯ ಆಹಾರ ಪದಾರ್ಥಗಳನ್ನು ತರಲು ಅವಕಾಶವಿಲ್ಲ. ಆದರೆ ಪಾರದರ್ಶಕ ನೀರಿನ ಬಾಟಲ್ ಮಾತ್ರ ತರಲು ಅನುಮತಿ ನೀಡಲಾಗಿದೆ ಎಂದು ತಿಳಿಸಿದರು. ವಿದ್ಯಾರ್ಥಿಗಳಿಗೆ ಪರೀಕ್ಷಾ ಕೇಂದ್ರದಲ್ಲೇ ಪೆನ್ನುಗಳನ್ನು ಒದಗಿಸಲಾಗುವುದು, ಆದ್ದರಿಂದ ಹೊರಗಿನಿಂದ ಪೆನ್ ತರಬೇಕಾಗಿಲ್ಲ ಎಂದು ಹೇಳಿದರು. ಈ ಬಾರಿ ವಿದ್ಯಾರ್ಥಿಗಳಿಗೆ ಹೆಚ್ಚುವರಿಯಾಗಿ 15 ನಿಮಿಷಗಳ ಪರೀಕ್ಷಾ ಸಮಯ ನೀಡಲಾಗುತ್ತಿದೆ ಎಂದು ತಿಳಿಸಿದ ಅವರು, ಪ್ರತಿ ವಿದ್ಯಾರ್ಥಿಯು ಕಡ್ಡಾಯವಾಗಿ ಪೋಸ್ಟ್ ಅಳತೆಯ ಒಂದು ಫೋಟೋ ಹಾಗೂ ಪ್ರವೇಶ ಪತ್ರದಲ್ಲಿ ನೀಡಿರುವ ಎಲ್ಲಾ ಸೂಚನೆಗಳನ್ನು ತಪ್ಪದೇ ಪಾಲಿಸಬೇಕು ಎಂದು ಸೂಚಿಸಿದರು.

ಪ್ರತಿ ಪರೀಕ್ಷಾ ಕೊಠಡಿಯಲ್ಲಿ ಗೋಡೆ ಗಡಿಯಾರಗಳನ್ನು ಅಳವಡಿಸಲಾಗಿದ್ದು, ವಿದ್ಯಾರ್ಥಿಗಳು ಕೈಗಡಿಯಾರ ತರುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸ್ಪಷ್ಟಪಡಿಸಿದರು. ಪೋಷಕರು ತಮ್ಮ ಮಕ್ಕಳಿಗೆ ಎಲ್ಲಾ ಮಾರ್ಗಸೂಚಿಗಳನ್ನು ಸರಿಯಾಗಿ ಪಾಲಿಸಲು ಸಹಕರಿಸಬೇಕು ಎಂದು ಅವರು ಮನವಿ ಮಾಡಿದರು.

ಪರೀಕ್ಷೆಯನ್ನು ಅತ್ಯಂತ ಪಾರದರ್ಶಕವಾಗಿ ಮತ್ತು ಶಾಂತಿಯುತವಾಗಿ ನಡೆಸಲು ಒಟ್ಟು 20 ಮಂದಿ ಕೈಗಾರಿಕಾ ಭದ್ರತಾ ಪಡೆ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ ಎಂದು ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಅಪರ ಜಿಲ್ಲಾಧಿಕಾರಿ ಡಾ. ಎನ್. ಭಾಸ್ಕರ್, ಉಪವಿಭಾಗಾಧಿಕಾರಿ ಡಿ. ಹೆಚ್. ಅಶ್ವಿನ್, ನೀಟ್ ಪರೀಕ್ಷೆಯ ಜಿಲ್ಲಾ ನೋಡಲ್ ಅಧಿಕಾರಿ ಮುನಿರಾಜು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಪರೀಕ್ಷಾ ಕರ್ತವ್ಯಕ್ಕೆ ನಿಯೋಜಿತ ಪ್ರಾಂಶುಪಾಲರು ಮತ್ತು

## ಆರು ಕಡೆ ಇಡಿ ದಾಳಿ

ಚಿಕ್ಕಬಳ್ಳಾಪುರ

ಮೆಸರ್ಸ್ ಅಭಿಭಾ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್ ಕಂಪನಿಗಳಿಗೆ ಸೇರಿದ ಕಚೇರಿಗಳ ಮೇಲೆ ದಾಳಿ ಮಾಡಲಾಗಿತ್ತು. ಬೆಂಗಳೂರು ಮೂಲದ ಈ ಕಂಪನಿಗಳು ಡಿಜಿಟಲ್ ಸ್ವತ್ತುಗಳ ಮೂಲಕ ಕಾನೂನುಬಾಹಿರವಾಗಿ ವಿದೇಶಗಳಿಗೆ ಹಣ ವರ್ಗಾವಣೆ ಮಾಡಲು ನೆರವಾಗಿವೆ ಎಂಬ ಗಂಭೀರ ಆರೋಪಗಳ ಆಧಾರದ ಮೇಲೆ ಈ ಶೋಧ ಕಾರ್ಯ ನಡೆಸಲಾಗಿತ್ತು.

ದಾಳಿಯ ಸಂದರ್ಭದಲ್ಲಿ, ಈ ಅಕ್ರಮ ವಹಿವಾಟುಗಳಿಗೆ ಬಳಸಲಾದ ಕೆಲವು ಸಂಸ್ಥೆಗಳ ಬ್ಯಾಂಕ್ ಖಾತೆಗಳ ಮೇಲೆ ಇಡಿ ತಡೆಯಾಜ್ಞೆ ಹೊರಡಿಸಿದೆ.

ಪ್ರಸ್ತುತ ಈ ಖಾತೆಗಳಲ್ಲಿ ಒಟ್ಟು 6 ಕೋಟಿ ರೂ ಬಾಕಿ ಹಣವಿದ್ದು, ಅಗತ್ಯ ಅನುಮತಿಗಳಿಲ್ಲದೆ ಫೆಮಾ ನಿಯಮಗಳನ್ನು ಉಲ್ಲಂಘಿಸಿ ವಿದೇಶಕ್ಕೆ ಹಣ ರವಾನಿಸಲು ಈ ಖಾತೆಗಳನ್ನು ಬಳಸಲಾಗಿದೆ ಎಂದು ಅಧಿಕಾರಿಗಳು ಶಂಕಿಸಿದ್ದಾರೆ.

# ಶಾಲಾ, ಕಾಲೇಜುಗಳ ವಾಹನಗಳು ಜಾಗ್ರತೆಯಿಂದ ಚಾಲನೆ ಮಾಡುವಂತೆ ಎಚ್ಚರಿಕೆ

ವಿಜಯಪುರ

ಶಾಲಾ, ಕಾಲೇಜುಗಳು ಆರಂಭವಾಗಿದ್ದು, ರಸ್ತೆಗಳಲ್ಲಿ ವಾಹನಗಳು ಚಾಲನೆ ಮಾಡುವ ಸವಾರರು, ಹಾಗೂ ಶಾಲಾ ಕಾಲೇಜುಗಳ ಬಳಿಯಲ್ಲಿ ವಾಹನಗಳು ಚಾಲನೆ ಮಾಡುವ ಚಾಲಕರು ಎಚ್ಚರ ವಹಿಸಬೇಕು ಎಂದು ಪೊಲೀಸ್ ಇನ್ ಸ್ಪೆಕ್ಟರ್ ಲಕ್ಷ್ಮೀನಾರಾಯಣ ಹೇಳಿದರು.

ಈ ಕುರಿತು, ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಲಾ ವಾಹನಗಳನ್ನು ಚಾಲನೆ ಮಾಡುವ ಚಾಲಕರು ಸಹಾ ಮಕ್ಕಳಿರುವ ವಾಹನಗಳನ್ನು ಎಚ್ಚರಿಕೆಯಿಂದ ಚಾಲನೆ ಮಾಡಬೇಕು. ವಾಹನಗಳು ಚಾಲನೆ ಮಾಡುವಾಗ ರಸ್ತೆಗಳಲ್ಲಿ ಓಡಾಡುವ ವಿದ್ಯಾರ್ಥಿಗಳನ್ನು ಕಂಡಾಗ ವೇಗವನ್ನು ಕಡಿಮೆ ಮಾಡಿ, ಅವರು,ಸುರಕ್ಷಿತವಾಗಿ ರಸ್ತೆ ದಾಟುವಂತೆ ಅನುವು ಮಾಡಿಕೊಡಬೇಕು. ಮಕ್ಕಳು, ಸಮವಸ್ತ್ರದೊಂದಿಗೆ ಶಾಲೆಗೆ ಹೋಗುವಾಗ ಅವರ ಮೈ ಮೇಲೆ ಕೆಸರು ಹಾರದಂತೆ ನೋಡಿಕೊಳ್ಳಬೇಕು. ಮಕ್ಕಳಿಗೆ ಟ್ರಾಫಿಕ್ ನಿಯಮಗಳ ಬಗ್ಗೆ ಅರಿವಿಲ್ಲದ ಕಾರಣ, ಅವರು ಸಿಗ್ನಲ್ ಗಳ ಬಳಿಯೂ ರಸ್ತೆ ದಾಟುತ್ತಿರಬಹುದು. ವಾಹನಗಳನ್ನು ಎಚ್ಚರಿಕೆಯಿಂದ ಚಾಲನೆ ಮಾಡುವಂತೆ ಅವರು ಎಚ್ಚರಿಕೆ ನೀಡಿದರು.

ದಾಖಲೆಗಳನ್ನು ಇಟ್ಟುಕೊಂಡಿರಬೇಕು: ಶಾಲಾ ವಾಹನಗಳಿಗೆ ಸಂಬಂಧಪಟ್ಟಂತಹ ಎಲ್ಲಾ ದಾಖಲೆಗಳನ್ನು ವಾಹನಗಳಲ್ಲಿ ಇಟ್ಟುಕೊಂಡಿರಬೇಕು. ಚಾಲಕರು ಕಡ್ಡಾಯವಾಗಿ ಸಮವಸ್ತ್ರ ಧರಿಸಿಕೊಂಡು ವಾಹನಗಳು ಚಾಲನೆ ಮಾಡಬೇಕು. ಮಕ್ಕಳನ್ನು ಹತ್ತಿಸಿಕೊಂಡ ನಂತರ, ಕಡ್ಡಾಯವಾಗಿ ಬಾಗಿಲನ್ನು ಬಂದ್ ಮಾಡಿಕೊಂಡು ಹೋಗಬೇಕು. ಮಕ್ಕಳು ಇಳಿದು ಹೋಗಿರುವುದನ್ನು ಖಚಿತಪಡಿಸಿಕೊಂಡ ನಂತರವೇ ವಾಹನಗಳ ಚಾಲನೆ ಆರಂಭ ಮಾಡಬೇಕು. ಮಿತವಾದ ವೇಗದಲ್ಲಿ ಚಾಲನೆ ಮಾಡಬೇಕು. ಮಕ್ಕಳ ಸಹಾಯವಾಣಿ ಸಂಖ್ಯೆ ಹಾಗೂ ಚಾಲಕರಿಗೆ ಸಂಬಂಧಿಸಿದ ಸಂಪೂರ್ಣ ವಿವರಗಳನ್ನು ವಾಹನಗಳಲ್ಲಿ ಅಳವಡಿಸಿರಬೇಕು ಎಂದರು.

# ವಿದ್ಯುತ್ ವ್ಯತ್ಯಯ

ವಿಜಯಪುರ

ಜೂ.21 ರಂದು 66/11 ಕೆ.ವಿ. ವಿದ್ಯುತ್ ಸ್ವೀಕರಣಾ ಕೇಂದ್ರದಲ್ಲಿ, ಪರಿವರ್ತಕಗಳ ಮತ್ತು 66 ಕೆ.ವಿ. ವಿದ್ಯುತ್ ಮಾರ್ಗಗಳ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಕ.ವಿ.ಪ್ರ.ನಿ.ನಿ ವಿಭಾಗದವರು ಕೈಗೊಂಡಿರುವ ಕಾರಣದಿಂದ ಬೆಳಗ್ಗೆ 10 :00 ರಿಂದ ಸಂಜೆ 5 :30 ಗಂಟೆಗಳವರೆಗೆ, ಉಪಕೇಂದ್ರಗಳಿಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ಇಲಾಖೆಯ ಎಇಇ ಲಕ್ಷ್ಮೀಕಾಂತ್ ತಿಳಿಸಿದ್ದಾರೆ.

66/11 ಕೆ.ವಿ. ಚನ್ನರಾಯಪಟ್ಟಣ ವಿದ್ಯುತ್ ಉಪಕೇಂದ್ರದಿಂದ: ಚನ್ನರಾಯಪಟ್ಟಣ, ಪೋಲನಹಳ್ಳಿ, ಚನ್ನಹಳ್ಳಿ, ರಾಯಸಂದ್ರ, ಬೂದಿಯಾಳ, ಹಗಲಕೋಟೆ, ಐಬಸಾಪುರ, ಪಾಪನಹಳ್ಳಿ, ಗೋಪಸಂದ್ರ, ಧರ್ಮಪುರ, ಗೆಜ್ಜಿಕುಪ್ಪೆ, ದಿನ್ನೂರು, ಇರಗೇನಹಳ್ಳಿ ನಾಗನಾಯಕನಹಳ್ಳಿ, ಟಿ. ಅಗ್ರಹಾರ ಮತ್ತು ಚನ್ನರಾಯಪಟ್ಟಣ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಸುತ್ತ ಮುತ್ತಲ ಹಳ್ಳಿಗಳಿಗೆ ವಿದ್ಯುತ್ ಸಂಪರ್ಕವಿರುವುದಿಲ್ಲ, ಜೂನ್.22 ರಂದು 66 ಕೆ.ವಿ. ವಿಜಯಪುರ ವಿದ್ಯುತ್ ವಿತರಣಾ ಕೇಂದ್ರದಲ್ಲಿ, ಪರಿವರ್ತಕಗಳ ಮತ್ತು 66 ಕೆ.ವಿ. ವಿದ್ಯುತ್ ಮಾರ್ಗಗಳ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಕ.ವಿ.ಪ್ರ.ನಿ.ನಿ ವಿಭಾಗದವರು ಬೆಳಗ್ಗೆ 10 :00 ರಿಂದ ಸಂಜೆ 5 :30 ಗಂಟೆಗಳವರೆಗೆ ಕೈಗೊಂಡಿರುವ ಕಾರಣದಿಂದ, ವಿಜಯಪುರಪಟ್ಟಣ, ಯಲುವಹಳ್ಳಿ, ಧರ್ಮಪುರ, ಬೀಡಿಗಾನಹಳ್ಳಿ, ಬಳುವನಹಳ್ಳಿ, ವೆಂಕಟಗಿರಿಕೋಟೆ, ಹುರುಳುಗುರ್ಕಿ ಮುದುಗುರ್ಕಿ, ಬಿಜ್ಜವಾರ, ಹಾರೋಹಳ್ಳಿ, ದಂಡಿಗಾನಹಳ್ಳಿ, ಕೊಮ್ಮಸಂದ್ರ, ತಿಮ್ಮಳ್ಳಿ, ಮುದ್ದೇನಹಳ್ಳಿ, ಚಿಕ್ಕನಹಳ್ಳಿ, ಗೊಲ್ಲಹಳ್ಳಿ, ನಾರಾಯಣಪುರ, ಗೊಡ್ಲುಮುದ್ದೇನಹಳ್ಳಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಸುತ್ತಮುತ್ತಲ ಹಳ್ಳಿಗಳಿಗೆ ವಿದ್ಯುತ್ ಸಂಪರ್ಕವಿರುವುದಿಲ್ಲ.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಕಛೇರಿ, ಕುಂದಾಣ ಗ್ರಾಮ ಪಂಚಾಯಿತಿ, ಕೊಯಿರಾ ಗ್ರಾಮ ಪಂಚಾಯ್ತಿ, ಆಲೂರು–ದುದ್ದನಹಳ್ಳಿ, ಜಾಲಿಗೆ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಸುತ್ತ ಮುತ್ತಲ ಹಳ್ಳಿಗಳಿಗೆ ವಿದ್ಯುತ್ ಸಂಪರ್ಕವಿರುವುದಿಲ್ಲ, ಮತ್ತು ಸುತ್ತಮುತ್ತಲ ಪ್ರದೇಶಗಳಿಗೆ ವಿದ್ಯುತ್ ಅಡಚಣೆ ಉಂಟಾಗಲಿದೆ. ಆದುದರಿಂದ ವಿದ್ಯುತ್ ಗ್ರಾಹಕರು ಹಾಗೂ ರೈತರು ಸಹಕರಿಸುವಂತೆ ಅವರು ಮನವಿ ಮಾಡಿದ್ದಾರೆ.

# ಮತದಾನದ ಹಕ್ಕು ಕಾಪಾಡಲು ಕರೆ

ತಿಪಟೂರು

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಜನಸ್ಪಂದನ ಟ್ರಸ್ಟ್ ಹಾಗೂ ಜನಪರ ಸಂಘಟನೆಗಳ ಸಹಯೋಗದಲ್ಲಿ ನಗರದ ರೋಟರಿ ಭವನದಲ್ಲಿ ತರಬೇತಿ ಕಾರ್ಯಾಗಾರ ನಡೆಯಿತು.

ಕಾರ್ಯಾಗಾರದಲ್ಲಿ ಮಾತನಾಡಿದ ಜನಸ್ಪಂದನ ಟ್ರಸ್ಟ್ ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಸಿ.ಬಿ. ಶಶಿಧರ್ (ಟೂಡಾ), ಎಸ್‌ಐಆರ್ ಪ್ರಕ್ರಿಯೆಯ ಬಗ್ಗೆ ಗಂಭೀರ ಆತಂಕ ವ್ಯಕ್ತಪಡಿಸಿದರು. "ಸ್ವಲ್ಪ ಎಚ್ಚರ ತಪ್ಪಿದರೆ ತಾಲೂಕಿನಲ್ಲಿ ಸುಮಾರು 30 ಸಾವಿರಕ್ಕೂ ಹೆಚ್ಚು ಮತದಾರರು ಮತದಾನ ಹಕ್ಕಿನಿಂದ ವಂಚಿತರಾಗುವ ಸಾಧ್ಯತೆ ಇದೆ" ಎಂದು ಅವರು ಹೇಳಿದರು.

ಅವರು ಮಾತನಾಡುತ್ತಾ, ಸಂವಿಧಾನ ನೀಡಿರುವ ಮತದಾನದ ಹಕ್ಕು ಅತ್ಯಂತ ಮಹತ್ವದ್ದಾಗಿದ್ದು, ಅದನ್ನು ಕಾಪಾಡುವುದು ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿ ಎಂದು ಹೇಳಿದರು. "ಮತದಾನದ ಹಕ್ಕು ಉಳಿದರೆ ಮಾತ್ರ ಪ್ರಜಾಪ್ರಭುತ್ವ ಉಳಿಯುತ್ತದೆ" ಎಂದು ಅವರು ಒತ್ತಿ ಹೇಳಿದರು.



ಎಸ್‌ಐಆರ್ ಪ್ರಕ್ರಿಯೆ ಕುರಿತು ಆತಂಕ ವ್ಯಕ್ತಪಡಿಸಿದ ಅವರು, ಮತದಾರರ ಪಟ್ಟಿಯಿಂದ ಅನಗತ್ಯವಾಗಿ ಹೆಸರುಗಳನ್ನು ತೆಗೆದುಹಾಕುವ ಸಾಧ್ಯತೆ ಇದೆ ಎಂಬ ಭೀತಿ ವ್ಯಕ್ತಪಡಿಸಿದರು. ವಿಶೇಷವಾಗಿ ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು ಹಾಗೂ ಮಹಿಳೆಯರು ಹೆಚ್ಚು ಪರಿಣಾಮಕ್ಕೆ ಒಳಗಾಗುವ ಸಾಧ್ಯತೆ ಇದೆ ಎಂದು ಹೇಳಿದರು.

ಈ ಪ್ರಕ್ರಿಯೆಯನ್ನು ರಾಜಕೀಯವಾಗಿ ದುರುಪಯೋಗ ಮಾಡಲಾಗುತ್ತಿದೆ ಎಂಬ ಆರೋಪವೂ ಅವರು ಮಾಡಿದ್ದು, ಚುನಾವಣಾ ವ್ಯವಸ್ಥೆಯ ಪಾರದರ್ಶಕತೆ ಕುರಿತು ಪ್ರಶ್ನೆಗಳನ್ನು ಎತ್ತಿದರು. ಜೊತೆಗೆ ಕೇಂದ್ರ ಚುನಾವಣಾ ಆಯೋಗದ ಕಾರ್ಯವೈಖರಿಯ ಮೇಲೂ ಸಂಶಯ ವ್ಯಕ್ತಪಡಿಸಿದರು.

ಜಾಗೃತ ಕರ್ನಾಟಕದ ಅದಮ್ ಖಾನ್ ಮಾತನಾಡಿ, ಎಸ್‌ಐಆರ್ ಪ್ರಕ್ರಿಯೆಯಿಂದ ಆಗಬಹುದಾದ ಪರಿಣಾಮಗಳನ್ನು ಅಂಕಿ–ಅಂಶಗಳ ಮೂಲಕ ವಿವರಿಸಿದರು. ಚುನಾವಣಾ ಆಯೋಗದ ಕಾರ್ಯವೈಖರಿ ಹಾಗೂ ಅದರ ಮೇಲಿನ ರಾಜಕೀಯ ಪ್ರಭಾವದ ಕುರಿತು ಅವರು ಆತಂಕ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಜೂನ್ 30 ರಿಂದ ಜುಲೈ 29 ರವರೆಗೆ ಬಿಎಲ್‌ಒಗಳು ನೀಡುವ ಎನ್ಯೂಮರೇಶನ್ ಫಾರಂಗಳನ್ನು ಕಡ್ಡಾಯವಾಗಿ ಭರ್ತಿ ಮಾಡಬೇಕು ಎಂದು ತಿಳಿಸಲಾಯಿತು. ಫಾರಂ ಸಲ್ಲಿಸದಿದ್ದರೆ ಮತದಾರರ ಹೆಸರು ಪಟ್ಟಿಯಿಂದ ಕೈಬಿಡಲಾಗುವ ಸಾಧ್ಯತೆ ಇದೆ ಎಂಬ ಮಾಹಿತಿಯನ್ನೂ ನೀಡಲಾಯಿತು.

ಜನಸ್ಪಂದನ ಟ್ರಸ್ಟ್ ವತಿಯಿಂದ ಜಿಲ್ಲೆ ಹಾಗೂ ತಾಲೂಕುಗಳಲ್ಲಿ ಸುಮಾರು 25 ಕಡೆಗಳಲ್ಲಿ ಇಂತಹ ಕಾರ್ಯಾಗಾರಗಳನ್ನು ಆಯೋಜಿಸಿ ಮತದಾರರಿಗೆ ಜಾಗೃತಿ ಮೂಡಿಸುವ ಯೋಜನೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಕಸಾಪ ಅಧ್ಯಕ್ಷ ಬಸವರಾಜು, ನಗರಸಭೆ ಮಾಜಿ ಸದಸ್ಯ ಮಹಮ್ಮದ್ ಗೌಸ್, ಉಜ್ಜಜ್ಜಿ ರಾಜಣ್ಣ, ಸಮಿಉಲ್ಲಾ, ಶ್ರೀಕಾಂತ್ ಕೆಳಹಟ್ಟಿ, ಅಲ್ಲಾ ಬಕಾಶ್, ಕೆ.ಎಂ. ರಾಜಣ್ಣ, ಶಿವಪುರ ಲಿಂಗರಾಜು, ಉಮೇಶ್ ಸೇರಿದಂತೆ ಹಲವಾರು ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# 'ಕೇಂದ್ರ ಸರ್ಕಾರದ ಯೋಜನೆಗಳಿಗೆ ಎಲ್ಲರ ಸಹಕಾರ ಮುಖ್ಯ'

ತುಮಕೂರು

ರೈತರೂ ಸೇರಿದಂತೆ ದೇಶದ ಎಲ್ಲಾ ವರ್ಗದ ಜನರ ಒಳಿತಿಗಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ರೂಪಿಸುವ ಯೋಜನೆಗಳಿಗೆ ಎಲ್ಲರೂ ಕೈಜೋಡಿಸಬೇಕೆಂದು ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ಕರೆ ನೀಡಿದ್ದಾರೆ.

ನಗರದ ಕೇಂದ್ರ ಗ್ರಂಥಾಲಯದಲ್ಲಿ ಶನಿವಾರ ಕೃಷಿ ಇಲಾಖೆ ಆಯೋಜಿಸಿದ್ದ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ 23ನೇ ಕಂತಿನ ಆರ್ಥಿಕ ನೆರವು ಬಿಡುಗಡೆಗೊಳಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸಾಮಾನ್ಯ ರೈತನೂ ದೇಶದ ಸುಧಾರಿತ ರೈತನಾಗಿ ಬೆಳೆಯಬೇಕು. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಸಾಕಷ್ಟು ಯೋಜನೆಗಳನ್ನು ಜಾರಿಗೆ ತಂದಿದ್ದು, ಈ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಎಲ್ಲವೂ ಕೈಜೋಡಿಸಬೇಕು ಎಂದು ಅವರು ಹೇಳಿದರು.

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯನ್ನು ಫೆಬ್ರವರಿ 19 ರಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ಅರ್ಹ ರೈತ ಕುಟುಂಬಕ್ಕೆ ವಾರ್ಷಿಕ 6,000 ರೂ.ಗಳ ಆರ್ಥಿಕ ನೆರವನ್ನು 3 ಕಂತುಗಳಲ್ಲಿ 4 ತಿಂಗಳಿಗೊಮ್ಮೆ ನೀಡುವ ಯೋಜನೆಯಾಗಿದೆ. ಈ ಯೋಜನೆಯು ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಜಮಾ ಆಗಲಿದ್ದು, ಯಾವುದೇ ಮಧ್ಯವರ್ತಿಯ ಲೇಪವಿಲ್ಲದೆ ನಿಜವಾದ ಫಲಾನುಭವಿಗೆ ಸೇರುವ ಯೋಜನೆಯಾಗಿದೆ ಎಂದರು.

ತುಮಕೂರು ಜಿಲ್ಲೆಯಲ್ಲಿ 22 ಕಂತುಗಳ ಮೂಲಕ ಒಟ್ಟು 2,28,543 ರೈತ ಫಲಾನುಭವಿಗಳಿಗೆ 1136.64 ಕೋಟಿ ರೂ.ಗಳ ಆರ್ಥಿಕ ನೆರವು ನೀಡಲಾಗಿದೆ. 2026–27ನೇ ಸಾಲಿನಲ್ಲಿ ತುಮಕೂರು ಜಿಲ್ಲೆಯ 2,30,941 ಫಲಾನುಭವಿಗಳಿಗೆ ಕೇಂದ್ರ ಸರ್ಕಾರದಿಂದ 23ನೇ ಕಂತಿನ ಮೂಲಕ 46.19ಕೋಟಿ ರೂ.ಗಳ ಆರ್ಥಿಕ ನೆರವು ಒದಗಿಸಲಾಗಿದೆ ಎಂದರು.

ತುಮಕೂರು ಜಿಲ್ಲೆ ಬುದ್ಧಿಜೀವಿಗಳ, ಸಂಸ್ಕಾರವಂತರ ಜಿಲ್ಲೆಯಾಗಿದ್ದು, ಈ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿ ಕೇಂದ್ರ ಸರ್ಕಾರದ ಎಲ್ಲಾ ಯೋಜನೆಗಳನ್ನು ತರಲು ಪ್ರಯತ್ನ ನಡೆಸಲಾಗಿದೆ.



**ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯನ್ನು ಫೆಬ್ರವರಿ 19 ರಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ಅರ್ಹ ರೈತ ಕುಟುಂಬಕ್ಕೆ ವಾರ್ಷಿಕ 6,000 ರೂ.ಗಳ ಆರ್ಥಿಕ ನೆರವನ್ನು 3 ಕಂತುಗಳಲ್ಲಿ 4 ತಿಂಗಳಿಗೊಮ್ಮೆ ನೀಡುವ ಯೋಜನೆಯಾಗಿದೆ. ಈ ಯೋಜನೆಯು ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಜಮಾ ಆಗಲಿದ್ದು, ಯಾವುದೇ ಮಧ್ಯವರ್ತಿಯ ಲೇಪವಿಲ್ಲದೆ ನಿಜವಾದ ಫಲಾನುಭವಿಗೆ ಸೇರುವ ಯೋಜನೆಯಾಗಿದೆ**

ಅಂತೆಯೇ, ತಿಮ್ಮರಾಜನಹಳ್ಳಿಯಲ್ಲಿ ಕಂಟೈನರ್ ಕಾರ್ಪೋರೇಷನ್ ಸ್ಥಾಪಿಸಲು ಉದ್ದೇಶಿಸಲಾಗಿದ್ದು, ಇದಕ್ಕೆ ಅಗತ್ಯವಿರುವ ಎರಡೂವರೆ ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಡುವಂತೆ ಜಿಲ್ಲಾಡಳಿತಕ್ಕೆ ಸಚಿವರು ಸೂಚಿಸಿದರು.

ಈ ಯೋಜನೆಯಿಂದ ರೈತರು ಬೆಳೆದ ಬೆಳೆಗಳನ್ನು ನೇರವಾಗಿ ದೇಶದ ಇತರ ಪ್ರದೇಶಗಳ ಮಾರುಕಟ್ಟೆಗೆ ಸಾಗಿಸಲು ಅನುಕೂಲವಾಗುತ್ತದೆ. ಅಲ್ಲದೆ, ಸುಮಾರು 400ಕ್ಕೂ ಹೆಚ್ಚು ಮಂದಿ ಉದ್ಯೋಗಸ್ಥರಾಗಲಿದ್ದಾರೆ ಎಂದು ಅವರು ತಿಳಿಸಿದರು.

ಪಶ್ಚಿಮ ಬಂಗಾಳದ ಹೂಗ್ಲಿಯಾದ ತಾರಕೇಶ್ವರ್‌ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ 23ನೇ ಕಂತನ್ನು ಬಿಡುಗಡೆಗೊಳಿಸುವ ಕಾರ್ಯಕ್ರಮದಲ್ಲಿ 9.4ಕೋಟಿಗೂ ಹೆಚ್ಚು ಫಲಾನುಭವಿಗಳಿಗೆ 18,800 ಕೋಟಿ ರೂ.ಗಳಿಗೂ ಅಧಿಕ ಮೊತ್ತದ ನೇರ ಹಣ ವರ್ಗಾವಣೆ ಪ್ರಕ್ರಿಯೆಗೆ ಅವರು ಚಾಲನೆ ನೀಡಿದರು.

ತುಮಕೂರಿನ ಕಾರ್ಯಕ್ರಮದಲ್ಲಿ ಶಾಸಕರಾದ ಜಿ.ಬಿ. ಜ್ಯೋತಿಗಣೇಶ್, ಬಿ.ಸುರೇಶ್ ಗೌಡ, ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಲಕ್ಷ್ಮಣ್ ಕಳ್ಳೆಣ್ಣವರ್, ಕೃಷಿ ವಿಜ್ಞಾನ ಕೇಂದ್ರದ ನಿರ್ದೇಶಕ ಲೋಗಾನಾದನ್, ಸೇರಿದಂತೆ ದಿಶಾ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

# ಮುಂಗಾರು ಆರಂಭ

ಮಾಲೂರು

ರೈತರಿಗೆ ರಸಗೊಬ್ಬರ ಕೀಟನಾಶಕ ಕೊರತೆಯಾಗದಂತೆ ಮುನ್ನೆಚ್ಚರಿಕೆ ವಹಿಸಲು ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಕ್ಷೇತ್ರ ಮಟ್ಟದಲ್ಲಿ ಕೃತಕ ಅಭಾವ ತಪ್ಪಿಸಲು ಹೋಬಳಿವಾರು ರೈತ ಸಂಪರ್ಕ ಕೇಂದ್ರಗಳಲ್ಲಿ ಸಹಾಯವಾಣಿ ಆರಂಭಿಸಲಾಗಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಡಿ.ಪಿ.ಚಂದ್ರಪ್ಪ ಹೇಳಿದರು.

ಅವರು ನಗರದ ಕೃಷಿ ಇಲಾಖೆಯ ಕಚೇರಿಯಲ್ಲಿ ಸುದ್ದಿಗಾರರಿಗೆ ಮಾತನಾಡಿದರು. ತಾಲೂಕಿನಲ್ಲಿ ಮುಂಗಾರು ಆರಂಭವಾಗಿದ್ದು ವಾಡಿಕೆ ಮಳೆಗಿಂತ ಕಡಿಮೆ ಮಳೆಯಾಗಿದ್ದು, ರೈತರ ಬಿತ್ತನೆ ಕಾರ್ಯಕ್ಕೆ ರಸಗೊಬ್ಬರ ಕೀಟನಾಶಕಗಳು ಬಿತ್ತನೆ ಬೀಜಗಳ ಕೃತಕ ಅಭಾವ ತಪ್ಪಿಸಲು ಕೃಷಿ ಇಲಾಖೆಯಲ್ಲಿ ಲಭ್ಯವಿರುವ ಬಿತ್ತನೆ ಬೀಜಗಳು ಪೋಷಕಾಂಶ ಗೊಬ್ಬರಗಳು ಪರವಾನಗಿ ಹೊಂದಿರುವ ರಸಗೊಬ್ಬರ ಮಾರಾಟ ಮಳಿಗೆಗಳಲ್ಲಿ ಗೊಬ್ಬರ ಹಾಗೂ ಕೀಟನಾಶಕಗಳು ಬಿತ್ತನೆ ಬೀಜಗಳ ಲಭ್ಯತೆ ಬಗ್ಗೆ ರೈತರಿಗೆ ಮಾಹಿತಿ ಒದಗಿಸಲು ಹೋಬಳಿವಾರು ಸಹಾಯವಾಣಿ ಕೇಂದ್ರಗಳನ್ನು ತೆರೆಯಲಾಗಿದೆ. ರೈತರು ಸಹಾಯವಾಣಿ ಸಂಖ್ಯೆಗಳಿಗೆ ಕರೆ ಮಾಡಿ ಎಲ್ಲೆಲ್ಲಿ ರಸಗೊಬ್ಬರಗಳು ಬಿತ್ತನೆ ಬೀಜಗಳು ಕ್ರಿಮಿನಾಶಕಗಳ ಮಾಹಿತಿಯನ್ನು ಪಡೆಯಬಹುದಾಗಿದೆ.

ಕೃಷಿ ಇಲಾಖೆಯ ಸಹಾಯವಾಣಿ 3277932016 ಕಸಬಾ ಹೋಬಳಿ, 8277932016 ಲಕ್ಕೂರು 8277927117, ಮಾಸ್ತಿ 8884003213, ಟೇಕಲ್ 8277927172 ಹೆಚ್ಚಿನ ಮಾಹಿತಿಗಾಗಿ ಸಹಾಯಕ ಕೃಷಿ ನಿರ್ದೇಶಕರು ಮಾಲೂರು ಕೃಷಿ ಇಲಾಖೆ 8277932056 ಆಯಾ ಕ್ಷೇತ್ರದ ಹೋಬಳಿಗಳ ಸಹಾಯವಾಣಿಗೆ ರೈತರು ಕರೆ ಮಾಡಿ ಮಾಹಿತಿಯನ್ನು ಪಡೆಯಬಹುದಾಗಿದೆ. ರೈತರು ಸಹಾಯವಾಣಿಯ ಸದುಪಯೋಗ ಪಡೆದುಕೊಳ್ಳುವಂತೆ ಹೇಳಿದರು.



ತುಮಕೂರು ಜಿಲ್ಲಾ ಒಕ್ಕಲಿಗರ ಸಂಘದ ಕಾರ್ಯಕಾರಿ ಸಮಿತಿಗೆ ನಡೆದ ಚುನಾವಣೆಯಲ್ಲಿ ತಿಪಟೂರು ತಾಲೂಕು ಮತ ಕ್ಷೇತ್ರದಿಂದ ಮುಂದಿನ ಐದು ವರ್ಷ ಅವಧಿಗೆ ನಗರದ ಕೆ.ಆರ್. ಬಡಾವಣೆಯ ಕೆ.ಆರ್.ಇಂದ್ರಕುಮಾರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಗುಬ್ಬಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀನಿವಾಸ್ ಅಭಿನಂದಿಸಿದರು. ಚುನಾವಣಾಧಿಕಾರಿ ರಾಜೇಶ್ವರಿ ಪ್ರಮಾಣ ಪತ್ರ ವಿತರಿಸಿದರು.

# 'ಯುವಜನರ ಸಬಲೀಕರಣಕ್ಕೆ ಕೇಂದ್ರ ಬದ್ಧ'

ಕೋಲಾರ

ಯುವಜನತೆಗೆ ಕೇವಲ ಉದ್ಯೋಗದ ಆಶ್ವಾಸನೆ ನೀಡದೆ, ಅವರಿಗೆ ಉದ್ಯೋಗದ ಶಕ್ತಿ ತುಂಬುವುದು 'ಪ್ರಧಾನ ಮಂತ್ರಿ ವಿಕಸಿತ ಭಾರತ ರೋಜ್‌ಗಾರ್ ಯೋಜನೆ'ಯ ಮುಖ್ಯ ಉದ್ದೇಶವಾಗಿದೆ ಎಂದು ಕೆ.ಆರ್. ಪುರಂ ಪ್ರಾದೇಶಿಕ ಭವಿಷ್ಯ ನಿಧಿ ಕಚೇರಿಯ ಆಯುಕ್ತ ಮಾರ್ತಾಂಡ್ ಸಿಂಗ್ ಚಂದ್ರಾವಲ್ ತಿಳಿಸಿದರು.

ಭಾರತ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯದ ಇಪಿಎಫ್‌ಒ ಪ್ರಾದೇಶಿಕ ಕಚೇರಿ ಕೆ.ಆರ್. ಪುರಂ ವತಿಯಿಂದ, ಕೋಲಾರ ನಗರದ ಜಿಲ್ಲಾಧಿಕಾರಿಗಳ ಆಡಿಟೋರಿಯಂನಲ್ಲಿ ಶುಕ್ರವಾರ 'ಪ್ರಧಾನ ಮಂತ್ರಿ ವಿಕಸಿತ ಭಾರತ ರೋಜ್‌ಗಾರ್ ಯೋಜನೆ' ಫಲಾನುಭವಿಗಳಿಗೆ ಪ್ರೋತ್ಸಾಹ ಸೌಲಭ್ಯಗಳ ವಿತರಣೆ ಕಾರ್ಯಕ್ರಮದ ನೇರಪ್ರಸಾರ ಏರ್ಪಡಿಸಲಾಗಿತ್ತು.

ಯುವಕರಿಗೆ ಮತ್ತು ಉದ್ಯೋಗದಾತ ಕಂಪನಿಗಳಿಗೆ ಉತ್ತೇಜನ ನೀಡಲು ಕೇಂದ್ರ ಸರ್ಕಾರ ಈ ಮಹತ್ವಾಕಾಂಕ್ಷೆಯ ಯೋಜನೆಯನ್ನು ರೂಪಿಸಿದ್ದು, ಹೊಸದಾಗಿ ಉದ್ಯೋಗ ಪಡೆಯುವ ಯುವಕರಿಗೆ ಆರು ತಿಂಗಳ ಅಂತರದಲ್ಲಿ ಎರಡು ಕಂತುಗಳಲ್ಲಿ ಒಟ್ಟು 15 ಸಾವಿರ ರೂಪಾಯಿ ಪ್ರೋತ್ಸಾಹ ಧನ ನೀಡಲಾಗುತ್ತದೆ. ಹಳ್ಳಿಯಿಂದ ಓದು ಮುಗಿಸಿ ಉದ್ಯೋಗ ಹುಡುಕಿಕೊಂಡು ಮೊದಲ ಬಾರಿಗೆ ಪಟ್ಟಣಗಳಿಗೆ ವಲಸೆ ಹೋಗುವ ಯುವಕರಿಗೆ ಮೊದಲ ತಿಂಗಳ ಖರ್ಚು–ವೆಚ್ಚವನ್ನು ಸರಿದೂಗಿಸಲು ಈ ನೆರವು ನೇರವಾಗಿ ಅವರ ಖಾತೆಗೆ ಜಮೆಯಾಗಲಿದೆ ಎಂದರು.



ಹೊಸ ಉದ್ಯೋಗಿಗಳಿಗೆ ಕೆಲಸ ನೀಡುವ ಕಂಪನಿಗಳಿಗೆ ಎರಡು ವರ್ಷಗಳ ಅವಧಿಗೆ ಪ್ರತಿ ತಿಂಗಳು ಕನಿಷ್ಠ 3 ಸಾವಿರ ರೂಪಾಯಿ ಪ್ರೋತ್ಸಾಹ ಧನವನ್ನು ಸರ್ಕಾರ ನೀಡಲಿದೆ.

ಈ ಯೋಜನೆಗಾಗಿ ಕೇಂದ್ರ ಸರ್ಕಾರ ರೂ.99,446 ಕೋಟಿ ಹಣವನ್ನು ಮೀಸಲಿಟ್ಟಿದ್ದು, 2027ರ ಅಂತ್ಯದ ವೇಳೆಗೆ ದೇಶದಲ್ಲಿ 3.5 ಕೋಟಿ ಹೊಸ ಉದ್ಯೋಗಗಳನ್ನು ಸೃಷ್ಟಿಸುವ ಗುರಿ ಹೊಂದಿದೆ. ಯೋಜನೆ ಆರಂಭವಾದಾಗಿನಿಂದ ಇದುವರೆಗೆ ಸುಮಾರು 15 ಲಕ್ಷ ಉದ್ಯೋಗಗಳನ್ನು ಒದಗಿಸಲಾಗಿದೆ ಎಂದು ಹೇಳಿದರು.

ಜಿಲ್ಲೆಯ ಉದ್ಯಮಿಗಳು, ಸಣ್ಣ ಕೈಗಾರಿಕೆಗಳ ಮಾಲೀಕರು ಮತ್ತು ನವೋದ್ಯಮಿಗಳು ತಮ್ಮ ಉದ್ಯಮಗಳನ್ನು ವಿಸ್ತರಿಸಿ, ಕೋಲಾರ ಜಿಲ್ಲೆಯ ಯುವಕರಿಗೆ ಹೆಚ್ಚಿನ ಉದ್ಯೋಗಾವಕಾಶ ನೀಡಬೇಕು ಎಂದು ಮನವಿ ಮಾಡಿದರು.

ಪಿಎಂ–ವಿಬಿಆರ್‌ವೈ ಅಡಿ ಉದ್ಯೋಗದಾತರು ಮತ್ತು ಉದ್ಯೋಗಿಗಳು ಇಬ್ಬರಿಗೂ ಇನ್ಸೆಂಟಿವ್ ಸಿಗಲಿದೆ. ಉತ್ಪಾದನಾ ವಲಯಗಳಲ್ಲಿ ನುರಿತ ಉದ್ಯೋಗಿಗಳು ದೊರೆತರೆ ಸಂಸ್ಥೆಯ ಉತ್ಪಾದಕತೆ ಹೆಚ್ಚುತ್ತದೆ. ಇದರಿಂದ ದೇಶದ ಆರ್ಥಿಕತೆಯೂ ಬಲಿಷ್ಠಗೊಳ್ಳಲಿದ್ದು, ಎಲ್ಲರೂ ಇದರ ಸದುಪಯೋಗ ಪಡೆಯಬೇಕು ಎಂದು ಅವರು ತಿಳಿಸಿದರು.

ಕಾರ್ಯಕ್ರಮದ ಕೊನೆಯಲ್ಲಿ, ನವದೆಹಲಿಯ ವಿಜ್ಞಾನ ಭವನದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಹೊಸದಾಗಿ ಉದ್ಯೋಗಕ್ಕೆ ಸೇರಿದ ಅರ್ಹ ಉದ್ಯೋಗಿಗಳಿಗೆ ಪ್ರೋತ್ಸಾಹ ಸೌಲಭ್ಯ ವಿತರಣೆ ಮಾಡಿದ ಕಾರ್ಯಕ್ರಮದ ನೇರಪ್ರಸಾರವನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಎಲ್ಲರೂ ವೀಕ್ಷಿಸಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಎಸ್.ಎಂ.ಮಂಗಳಾ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕಿ ಡಾ.ಕೆ. ಎನ್.ಕವನ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾನೂನು ಬದ್ಧ ಪ್ರಕ್ರಿಯೆ ದತ್ತು ಸ್ವೀಕಾರ

ಕೋಲಾರ

ಜಿಲ್ಲೆಯಲ್ಲಿ ಸರ್ಕಾರಿ ವಿಶೇಷ ದತ್ತು ಕೇಂದ್ರದಿಂದ ಇದುವರೆಗೂ 20 ಮಕ್ಕಳನ್ನು ಕಾನೂನಿನ ಪ್ರಕಾರ ದತ್ತು ನೀಡಲಾಗಿದೆ. ಇದರಲ್ಲಿ 19 ಮಕ್ಕಳು ನಮ್ಮ ದೇಶದಲ್ಲಿ ದತ್ತು ಪಡೆದಿದ್ದು, 01 ಮಗುವನ್ನು ಹೊರ ದೇಶದವರು ದತ್ತು ಪಡೆದಿರುತ್ತಾರೆ.

ಪೋಷಕರು ಇಲ್ಲದ ಅನಾಥ, ಪರಿತ್ಯಕ್ತ ಅಥವಾ ಒಪ್ಪಿಸಲ್ಪಟ್ಟ ಮಗುವಿಗೆ ಹೊಸ ಕುಟುಂಬ, ಸುರಕ್ಷತೆ ಮತ್ತು ಪ್ರೀತಿಯನ್ನು ಒದಗಿಸುವ ಒಂದು ಪವಿತ್ರ ಮತ್ತು ಕಾನೂನು ಬದ್ಧ ಪ್ರಕ್ರಿಯೆ ದತ್ತು ಸ್ವೀಕಾರವಾಗಿದೆ. ಈ ಕಾನೂನು ಪ್ರಕ್ರಿಯೆಯನ್ನು ಮೀರಿ ನಿಯಮಗಳನ್ನು ಉಲ್ಲಂಘಿಸಿ ಮಕ್ಕಳನ್ನು ತೆಗೆದುಕೊಳ್ಳುವುದು, ಮಕ್ಕಳನ್ನು ಮಾರಾಟ ಮಾರುವುದು, ಕೊಳ್ಳುವುದು ಅಥವಾ ಕಾನೂನು ಬಾಹಿರ ದತ್ತು ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವುದು ಕಾನೂನು ರೀತ್ಯ ಶಿಕ್ಷಾರ್ಹ ಅಪರಾಧವಾಗಿದ್ದು, ಬಾಲ ನ್ಯಾಯ ಕಾಯ್ದೆ 2015ರ ತಿದ್ದುಪಡಿ ಕಾಯ್ದೆ 2021ರ ಸೆಕ್ಷನ್ 81ರ ಅನ್ವಯ ಮಕ್ಕಳನ್ನು ಮಾರಾಟ ಮಾಡಿದವರಿಗೆ ಹಾಗೂ ಮಕ್ಕಳನ್ನು ಕೊಂಡವರಿಗೆ 5 ವರ್ಷಗಳ ಕಠಿಣ ಸಜೆ ಮತ್ತು 1 ಲಕ್ಷದವರೆಗೆ ದಂಡ ಹಾಗೂ ಆಸ್ಪತ್ರೆ ಸಿಬ್ಬಂದಿ ಇದರಲ್ಲಿ ಭಾಗಿಯಾದಲ್ಲಿ 7 ವರ್ಷಗಳವರೆಗಿನ ಕಠಿಣ ಸಜೆ ಹಾಗೂ 1 ಲಕ್ಷದ ವರೆಗೆ ದಂಡ ವಿಧಿಸಲಾಗುತ್ತದೆ.

ಕಸದ ತೊಟ್ಟಿ, ಆಸ್ಪತ್ರೆ ಆವರಣ, ಶೌಚಾಲಯ, ರಸ್ತೆ ಬದಿ ಹಾಗೂ ಪೊದೆಗಳಲ್ಲಿ ಬೀಸಾಡದೆ ಮಕ್ಕಳ ರಕ್ಷಣೆಗಾಗಿ ಇರುವ ಮಮತೆಯ ತೊಟ್ಟಿಲು, ಸರ್ಕಾರಿ ವಿಶೇಷ ದತ್ತು ಸಂಸ್ಥೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳಲ್ಲಿ ಪೋಷಕರು ಮಕ್ಕಳು ಬೇಡವಾದಲ್ಲಿ ಬಿಡಬಹುದು ಅಥವಾ ಮಕ್ಕಳ ಸಹಾಯವಾಣಿ 1098/112 ಗೆ ಕರೆಮಾಡಿ ಒಪ್ಪಿಸುವುದರ ಮೂಲಕ ಮಗುವನ್ನು ಸರ್ಕಾರದ ವಶಕ್ಕೆ ಪಡೆದು ಮಕ್ಕಳಿಲ್ಲದ ಹೊಸ ಕುಟುಂಬಕ್ಕೆ ಕಾರಾ (CARA) ಮಾರ್ಗಸೂಚಿಗಳನ್ವಯ ನೀಡುವುದರ ಮೂಲಕ ಮಗುವಿಗೆ ಪೋಷಕರು, ಒಂದು ಕುಟುಂಬ ದೊರೆತು, ಪ್ರೀತಿ–ವಾಸಲ್ಯದಿಂದ ಉಜ್ವಲ ಭವಿಷ್ಯ ಕಟ್ಟಿಕೊಳ್ಳಲು ಸಹಾಯವಾಗುತ್ತದೆ.

# 'ಕೆಜಿಎಫ್‌ನಲ್ಲಿ ಸರ್ಕಾರಿ ಜಮೀನು ಒತ್ತುವರಿ'

ಬೇತಮಂಗಲ

ಕೆಜಿಎಫ್ ವಿಧಾನಸಭಾ ಕ್ಷೇತ್ರದಲ್ಲಿ ಸರ್ಕಾರಿ ಜಮೀನು ಒತ್ತುವರಿ ಹಾಗೂ ಅಕ್ರಮ ನಿವೇಶನಗಳ ಸೃಷ್ಟಿ ನಿರಂತರವಾಗಿ ನಡೆಯುತ್ತಿದ್ದು, ಇದರ ಹಿಂದೆ ಕ್ಷೇತ್ರದ ಹಾಲಿ ಶಾಸಕರ ಕುಮ್ಮಕ್ಕು ಇದೆ ಎಂದು ಮಾಜಿ ಶಾಸಕ ವೈ. ಸಂಪಂಗಿ ಗಂಭೀರ ಆರೋಪ ಮಾಡಿದರು.

ಬೇತಮಂಗಲದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾವು ಶಾಸಕರಾಗಿದ್ದ ಅವಧಿಯಲ್ಲಿ ಗ್ರಾಮಸ್ಥರ ಉಪಯೋಗಕ್ಕಾಗಿ ಮೀಸಲಿಟ್ಟಿದ್ದ ಮೂರು ಎಕರೆ ಐದು ಕುಂಟೆ ಜಾಗದಲ್ಲಿ ವಿದ್ಯುತ್ ಉಪಕೇಂದ್ರ ನಿರ್ಮಾಣದ ಬಳಿಕ ಉಳಿದಿದ್ದ ಎರಡು ಎಕರೆ ಐದು ಕುಂಟೆ ಪ್ರದೇಶವನ್ನು ಅಕ್ರಮವಾಗಿ ಕಬಳಿಸಲಾಗಿದೆ ಎಂದು ದೂರಿದರು.

ಗ್ರಾಮಸ್ಥರು ಹಾಗೂ ನಿರಾಶ್ರಿತರಿಗೆ ಮನೆ ನಿರ್ಮಿಸಲು ಬಳಸಬೇಕಿದ್ದ ಜಾಗದಲ್ಲಿ ಒಬ್ಬ ವ್ಯಕ್ತಿ ಹತ್ತು ನಿವೇಶನಗಳನ್ನು ಸೃಷ್ಟಿಸಿಕೊಂಡಿದ್ದು, ಇದಕ್ಕೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಸಹಾಯಕರ ಶಾಮೀಲಾತಿ ಇದೆ ಎಂದು ಆರೋಪಿಸಿದರು. ಈ ಸಂಬಂಧ ನ್ಯಾಯಾಲಯದಲ್ಲಿ ಪ್ರಕರಣ ನಡೆಯುತ್ತಿದ್ದರೂ, ಅಧಿಕಾರಿಗಳು ಉದ್ದೇಶಪೂರ್ವಕವಾಗಿ ವಿಚಾರಣೆಗೆ ಹಾಜರಾಗದೆ ಅಕ್ರಮಕ್ಕೆ ಸಹಕಾರ ನೀಡುತ್ತಿದ್ದಾರೆ ಎಂದು ಟೀಕಿಸಿದರು.



ಅಧಿಕಾರಿಗಳ ಈ ವರ್ತನೆಯ ಹಿಂದೆ ಕ್ಷೇತ್ರದ ಶಾಸಕರ ಬೆಂಬಲವಿದ್ದು, ಅಕ್ರಮಕ್ಕೆ ಅವರೇ ನೇರ ಹೊಣೆ ಎಂದು ಸಂಪಂಗಿ ಆರೋಪಿಸಿದರು. ಕ್ಷೇತ್ರದಲ್ಲಿ ನೂರಾರು ಕೋಟಿ ರೂಪಾಯಿಗಳ ಮೌಲ್ಯದ ಸರ್ಕಾರಿ ಆಸ್ತಿ ಒತ್ತುವರಿ ಆಗಿದ್ದು, ಈ ಕುರಿತು ತಮ್ಮ ಬಳಿ ದಾಖಲೆಗಳಿದ್ದು ಶೀಘ್ರದಲ್ಲೇ ಸಾರ್ವಜನಿಕವಾಗಿ ಬಹಿರಂಗಪಡಿಸುವುದಾಗಿ ಎಚ್ಚರಿಕೆ ನೀಡಿದರು.

ಇದೇ ವೇಳೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕಾಗಿ ಮೀಸಲಾದ ಅನುದಾನದ ಬಳಕೆಯ ಕುರಿತು ಅಸಮಾಧಾನ ವ್ಯಕ್ತಪಡಿಸಿದ ಅವರು, ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಸುಮಾರು 40 ಸಾವಿರದಿಂದ 45 ಸಾವಿರ ಕೋಟಿ ರೂಪಾಯಿಗಳ ಅನುದಾನ ದುರುಪಯೋಗವಾಗಿದೆ ಎಂದು ಆರೋಪಿಸಿದರು. ಕಳಪೆ ಕಾಮಗಾರಿಗಳ ಮೂಲಕ ಸಾರ್ವಜನಿಕ ಹಣ ಲೂಟಿ ಮಾಡಲಾಗುತ್ತಿದ್ದು, ಈ ಕುರಿತು ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ತಾವು ವೈಯಕ್ತಿಕ ಹಿತಾಸಕ್ತಿಗಾಗಿ ಅಲ್ಲ, ಸಾರ್ವಜನಿಕ ಹಿತ ಹಾಗೂ ಬಡವರ ಪರವಾಗಿ ಹೋರಾಟ ನಡೆಸುತ್ತಿದ್ದೇನೆ ಎಂದು ಸ್ಪಷ್ಟಪಡಿಸಿದ ಸಂಪಂಗಿ, ಕೆಲವು ಮಾಧ್ಯಮಗಳು ಅಕ್ರಮಗಳಿಗೆ ಬೆಂಬಲವಾಗಿ ಸತ್ಯಾಂಶವನ್ನು ಮರೆಮಾಚಿ ಜನರನ್ನು ದಾರಿತಪ್ಪಿಸುತ್ತಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಗ್ರಾಮಾಂತರ ಅಧ್ಯಕ್ಷ ಲಕ್ಷ್ಮೀ ನಾರಾಯಣ್, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಸುನೀಲ್, ಮಂಜುನಾಥ್, ಮಾಜಿ ಸದಸ್ಯ ನಾರಾಯಣಸ್ವಾಮಿ, ಜೆಸಿಬಿ ಮುನಿಯಪ್ಪ, ಮುಖಂಡರಾದ ಧನುಷ್, ಪುರುಷೋತ್ತಮ್, ಪ್ರಸಾದ್ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

23/06/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಡಾ.ರಾಮ್‌ಪ್ರಸಾತ್ ಮನೋಹರ್ ಅಧಿಕಾರ ಸ್ವೀಕಾರ



ಬೆಂಗಳೂರು

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕೆಪಿಟಿಸಿಎಲ್) ವ್ಯವಸ್ಥಾಪಕ ನಿರ್ದೇಶಕರಾಗಿರುವ ಹಿರಿಯ ಐಎಎಸ್ ಅಧಿಕಾರಿ ಡಾ. ರಾಮ್ ಪ್ರಸಾತ್ ಮನೋಹರ್ ಅವರು ಪ್ರವಾಸೋದ್ಯಮ ಇಲಾಖೆಯ ಆಯುಕ್ತರಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.

ರಾಜ್ಯ ಸರ್ಕಾರದ ಆದೇಶದಂತೆ, ಪ್ರಸ್ತುತ ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿರುವ ಡಾ. ರಾಮ್ ಪ್ರಸಾತ್ ಮನೋಹರ್ ಅವರಿಗೆ ಪ್ರವಾಸೋದ್ಯಮ ಇಲಾಖೆಯ ಆಯುಕ್ತರ ಹುದ್ದೆಯ ಹೆಚ್ಚುವರಿ ಜವಾಬ್ದಾರಿಯನ್ನು ಸಮವರ್ತಿ ಪ್ರಭಾರದಲ್ಲಿ ನೀಡಲಾಗಿದೆ. ಈ ನೇಮಕಾತಿ ತಕ್ಷಣದಿಂದಲೇ ಜಾರಿಗೆ ಬಂದಿದೆ.

ಆಡಳಿತಾತ್ಮಕ ದಕ್ಷತೆ ಮತ್ತು ಪರಿಣಾಮಕಾರಿ ಕಾರ್ಯಶೈಲಿಯಿಂದ ಗುರುತಿಸಿಕೊಂಡಿರುವ ಡಾ. ರಾಮ್ ಪ್ರಸಾತ್ ಮನೋಹರ್ ಅವರು ಈ ಹಿಂದೆ ಬಳ್ಳಾರಿ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸಿ ಉತ್ತಮ ಆಡಳಿತ ನೀಡಿದ್ದರು. ನಂತರ ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ (ಬಿಡಬ್ಲ್ಯೂಎಸ್‌ಎಸ್‌ಬಿ) ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿ ಗಮನಾರ್ಹ ಸಾಧನೆ ಮಾಡಿದ್ದಾರೆ.

ಪ್ರವಾಸೋದ್ಯಮ ಇಲಾಖೆಯ ಆಯುಕ್ತರಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಡಾ. ರಾಮ್ ಪ್ರಸಾತ್ ಮನೋಹರ್ ಅವರು ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಇಲಾಖೆಯ ಪ್ರಸ್ತುತ ಯೋಜನೆಗಳು, ಅಭಿವೃದ್ಧಿ ಕಾರ್ಯಕ್ರಮಗಳು ಹಾಗೂ ಮುಂದಿನ ಕಾರ್ಯತಂತ್ರಗಳ ಕುರಿತು ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಪ್ರವಾಸೋದ್ಯಮ ಇಲಾಖೆಯ ಹಿರಿಯ ಅಧಿಕಾರಿಗಳು, ಸಿಬ್ಬಂದಿ ವರ್ಗ ಹಾಗೂ ಇಲಾಖೆಯ ಅಧಿಕಾರಿಗಳು ಡಾ. ರಾಮ್ ಪ್ರಸಾತ್ ಮನೋಹರ್ ಅವರನ್ನು ಹೂಗುಚ್ಛ ನೀಡಿ ಆತ್ಮೀಯವಾಗಿ ಸ್ವಾಗತಿಸಿ ಅಭಿನಂದಿಸಿದರು.

ರಾಜ್ಯದ ಪ್ರವಾಸೋದ್ಯಮ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಹೊಸ ಆಯುಕ್ತರ ನೇತೃತ್ವದಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ವೇಗ ಸಿಗುವ ನಿರೀಕ್ಷೆ ವ್ಯಕ್ತವಾಗಿದೆ.

## ‘ಕಳಪೆ ಹಾಲಿನ ಸರಬರಾಜು ಪ್ರಕರಣ ಕಂಡು ಬಂದಲ್ಲಿ ಕ್ರಮ’

ಬೆಂಗಳೂರು

ರಾಜ್ಯದ ಗಡಿ ಜಿಲ್ಲೆಗಳು ಮತ್ತು ಕೆಲವೆಡೆ ಖಾಸಗಿ ಕಂಪನಿಗಳು ಕಳಪೆ ಹಾಲಿನ ಸರಬರಾಜು ಮಾಡುವ ಕುರಿತು ಪ್ರಕರಣಗಳು ಕಂಡು ಬಂದಲ್ಲಿ ಮುಲಾಜಿಲ್ಲದೇ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಯು.ಟಿ.ಖಾದರ್ ಅವರು ಹೇಳಿದರು.

ಆರೋಗ್ಯ ಭವನದ ಮೊದಲನೇ ಮಹಡಿಯಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಫುಡ್ ಸೇಫ್ಟಿ ಸಮಿತಿಯು ಆಹಾರ ಉತ್ಪನ್ನಗಳ ಮೇಲೆ ನಿಗಾ ಇರಿಸಿದೆ. ಹೋಟೆಲ್ ಗಳು, ಮಾಲ್ ಗಳು ಮತ್ತು ರಸ್ತೆ ಬದಿಯಲ್ಲಿರುವ ಅಂಗಡಿಗಳು ಕಬಾಬ್, ಗೋಬಿ ಮಂಚೂರಿ ಇನ್ನಿತರೆ ಕರಿದ ಪದಾರ್ಥಗಳ ಮೇಲೆ ರಾಸಾಯನಿಕ ಬಣ್ಣ ಬೆರೆಸುವ ಬಗ್ಗೆ ದೂರುಗಳು ಬರುತ್ತಿರುವುದನ್ನು ಆಧರಿಸಿ ವರದಿ ಸಿದ್ಧಪಡಿಸುತ್ತಿದೆ. ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಯಾವುದೇ ರೀತಿಯ ಪ್ರಕರಣಗಳನ್ನು ಸರ್ಕಾರ ಸಹಿಸುವುದಿಲ್ಲ. ಬಣ್ಣ ಬಣ್ಣದ ಪಾನೀಯ, ತಿನ್ನುವ ವಸ್ತುಗಳು, ಖಾದ್ಯಗಳು ಕಂಡು ಬಂದಲ್ಲಿ ಉತ್ಪನ್ನ ಮಾಡುವವರ ಮತ್ತು ಮಾರಾಟಗಾರರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.




ಜನೌಷಧಿ ಕೇಂದ್ರಗಳಲ್ಲಿ ಜನರಿಗೆ ಸೂಕ್ತ ಔಷಧಿ, ಮಾತ್ರೆಗಳನ್ನು ವಿತರಿಸಬೇಕು. ಜನರಿಗೆ ವ್ಯತಿರಿಕ್ತವಾಗಿ ಪರಿಣಾಮ ಬೀರುವ ಔಷಧಿಗಳು ಮಾರಾಟ ಮಾಡುವುದು ಕಂಡು ಬಂದಲ್ಲಿ ಅಂತಹ ಕೇಂದ್ರಗಳ ವಿರುದ್ಧವೂ ಕಾನೂನು ಕ್ರಮ ಜರುಗಿಸಲಾಗುತ್ತಿದೆ. ಜನರ ಆರೋಗ್ಯದ ಮೇಲೆ ಯಾರೇ ಆಗಲಿ ದುಷ್ಪರಿಣಾಮ ಬೀರುವಂತಹ ಔಷಧಿಗಳನ್ನು ನೀಡಿದರೆ ಅಂತಹ ಕೇಂದ್ರಗಳನ್ನು ಮುಚ್ಚಿಸುವುದಾಗಿ ಹೇಳಿದರು.

108-ತುರ್ತು ವಾಹನದ ಕುರಿತು ಮಾತನಾಡಿದ ಸಚಿವರು, ಆರೋಗ್ಯ ಇಲಾಖೆಯಡಿ ತುರ್ತು ವಾಹನಗಳು ಕೆಲಸ ನಿರ್ವಹಿಸುತ್ತಿವೆ. ಚಾಲಕರು, ಆರೋಗ್ಯ ಸಿಬ್ಬಂದಿಗಳ ವೇತನ ಮತ್ತು ಸೌಕರ್ಯಗಳನ್ನು ಒದಗಿಸುವ ಬಗ್ಗೆ ಸಧ್ಯದಲ್ಲಿಯೇ ಅಧಿಕಾರಿಗಳ ಸಭೆ ನಡೆಸುತ್ತೇವೆ. ಅವರ ಸಮಸ್ಯೆಗಳನ್ನು ಅರಿತು ಪರಿಹರಿಸುವ ಕೆಲಸ ಮಾಡುತ್ತೇನೆ. ಪವರ್ ಸ್ಟಾರ್ ಪುನೀತ್ ರಾಜಕುಮಾರ್ ಅವರ ಹೆಸರಿನಲ್ಲಿ ‘ಸಂಜೀವಿನಿ’ ಯೋಜನೆ ಆರಂಭಿಸಿದ್ದು, ಹೃದಯಕ್ಕೆ ಸಂಬಂಧಿಸಿದ ಯಾವುದೇ ರೀತಿಯ ಸಮಸ್ಯೆಗೆ ತುರ್ತಾಗಿ ಇಸಿಜಿ ಯನ್ನು ಉಚಿತವಾಗಿ ಮಾಡಲಾಗುತ್ತದೆ. ಆ ವರದಿಯಲ್ಲಿ ಬಂದ ವೈದ್ಯಕೀಯ ಪರೀಕ್ಷೆಯ ಮುಂದಿನ ವಿಧಾನಗಳ ಬಗ್ಗೆ ವೈದ್ಯರು ಇಂಜೆಕ್ಷನ್ ಹಾಕಿ ನಂತರ ಜಿಲ್ಲಾಸ್ಪತ್ರೆಯಲ್ಲಿ ಉಚಿತವಾಗಿ ಚಿಕಿತ್ಸೆ ಕೊಡಿಸುವ ವ್ಯವಸ್ಥೆ ಜಾರಿಯಲ್ಲಿದೆ. ಸಾರ್ವಜನಿಕರು ಇದರ ಪ್ರಯೋಜನ ಪಡೆದುಕೊಳ್ಳಬೇಕೆಂದರು.

ಜನರು ಆರೋಗ್ಯದ ಬಗ್ಗೆ ಹೆಚ್ಚು ಹೆಚ್ಚು ಜಾಗೃತರಾಗಬೇಕು. ಆರೋಗ್ಯ ಇಲಾಖೆಯಿಂದ ಈ ಕುರಿತು ಆಂದೋಲನ ಮಾಡುವ ಯೋಜನೆ ಇದೆ. ರಾಜ್ಯದಲ್ಲಿ ಆಸ್ಪತ್ರೆಗಳು ಹೆಚ್ಚಾಗಬಾರದೆನ್ನುವುದೇ ನಮ್ಮ ಆಶಯ. ಆರೋಗ್ಯ ವರ್ಧನೆಗಾಗಿ ವಿವಿಧ ಯೋಜನೆಗಳನ್ನು ರೂಪಿಸುವ ಉದ್ದೇಶವಿದೆ.

ಸ್ವಲ್ಪ ಕಾಲಾವಕಾಶ ಬೇಕು. ಯೋಗವೆಂದರೆ ಉತ್ತಮ ಆಹಾರ, ಉತ್ತಮ ಜೀವನ ಶೈಲಿ ಮತ್ತು ಉತ್ತಮ ಪರಿಸರವೂ ಮುಖ್ಯ. ಜನರ ವ್ಯಕ್ತಿತ್ವದಲ್ಲಿ ಎಷ್ಟು ಪರಿಶುದ್ಧ ಬದಲಾವಣೆ ಆಗುತ್ತದೆ ಅದೇ ಪ್ರಮಾಣದಲ್ಲಿ ಆರೋಗ್ಯ ಇಲಾಖೆ ಎಲ್ಲ ರೀತಿಯ ಸಹಕಾರ ನೀಡುತ್ತದೆ ಎಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ರಿತ್ವಿಕ್ ರಂಜನಂ ಪಾಂಡೆ, ಆಯುಕ್ತರಾದ ಗುರುದತ್ತ ಹೆಗಡೆ, ಆಯುಷ್ ಇಲಾಖೆಯ ಆಯುಕ್ತರಾದ ಡಾ.ಸುನೀಲ್ ಪವಾರ್, ಆಕಾಶವಾಣಿ ಕೇಂದ್ರದ ಉಪ ಮಹಾ ನಿರ್ದೇಶಕರಾದ ಕೆ.ಪಿ.ಸಂಜೀವ್ ಮತ್ತಿತರರು ಸುದ್ದಿಗೋಷ್ಠಿಯಲ್ಲಿದ್ದರು.

## ಬೆಂಗಳೂರು ವಿಭಾಗಕ್ಕೆ ದಕ್ಷಿಣ ಪಶ್ಚಿಮ ರೈಲ್ವೆ ಅಂತರ-ಘಟಕ ವಾಲಿಬಾಲ್ ಪ್ರಶಸ್ತಿ

ಹುಬ್ಬಳ್ಳಿ

ದಕ್ಷಿಣ ಪಶ್ಚಿಮ ರೈಲ್ವೆ ಕ್ರೀಡಾ ಸಂಘದ ಆಶ್ರಯದಲ್ಲಿ ಹುಬ್ಬಳ್ಳಿಯ ರೈಲ್ವೆ ಕ್ರೀಡಾಂಗಣದಲ್ಲಿ ಜೂನ್ 19 ಮತ್ತು 20ರಂದು ನಡೆದ ದಕ್ಷಿಣ ಪಶ್ಚಿಮ ರೈಲ್ವೆ ಅಂತರ-ಘಟಕ ವಾಲಿಬಾಲ್ ಚಾಂಪಿಯನ್‌ಶಿಪ್ ಯಶಸ್ವಿಯಾಗಿ ಸಮಾಪ್ತಿಯಾಯಿತು.

ಎರಡು ದಿನಗಳ ಕಾಲ ನಡೆದ ಈ ಕ್ರೀಡಾಕೂಟದಲ್ಲಿ ಬೆಂಗಳೂರು ವಿಭಾಗ, ಮೈಸೂರು ವಿಭಾಗ, ಹುಬ್ಬಳ್ಳಿ ವಿಭಾಗ, ಪ್ರಧಾನ ಕಚೇರಿ, ಹುಬ್ಬಳ್ಳಿ ಕಾರ್ಯಾಗಾರ, ಅಶೋಕಪುರಂ ಕಾರ್ಯಾಗಾರ, ಕೆಜೆಎಂ ಶೆಡ್ ಹಾಗೂ ರೈಲ್ವೆ ಸಂರಕ್ಷಣಾ ಪಡೆ



(ಆರ್‌ಪಿಎಫ್) ಸೇರಿದಂತೆ ಒಟ್ಟು ಎಂಟು ತಂಡಗಳು ಭಾಗವಹಿಸಿ ಕ್ರೀಡಾಸ್ಪರ್ಧೆಗೆ ಮೆರುಗು ತಂದವು. ಲೀಗ್ ಹಾಗೂ ನಾಕೌಟ್ ಹಂತದ ರೋಚಕ ಪಂದ್ಯಗಳ ಬಳಿಕ ಬೆಂಗಳೂರು ವಿಭಾಗ ಮತ್ತು ಮೈಸೂರು ಕಾರ್ಯಾಗಾರ ತಂಡಗಳು ಫೈನಲ್‌ಗೆ ಪ್ರವೇಶಿಸಿದವು.

ಅಂತಿಮ ಹಣಾಹಣಿಯಲ್ಲಿ ಉತ್ತಮ ತಂಡದಾಟ ಮತ್ತು ಹೋರಾಟದ ಮನೋಭಾವ ಪ್ರದರ್ಶಿಸಿದ ಬೆಂಗಳೂರು ವಿಭಾಗ ಚಾಂಪಿಯನ್ ಪಟ್ಟಕ್ಕೇರಿತು. ಮೈಸೂರು ಕಾರ್ಯಾಗಾರ ತಂಡ ರನ್ನರ್-ಅಪ್ ಸ್ಥಾನ ಪಡೆದು ಗಮನ ಸೆಳೆಯಿತು.

ಸಮಾರೋಪ ಸಮಾರಂಭದಲ್ಲಿ ದಕ್ಷಿಣ ಪಶ್ಚಿಮ ರೈಲ್ವೆಯ ಮಹಾಪ್ರಬಂಧಕರಾದ ಪಿ. ಅನಂತ್ ಮುಖ್ಯ ಅತಿಥಿಯಾಗಿ ಭಾಗವಹಿಸಿ, ವಿಜೇತ ಬೆಂಗಳೂರು ವಿಭಾಗಕ್ಕೆ ಚಾಂಪಿಯನ್‌ಶಿಪ್ ಟ್ರೋಫಿ ಹಾಗೂ ರನ್ನರ್-ಅಪ್ ಮೈಸೂರು ಕಾರ್ಯಾಗಾರ ತಂಡಕ್ಕೆ ಟ್ರೋಫಿ ಪ್ರದಾನ ಮಾಡಿದರು. ಈ ಸಂದರ್ಭದಲ್ಲಿ ರೈಲ್ವೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಈ ಚಾಂಪಿಯನ್‌ಶಿಪ್ ದಕ್ಷಿಣ ಪಶ್ಚಿಮ ರೈಲ್ವೆಯ ವಿವಿಧ ಘಟಕಗಳ ನೌಕರರಲ್ಲಿರುವ ಕ್ರೀಡಾ ಪ್ರತಿಭೆ, ತಂಡದ ಒಗ್ಗಟ್ಟು ಹಾಗೂ ಸ್ಪರ್ಧಾತ್ಮಕ ಮನೋಭಾವವನ್ನು ಅನಾವರಣಗೊಳಿಸಿತು. ಪಂದ್ಯಾವಳಿಯು ಕ್ರೀಡಾ ಸ್ಫೂರ್ತಿಯನ್ನು ಉತ್ತೇಜಿಸುವುದರ ಜೊತೆಗೆ ರೈಲ್ವೆ ಕುಟುಂಬದ ಸದಸ್ಯರ ನಡುವೆ ಸೌಹಾರ್ದ ಮತ್ತು ಸಹಕಾರವನ್ನು ಮತ್ತಷ್ಟು ಬಲಪಡಿಸಿತು.

## ‘ಬಿಡದಿ ಯೋಜನೆಯ ಪಿತಾಮಹ ಕುಮಾರಸ್ವಾಮಿ’

ಬೆಂಗಳೂರು

“ಬಿಡದಿಯ ರೈತರು ಒಳ್ಳೆಯವರು, ಅವರನ್ನು ದಾರಿ ತಪ್ಪಿಸಲಾಗುತ್ತಿದೆ. ಈ ಯೋಜನೆಯ ಪಿತಾಮಹ ಕುಮಾರಸ್ವಾಮಿ ಅವರೇ ಅಲ್ಲವೇ? ಇದನ್ನು ಅವರೇ ಒಪ್ಪಿಕೊಂಡಿದ್ದಾರೆ” ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿರುಗೇಟು ನೀಡಿದರು.

ಸಚಿವ ಸಂಪುಟ ಸಭೆಯ ಬಳಿಕ ವಿಧಾನಸೌಧದಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಶನಿವಾರ ಪ್ರತಿಕ್ರಿಯೆ ನೀಡಿದರು. ಸಚಿವ ಸಂಪುಟ ಸಭೆಯಲ್ಲಿ ಬಿಡದಿ ಟೌನ್ ಶಿಪ್ ವಿಚಾರದ ಬಗ್ಗೆ ಚರ್ಚೆ ಮಾಡಲಾಯಿತೇ ಎಂದು ಕೇಳಿದಾಗ, “ಈ ಹಿಂದೆ ಕುಮಾರಸ್ವಾಮಿ ಅವರೇ ರೈತರಿಗೆ ಪರಿಹಾರವಾಗಿ ಅಭಿವೃದ್ಧಿಪಡಿಸಿದ ಭೂಮಿಯಲ್ಲಿ 40% ಕೊಡುತ್ತೇನೆ ಎಂದು ಹೇಳಿದ್ದರು.

ನಾವು ಶೇ.50 ರಷ್ಟು ಭೂಮಿ ನೀಡುವುದಾಗಿ ಹೇಳಿದ್ದೇವೆ. ರೈತರಿಗೆ ಒಂದು ಎಕರೆಗೆ 2.50 ಕೋಟಿ ರೂ. ಪರಿಹಾರ ನೀಡುವ ಕೆಲಸ ಶುಕ್ರವಾರ ಆರಂಭವಾಗಿದೆ” ಎಂದರು.

“ಕುಮಾರಸ್ವಾಮಿ ಅವರು ನೋಟಿಫಿಕೇಷನ್ ಮಾಡಿದ್ದರು. ಯಡಿಯೂರಪ್ಪ ಅವರು ಈ ಯೋಜನೆ ಮುಂದುವರೆಸಿದ್ದರು. ಅದನ್ನು ನಾವು ಇನ್ನಷ್ಟು ಮುಂದಕ್ಕೆ ತೆಗೆದುಕೊಂಡು ಹೋಗುತ್ತಿದ್ದೇವೆಯೇ ಹೊರತು ಹೊಸದಾಗಿ ನಾವೇನೂ ಮಾಡುತ್ತಿಲ್ಲ. ಬಿಡದಿ ಕೈಗಾರಿಕಾ ಪ್ರದೇಶಕ್ಕೆ ಭೂಸ್ವಾಧೀನ ಮಾಡಿದವರು ಯಾರು? ಈಗಿರುವ 9 ಸಾವಿರ ಎಕರೆಯಲ್ಲಿ 1 ಸಾವಿರ ಎಕರೆಯನ್ನು ಬಿಜೆಪಿಯ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರು ಸ್ವಾಧೀನ ಮಾಡಿಕೊಡಲಿಲ್ಲವೇ?” ಎಂದರು.



“ವಿರೋಧ ಪಕ್ಷದವರು ರಾಜಕೀಯಕ್ಕಾಗಿ ವಿರೋಧ ಮಾಡುತ್ತಿದ್ದಾರೆ. ಹೊಸ ಕೈಗಾರಿಕೆಗಳು ಬರಬೇಕು ಎಂದು ಹೇಳುತ್ತಾರೆ. ಕೇಂದ್ರ ಬೃಹತ್ ಕೈಗಾರಿಕಾ ಸಚಿವರೇ ಎಲ್ಲಿಂದ ಜಮೀನು ತೆಗೆದುಕೊಡಲಿ ಎಂದು ಹೇಳಿದ್ದಾರೆ. ಹೀಗಿರುವಾಗ ಬಿಡದಿ ಜಮೀನನ್ನು ಡಿನೋಟಿಫಿಕೇಷನ್ ಮಾಡಿ ಜೈಲಿಗೆ ಹೋಗಲು ನಾನು ಸಿದ್ಧನಿಲ್ಲ” ಎಂದರು.

“ಬಿಡದಿ ಪ್ರದೇಶವನ್ನು ರೆಡ್ ಜೋನ್ ಎಂದು ಕುಮಾರಸ್ವಾಮಿ ಅವರು ಏಕೆ ಘೋಷಣೆ ಮಾಡಿದರು ಎಂದು ಅವರು ಮೊದಲು ತಿಳಿಸಲಿ. ನೋಟಿಫಿಕೇಷನ್ ಏಕೆ ಮಾಡಿದರು ಎಂದು ಉತ್ತರಿಸಲಿ. ಯಡಿಯೂರಪ್ಪ ಅವರು ಏಕೆ ಮುಂದುವರೆಸಿದರು, ಅವರ ಕಾಲದಲ್ಲೇ ಡಿನೋಟಿಫಿಕೇಷನ್ ಮಾಡಲು ಅವರಿಗೆ ಅವಕಾಶವಿತ್ತಲ್ಲವೇ? ಯಾಕೆ ಮಾಡಲಿಲ್ಲ” ಎಂದರು. “ವಿರೋಧ ಪಕ್ಷದವರು ರಾಜಕೀಯ ಮಾಡುತ್ತಿದ್ದಾರೆ. ಆದರೆ ನಾನು ಇದಕ್ಕೆ ಬೇಸರ ಮಾಡಿಕೊಳ್ಳುವುದಿಲ್ಲ. ಶೇ 80 ರಷ್ಟು ರೈತರು ಭೂಮಿ ನೀಡಲು ಮುಂದೆ ಬಂದಿದ್ದಾರೆ. ಬೇರೆಯವರು ಮುಂದೆ ಬರಲಿಲ್ಲ ಎಂದರೆ ನಾನು ಏನು ಮಾಡಲು ಸಾಧ್ಯವಿಲ್ಲ. ನಾವು ಕಾನೂನಿನ ಪ್ರಕಾರ ಹೋಗುತ್ತೇವೆ” ಎಂದು ತಿಳಿಸಿದರು.

’ಕುಮಾರಸ್ವಾಮಿ ಅವರ ರಕ್ತಕ್ರಾಂತಿ ಆಗುತ್ತದೆ ಎನ್ನುವ ಹೇಳಿಕೆಯ ಬಗ್ಗೆ ಕೇಳಿದಾಗ, “ಅವರು ದೊಡ್ಡವರು. ಬೃಹತ್ ಕೈಗಾರಿಕಾ ಸಚಿವರು. ಅವರಿಗೆ ಕೈಗಾರಿಕೆಗಳನ್ನು ತರಬೇಕು ಎನ್ನುವ ಆಸೆಯಿದೆ. ಎಲ್ಲಿಗೆ ಕೈಗಾರಿಕೆಗಳನ್ನು ತರಬೇಕು, ಹೇಗೆ ತರಬೇಕು, ಯಾರ ಜಮೀನಿನಲ್ಲಿ ತರಬೇಕು ಎಂದು ಅವರೇ ಉತ್ತರ ಹೇಳಬೇಕು” ಎಂದರು.



ಮುಂಬೈಯಲ್ಲಿ ಸಂಜೆ ನಡೆದ ಮಹಾರಾಷ್ಟ್ರ ಮಾಜಿ ಸಿಎಂ ಶರದ್ ಪವಾರ್ ಮೊಮ್ಮಗಳು, ಸಂಸದೆ ಶ್ರೀಮತಿ ಸುಪ್ರಿಯಾ ಸುಲೆ ಅವರ ಮಗಳು ರೇವತಿ ಸುಲೆ ಅವರ ವಿವಾಹ ಆರತಕ್ಷತೆಯಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ಪಾಲ್ಗೊಂಡು, ನೂತನ ವಧು-ವರನಿಗೆ ಶುಭ ಕೋರಿದರು.

## ಹಣ ದರೋಡೆ: ಮೂವರ ಬಂಧನ

ಬೆಂಗಳೂರು

ಆನ್‌ಲೈನ್ ಟ್ರೇಡಿಂಗ್ ಆಹೆಸರಿನಲ್ಲಿ ಕೇರಳ ಮೂಲದ ಯುವಕರನ್ನು ಬೆಂಗಳೂರಿಗೆ ಕರೆಸಿ 20 ಲಕ್ಷಕ್ಕೂ ಹೆಚ್ಚು ಹಣ ದೋಚಿದ ಪ್ರಕರಣದಲ್ಲಿ ಸಿಐಡಿ ಇನ್ಸ್‌ಪೆಕ್ಟರ್ ಸೇರಿ ಮೂವರನ್ನು ಪೊಲೀಸರು ಬಂಧಿಸಿದ್ದಾರೆ.

ಬಂಧಿತರನ್ನು ಸಿಐಡಿ ಇನ್ಸ್‌ಪೆಕ್ಟರ್ ಮಹೇಶ್ ಕನಕಗಿರಿ, ಕುಪೇಂದ್ರ ರೆಡ್ಡಿ ಮತ್ತು ವಸಂತ್ ಕುಮಾರ್ ಎಂದು ಗುರುತಿಸಲಾಗಿದೆ. ಮಡಿವಾಳ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಆನ್‌ಲೈನ್ ಟ್ರೇಡಿಂಗ್‌ನಲ್ಲಿ 25 ಲಕ್ಷ ಹೂಡಿಕೆ ಮಾಡಿದರೆ 50 ಲಕ್ಷ ವಾಪಸ್ ಸಿಗುತ್ತದೆ ಎಂದು ಕೇರಳ ಮೂಲದ ಯುವಕರಿಗೆ ಆಮಿಷ ಒಡ್ಡಲಾಗಿತ್ತು. ಇದನ್ನು ನಂಬಿದ ಯುವಕರು 25 ಲಕ್ಷ ಹಣದೊಂದಿಗೆ ಬೆಂಗಳೂರಿನ ಮಡಿವಾಳದ ಸಿಲಿಕಾನ್ ವ್ಯಾಲಿ ಹೋಟೆಲ್‌ಗೆ ಬಂದಿದ್ದರು. ಯುವಕರು ಹೋಟೆಲ್‌ಗೆ ಬಂದ ಮಾಹಿತಿ ಕುಪೇಂದ್ರನಿಗೆ ತಲುಪಿದ ಬಳಿಕ, ಇನ್ಸ್‌ಪೆಕ್ಟರ್ ಜೀಪ್‌ನಲ್ಲಿ ಬಂದ ಕುಪೇಂದ್ರ ಮತ್ತು ಆತನ ಸಹಚರರು ಪೊಲೀಸ್ ಅಧಿಕಾರಿಗಳಂತೆ ನಟಿಸಿ ಹೋಟೆಲ್‌ಗೆ ಪ್ರವೇಶಿಸಿದ್ದಾರೆ.

ಪೊಲೀಸ್ ಗುರುತಿನ ಚೀಟಿ ತೋರಿಸಿ ಯುವಕರಿಗೆ ಬೆದರಿಕೆ ಹಾಕಲಾಗಿದೆ. ನಂತರ ಹಲ್ಲೆ ನಡೆಸಿ 20 ಲಕ್ಷಕ್ಕೂ ಅಧಿಕ ಹಣವನ್ನು ಕಸಿದುಕೊಂಡು ಪರಾರಿಯಾಗಿದ್ದಾರೆ ಎಂದು ಆರೋಪಿಸಲಾಗಿದೆ. ರಾಬರಿ ನಡೆದ ಬಳಿಕ ಕುಪೇಂದ್ರ ಹಣದೊಂದಿಗೆ ಪೊಲೀಸ್ ಜೀಪ್‌ನಲ್ಲಿ ಪರಾರಿಯಾಗಿದ್ದಾನೆ. ಇನ್ನುಳಿದ ಸಹಚರರು ಬೈಕ್‌ನಲ್ಲಿ ಪರಾರಿಯಾಗಿದ್ದಾರೆ ಎನ್ನಲಾಗಿದೆ.

ಘಟನೆ ಬಳಿಕ ಕೇರಳ ಮೂಲದ ಯುವಕರು ಮಡಿವಾಳ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ದೂರು ಆಧರಿಸಿ ತನಿಖೆ ನಡೆಸಿದ ಪೊಲೀಸರು ಮೂವರನ್ನು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ.

## ‘ಅಂತಾರಾಷ್ಟ್ರೀಯ ಯೋಗ ದಿನಾಚರಣೆ-ಗವರ್ನರ್, ಸಿಎಂ ಅವರೇ ಯೋಗದ ಅಂಬಾಸಿಡರ್’

ಬೆಂಗಳೂರು

ಪ್ರತಿವರ್ಷ ಜೂ.21 ರಂದು ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸುತ್ತಿರುವಂತೆ ‘ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ’ ಎನ್ನುವ ಉದ್ಘೋಷದೊಂದಿಗೆ ಈ ಬಾರಿ ‘ಯೋಗ ದಿನಾಚರಣೆ’ ಆಚರಿಸುತ್ತಿದ್ದು ಇದರ ಅಂಬಾಸಿಡರ್ ಆಗಿ ನಮ್ಮ ರಾಜ್ಯದ ಗವರ್ನರ್ ಮತ್ತು ಸಿಎಂ ಅವರೇ ಯೋಗದ ಮಹತ್ವವನ್ನು ರಾಜ್ಯದ ಜನತೆಗೆ ತಿಳಿಸಿಕೊಡಲಿದ್ದಾರೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಯು.ಟಿ.ಖಾದರ್ ಅಭಿಮಾನಪೂರ್ವಕವಾಗಿ ತಿಳಿಸಿದರು.



ಆರೋಗ್ಯ ಭವನದಲ್ಲಿ ಸುದ್ದಿಗೋಷ್ಠಿಯ ಮುನ್ನ ಯೋಗದ ಕುರಿತ ವಿವಿಧ ಮಾಹಿತಿಗಳುಳ್ಳ ಕೈಪಿಡಿ, ಗ್ರಂಥಗಳ ಲೋಕಾರ್ಪಣೆ ಮಾಡಿದ ಬಳಿಕ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ವಿಧಾನಸೌಧದ ಮೆಟ್ಟಿಲುಗಳ ಮೇಲೆ ಬೆಳಿಗ್ಗೆ 7 ಗಂಟೆಗೆ ಆಚರಿಸಲಾಗುತ್ತದೆ. ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಲ್ಹೋಟ್ ಉದ್ಘಾಟಿಸಲಿದ್ದು, ಸಿಎಂ ಡಿ.ಕೆ.ಶಿವಕುಮಾರ್ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ವಿಧಾನಸಭಾಪತಿ ಬಸವರಾಜ ಹೊರಟ್ಟಿ, ವಿಧಾನಸಭಾಧ್ಯಕ್ಷ ರುದ್ರಪ್ಪ ಲಮಾಣಿ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ. ವಿಶೇಷ ಅತಿಥಿಗಳಾಗಿ ಚಂದನವನದ ತಾರೆಯರಾದ ಸುಧಾರಾಣಿ, ವಸಿಷ್ಠ ಸಿಂಹ ಮತ್ತು ಹರಿಪ್ರಿಯ ಭಾಗವಹಿಸಲಿದ್ದು, 40 ನಿಮಿಷಗಳ ಕಾಲ ಯೋಗಾಸನ ಕ್ರಿಯೆ ಜರುಗಲಿದೆ.

ಯೋಗ ಶಿಕ್ಷಕರು, ಯೋಗ ಬಂಧುಗಳು, ಸಾರ್ವಜನಿಕರು ಸೇರಿದಂತೆ 2 ಸಾವಿರಕ್ಕೂ ಅಧಿಕ ಯೋಗ ಸಾಧಕರು ಪಾಲ್ಗೊಳ್ಳಲಿದ್ದಾರೆ. ಇದು ಒಂದೇ ದಿನಕ್ಕೆ ಸೀಮಿತಗೊಳಿಸದೇ ವರ್ಷಪೂರ್ತಿ ಆಚರಿಸಲು ಯೋಜಿಸಲಾಗಿದೆ. ವಿನೂತನ ಕಾರ್ಯಕ್ರಮಗಳ ಮೂಲಕ ಮನೆ-ಮನೆಗೂ ಯೋಗ, ಎಲ್ಲರಿಗೂ ಯೋಗ ಎಂಬ ದೃಷ್ಟಿಯಿಂದ ಸಾಂಕೇತಿಕವಾಗಿ ಒಂದು ದಿನದ ಆಚರಣೆಯನ್ನು ವಿಜೃಂಭಣೆಯಿಂದ ಮಾಡುವುದಲ್ಲದೆ, ಯೋಗೋತ್ಸವವನ್ನು ನಿತ್ಯೋತ್ಸವವಾಗಿ ಆಚರಿಸಲು ಸಂಕಲ್ಪ ಮಾಡಲಾಗಿದೆ. ಗ್ರಾಮೀಣ ಭಾಗದ ಜನರಿಗೆ, ಮಹಿಳೆಯರಿಗೆ, ಮಕ್ಕಳಿಗೆ ಮತ್ತು ವೃದ್ಧರಿಗೆ ವಿಶೇಷ ಯೋಗ ಕಾರ್ಯಕ್ರಮವನ್ನು ನಿತ್ಯವೂ ಅಭ್ಯಾಸ ಮಾಡಲು ಯೋಜಿಸಲಾಗಿದೆ ಎಂದರು.

ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಮತ್ತು ವಿಶೇಷವಾಗಿ ಗ್ರಾಮಾಂತರ ಪ್ರದೇಶಗಳಲ್ಲಿ ವಿಶೇಷ ಕಾರ್ಯಕ್ರಮಗಳ ಮೂಲಕ ಯೋಗದ ಅರಿವನ್ನು ಮೂಡಿಸುವ ವಿಶೇಷ ಪ್ರಯತ್ನ ಮುಂದುವರಿದಿದೆ. ಆಯುಷ್ ಇಲಾಖೆಯು ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ ಘೋಷ ವಾಕ್ಯದಡಿ ಭಾರತ ಸರ್ಕಾರದ ಆಯುಷ್ ಮಂತ್ರಾಲಯದ ಮಾರ್ಗಸೂಚಿಯನ್ವಯ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈಗಾಗಲೇ 100 ದಿನದ ಕ್ಷಣಗಣನೆಯ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಪೂರೈಸಿದ್ದು, 12 ರಾಷ್ಟ್ರೀಯ ಮಟ್ಟದ ಯೋಗ ಸ್ಪರ್ಧೆಗಳ ಕಾರ್ಯಕ್ರಮಗಳನ್ನು ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರಮೈಸೂರಿನ ಸಹಯೋಗದೊಂದಿಗೆ ಅನುಷ್ಠಾನಗೊಳಿಸಿದೆ. ಇದರಲ್ಲಿ 16 ರಾಜ್ಯಗಳ 100ಕ್ಕಿಂತ ಹೆಚ್ಚಿನ ಕಾಲೇಜಿನ ವಿದ್ಯಾರ್ಥಿಗಳು ಪಾಲ್ಗೊಂಡಿದ್ದು, ಸಾಮಾಜಿಕ ಜಾಲತಾಣದ ಮೂಲಕ ವಿಶಿಷ್ಟ ಯೋಗ ಸ್ಪರ್ಧೆಗಳನ್ನು ಆಯೋಜಿಸಿ, ವಿಶೇಷವಾಗಿ ಯುವಜನರನ್ನು ಯೋಗದತ್ತ ಆಕರ್ಷಿಸುವಲ್ಲಿ ಯಶಸ್ವಿಯಾಗಿದೆ ಎಂದರು. 1 ಸಾವಿರ ಸರ್ಕಾರಿ ಶಾಲೆಗಳಲ್ಲಿ ನಿರಂತರವಾಗಿ ಯೋಗವನ್ನು ಪ್ರಚುರ ಪಡಿಸುವ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಿದ್ದು, ಶಾಲಾ ಮಕ್ಕಳಿಗೆ ಯೋಗ, ಕ್ವಿಜ್, ಯೋಗ ರಂಗೋಲಿ, ಯೋಗ ವಾಕ್ಯ, ಯೋಗ ಪ್ರಬಂಧ ಸ್ಪರ್ಧೆ, ಯೋಗ ಚಿತ್ರಪಟ, ಪತಂಜಲಿ ಯೋಗ ಸೂತ್ರ ಪಾರಾಯಣದಂತಹ ಸ್ಪರ್ಧೆಗಳನ್ನು ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದಿಂದ ಏರ್ಪಡಿಸಲಾಗಿದೆ.

## ಟ್ರಂಪ್‌ನಿಂದ ಮೋದಿಗೆ ಭಾರೀ ಮೆಚ್ಚುಗೆ

ವಾಷಿಂಗ್ಟನ್

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು “ಅದ್ಭುತ ನಾಯಕ” ಹಾಗೂ “ತುಂಬಾ ಗಟ್ಟಿಯಾದ ವ್ಯಕ್ತಿ” ಎಂದು ಬಣ್ಣಿಸಿದ್ದು, ಭಾರತ-ಅಮೆರಿಕ ಸಂಬಂಧಗಳು ಹೊಸ ಎತ್ತರಕ್ಕೆ ತಲುಪಿರುವುದಾಗಿ ಹೇಳಿದ್ದಾರೆ. ಇದೇ ವೇಳೆ, ತಾವು ಹೆಚ್ಚು ಮೆಚ್ಚುವ ಜಾಗತಿಕ ನಾಯಕರ ಪಟ್ಟಿಯಲ್ಲಿ ಮೋದಿ ಹಾಗೂ ಚೀನಾ ಅಧ್ಯಕ್ಷ ಷಿ ಜಿನ್‌ಪಿಂಗ್ ಅವರ ಹೆಸರನ್ನು ಉಲ್ಲೇಖಿಸಿ, ಅವರ ನಾಯಕತ್ವ ಮತ್ತು ಪ್ರಭಾವವನ್ನು ಕೊಂಡಾಡಿದ್ದಾರೆ.

ವಿಶೇಷ ಸಂದರ್ಶನದಲ್ಲಿ ಮಾತನಾಡಿದ ಟ್ರಂಪ್, ಮೋದಿ ಅವರ ನಾಯಕತ್ವ, ಭಾರತದ ಬೆಳವಣಿಗೆ, ಜಾಗತಿಕ ಪ್ರಭಾವ ಹಾಗೂ ಭಾರತ-ಅಮೆರಿಕ ವ್ಯಾಪಾರ ಸಂಬಂಧಗಳ ಬಗ್ಗೆ ಮುಕ್ತವಾಗಿ ಅಭಿಪ್ರಾಯ ವ್ಯಕ್ತಪಡಿಸಿದರು.

“ಮೋದಿ ತುಂಬಾ ಉತ್ತಮ ನಾಯಕ. ಭಾರತದಲ್ಲಿ ಉತ್ತಮ ಬೆಳವಣಿಗೆಗಳು ನಡೆಯುತ್ತಿವೆ. ಅವರು ಯುದ್ಧಗಳಿಂದ ದೂರ ಉಳಿಯುತ್ತಾರೆ, ಅದು ಬುದ್ಧಿವಂತಿಕೆಯ ನಡೆ. ಭಾರತವು ವಿಶ್ವದ ಅತಿ ದೊಡ್ಡ ಜನಸಂಖ್ಯೆ ಹೊಂದಿರುವ ದೇಶವಾಗಿದೆ. ಮೋದಿ ನಿಜಕ್ಕೂ ಅದ್ಭುತ ನಾಯಕ,” ಎಂದು ಟ್ರಂಪ್ ಶ್ಲಾಘಿಸಿದರು.

ಜಾಗತಿಕ ರಾಜಕೀಯದ ಪ್ರಭಾವಿ ನಾಯಕರ ಕುರಿತು ಮಾತನಾಡಿದ ಟ್ರಂಪ್, ಮೋದಿ ಹಾಗೂ ಚೀನಾ ಅಧ್ಯಕ್ಷ ಷಿ ಜಿನ್‌ಪಿಂಗ್ ಇಬ್ಬರನ್ನೂ ವಿಶೇಷವಾಗಿ ಉಲ್ಲೇಖಿಸಿದರು.

“ಮೋದಿ ಮತ್ತು ಷಿ ಜಿನ್‌ಪಿಂಗ್ ಅವರಂತಹ ವ್ಯಕ್ತಿತ್ವದ ನಾಯಕರ ಬಗ್ಗೆ ಸಿನಿಮಾ ಮಾಡಬೇಕೆಂದರೆ, ಹಾಲಿವುಡ್‌ನಲ್ಲೂ ಅವರಂತ ವ್ಯಕ್ತಿಯನ್ನು ಹುಡುಕಲು ಸಾಧ್ಯವಾಗುವುದಿಲ್ಲ,” ಎಂದು ಅವರು ಹೇಳಿದರು.

ಇಬ್ಬರೂ ತಮ್ಮ ದೇಶಗಳಲ್ಲಿ ಅಪಾರ ಪ್ರಭಾವ ಹೊಂದಿದ್ದು, ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳುವ ಸಾಮರ್ಥ್ಯ ಹಾಗೂ ಫಲಿತಾಂಶ ನೀಡುವ ನಾಯಕತ್ವದ ಗುಣಗಳಿಂದ ಇತರ ನಾಯಕರಿಗಿಂತ ಭಿನ್ನವಾಗಿ ಕಾಣಿಸುತ್ತಾರೆ ಎಂದು ಟ್ರಂಪ್ ಅಭಿಪ್ರಾಯಪಟ್ಟರು.

ಮೋದಿ ಅವರ ವ್ಯಕ್ತಿತ್ವದ ಕುರಿತು ಮಾತನಾಡಿದ ಟ್ರಂಪ್, “ನಿಜವಾದ ಮೋದಿಯನ್ನು ನಾನು ಈಗ ಹೆಚ್ಚು ಅರ್ಥ ಮಾಡಿಕೊಂಡಿದ್ದೇನೆ. ಅವರು ತುಂಬಾ ಗಟ್ಟಿಯಾದ ವ್ಯಕ್ತಿ. ಹೊರಗೆ ಶಾಂತವಾಗಿ ಕಾಣುತ್ತಾರೆ, ಆದರೆ ಒಳಗೆ ಅತ್ಯಂತ ದೃಢವಾದ ನಾಯಕ,” ಎಂದು ಹೇಳಿದರು.

ಭಾರತದಲ್ಲಿ ಹಿಂದೆ ಆಗಾಗ ನಾಯಕತ್ವ ಬದಲಾವಣೆ ಆಗುತ್ತಿತ್ತು. “ಒಬ್ಬ ನಾಯಕ ಆರು ತಿಂಗಳು, ಮತ್ತೊಬ್ಬ ಒಂದು ವರ್ಷ ಅಧಿಕಾರದಲ್ಲಿರುತ್ತಿದ್ದರು. ಆದರೆ ಮೋದಿ ಹನ್ನೆರಡು ವರ್ಷಕ್ಕೂ ಹೆಚ್ಚು ಕಾಲ ಅಧಿಕಾರದಲ್ಲಿದ್ದು, ದೇಶಕ್ಕೆ ಸ್ಥಿರ ನಾಯಕತ್ವ ನೀಡಿದ್ದಾರೆ,” ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

## ತಿಂಗಳಲ್ಲಿ ಶೌಚಾಲಯ ಕಾಮಗಾರಿ ಪೂರ್ಣಗೊಳಿಸಿ: ಈಶ್ವರಖಂಡ್ರೆ

ಬೆಂಗಳೂರು

ಗ್ರಾಮೀಣ ಪ್ರದೇಶಗಳಲ್ಲಿ ಅಪೂರ್ಣವಾಗಿರುವ ಸಮುದಾಯ ಶೌಚಾಲಯಗಳ ಕಾಮಗಾರಿಯನ್ನು 1 ತಿಂಗಳಲ್ಲಿ ಪೂರ್ಣಗೊಳಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಕೆ.ಆರ್.ಐ.ಡಿ.ಎಲ್. ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಿದ್ದಾರೆ.

ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತದಲ್ಲಿಂದು ಪ್ರಗತಿ ಪರಿಶೀಲನೆ ನಡೆಸಿದ ಅವರು, ಶೌಚಾಲಯ ನಿರ್ಮಾಣ ಕಾಮಗಾರಿಯಲ್ಲಿ ಅನಗತ್ಯ ವಿಳಂಬಕ್ಕೆ ಅವಕಾಶ ನೀಡದಂತೆ ಸೂಚಿಸಿದರು.

ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತ ಕೈಗೊಳ್ಳುವ ಕಾರ್ಯದಲ್ಲಿ ಸೇವೆ, ನಿಷ್ಠೆ ಮತ್ತು ದಕ್ಷತೆಯನ್ನು ಕಾಪಾಡಿಕೊಳ್ಳಿ ಎಂದ ಅವರು, ವಿದ್ಯಾರ್ಥಿ ನಿಲಯ, ಸೇತುವೆ, ರಸ್ತೆ, ಚರಂಡಿ, ಸಮುದಾಯ ಭವನ, ಕ್ರೀಡಾಂಗಣ, ಬಸ್ ನಿಲ್ದಾಣ ಮೊದಲಾದ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು, ದೀರ್ಘಕಾಲ ಬಾಳಿಕೆ ಬರಬೇಕು. ಜನ ಮೆಚ್ಚುಗೆಗೆ ಪಾತ್ರವಾಗಬೇಕು ಎಂದರು.




ನಿಯಮಿತ ಕೈಗೊಳ್ಳುವ ಯಾವುದೇ ಕಾಮಗಾರಿ ಅರ್ಧಕ್ಕೆ ನಿಲ್ಲುವಂತಾಗಬಾರದು, ಆ ಯೋಜನೆಗೆ ಅಗತ್ಯವಾದ ಹಣ, ಅನುಮತಿ ಎಲ್ಲವನ್ನೂ ಖಾತ್ರಿ ಪಡಿಸಿಕೊಂಡು ಕಾಮಗಾರಿ ಆರಂಭಿಸಬೇಕು ಎಂದು ತಿಳಿಸಿದ ಸಚಿವರು, ಇತರ ಇಲಾಖೆಗೆ ಸೇರಿದ ಕಾಮಗಾರಿಗಳು ಅರ್ಧಕ್ಕೆ ನಿಂತಿದ್ದರೆ ಅವರಿಗೆ ಪತ್ರ ಬರೆದು, ಹಣ ಬಿಡುಗಡೆ ಮಾಡಿಸಿ ಕಾಮಗಾರಿ ಪೂರ್ಣಗೊಳಿಸಲು ಕ್ರಮ ವಹಿಸುವಂತೆ ಸೂಚಿಸಿದರು.

ಕೆ.ಆರ್.ಐ.ಡಿ.ಎಲ್.ನಿಂದ ಕೈಗೊಳ್ಳುವ ಎಲ್ಲ ಕಾಮಗಾರಿಗಳ ಗುಣಮಟ್ಟವನ್ನು ಮೂರನೇ ವ್ಯಕ್ತಿಯಿಂದ (ಥರ್ಡ್ ಪಾರ್ಟಿ) ಮೌಲ್ಯಮಾಪನ ಮಾಡಿಸಬೇಕು, 50 ಲಕ್ಷಕ್ಕಿಂತ ಹೆಚ್ಚಿನ ಮೌಲ್ಯದ ಕಾಮಗಾರಿಯನ್ನು ಪ್ರತಿಷ್ಠಿತ ಮೂರನೇ ವ್ಯಕ್ತಿ ಸಂಸ್ಥೆಯಿಂದ ಮಾಡಿಸಬೇಕು ಎಂದು ತಿಳಿಸಿದರು.

ಕೆ.ಆರ್.ಐ.ಡಿ.ಎಲ್.ನಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಹಣಕಾಸು ಇಲಾಖೆಯ ಅನುಮೋದನೆ ಪಡೆದು, ಸ್ಪರ್ಧಾತ್ಮಕ ಪರೀಕ್ಷೆಯ ಮೂಲಕ ನೇಮಕಾತಿ ಮಾಡಿಕೊಳ್ಳುವ ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಹಾಗೂ ಮೌಖಿಕ ಸಂದರ್ಶನ ಇರುವ ಹುದ್ದೆಗಳ ನೇಮಕಾತಿಯನ್ನು ಯುಪಿಎಸ್.ಸಿ.ಗೆ ವಹಿಸುವಂತೆ ಸೂಚಿಸಿದರು.

ಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಸಮೀರ್ ಶುಕ್ಲ, ಕೆ.ಆರ್.ಐ.ಡಿ.ಎಲ್. ವ್ಯವಸ್ಥಾಪಕ ನಿರ್ದೇಶಕ ರಾಜೇಶ್ ಗೌಡ, ಮುಖ್ಯ ಎಂಜಿನಿಯರ್ ವೇಣುಗೋಪಾಲ್ ಮತ್ತಿತರರು ಪಾಲ್ಗೊಂಡಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy